ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 10 2013

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 12 ಸಂಚಿಕೆ : 208
10–2–2025 ಸೋಮವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 208

ದೆಹಲಿ ವಿಧಾನಸಭೆ ಚುನಾವಣೆ ಫಲಿತಾಂಶ

## ಬಿಜೆಪಿ ನಿಯಂತ್ರಿಸುವಲ್ಲಿ ಇಂಡಿಯಾ ಕೂಟ ವಿಫಲ





**ದಾವಣಗೆರೆ :** ಶನಿವಾರದಂದು ದೆಹಲಿ ವಿಧಾನಸಭಾ ಚುನಾವಣೆ ಫಲಿತಾಂಶ ಹೊರಬಂದಿದ್ದು, 27 ವರ್ಷಗಳ ಬಳಿಕ ರಾಷ್ಟ್ರ ರಾಜಧಾನಿಯಲ್ಲಿ ಬಿಜೆಪಿ ಪಕ್ಷವು ಗೆಲುವು ದಾಖಲಿಸಿರುವುದು ತುಂಬಾನೇ ಸಂತೋಷವಾಗಿದೆ. ಈ ಗೆಲುವು ರಾಷ್ಟ್ರಕ್ಕೆ ಒಂದು ಸಂದೇಶವನ್ನು ನೀಡಿದಂತಾಗಿದೆ. ಸನ್ಮಾನ್ಯ ಶ್ರೀ ನರೇಂದ್ರ ಮೋದಿ ಜೀಯವರ ಜನಪ್ರೀಯತೆ, ಆಡಳಿತದ ಕಾರ್ಯವೈಖರಿ, ಜನಪರ ಬಜೆಟ್ ಮಂಡನೆ ಹಾಗೂ ಹಿಂದಿನ ಸರ್ಕಾರದ ಭ್ರಷ್ಟಾಚಾರಗಳು ಇವೆಲ್ಲವೂ ದೆಹಲಿಯ ಮತದಾರರ ಮನಸ್ಸು ಗೆಲ್ಲಲ್ಲು ತುಂಬಾನೆ ಸಹಕಾರಿಯಾಗಿವೆ.

ದೆಹಲಿಯಲ್ಲಿನ ಹಿಂದಿನ ಸರ್ಕಾರ ಹಾಗೂ ಕಾಂಗ್ರೆಸ್ ಪಕ್ಷಗಳು ಉಚಿತ ಗ್ಯಾರಂಟಿಗಳನ್ನು ಘೋಷಿಸಿದ್ದರೂ ಸಹ ದೆಹಲಿಯ ಮತದಾರರು ಯಾವುದೇ ಅಮಿಷಕ್ಕೆ ಒಳಗಾಗದೆ ಬಿಜೆಪಿ ಪಕ್ಷಕ್ಕೆ ಅಧಿಕಾರವನ್ನು ನೀಡಿರುವುದು ಸ್ವಾಗತಾರ್ಹ ಮತ್ತು ರಾಷ್ಟ್ರ ರಾಜಧಾನಿಯಲ್ಲಿ ಪಕ್ಷವನ್ನು ಆಡಳಿತಕ್ಕೆ ತರಲು ಶ್ರಮಿಸಿದಂತಹ ಪ್ರಧಾನಿಗಳಾದ ಸನ್ಮಾನ್ಯ ಶ್ರೀ ನರೇಂದ್ರ ಮೋದಿ ಜೀಯವರಿಗೆ, ಕೇಂದ್ರ ಗೃಹ ಸಚಿವರಾದ ಅಮಿತ್ ಶಾ ಜೀಯವರಿಗೆ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾದ ಜೆ.ಪಿ. ನಡ್ಡಾ ಜೀಯವರಿಗೆ ಅಭಿನಂದನೆಗಳು ಎಂದು ಮಾಜಿ ಕೇಂದ್ರ ಸಚಿವರಾದ ಡಾ. ಜಿ.ಎಂ. ಸಿದ್ದೇಶ್ವರ ಹಾಗೂ ಮುಖಂಡರಾದ ಶ್ರೀಮತಿ ಗಾಯಿತ್ರಿ ಸಿದ್ದೇಶ್ವರರವರು ತಿಳಿಸಿದ್ದಾರೆ.

## ಮುಡಾ ಕೇಸ್ ಬಗ್ಗೆ ಹೈಕೋರ್ಟ್ ತೀರ್ಪು ಸತ್ಯಕ್ಕೆ ಸಂದ ಜಯ: ಮೊಹಮ್ಮದ್ ಜಿಕ್ರಿಯಾ



**ದಾವಣಗೆರೆ:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಸೈಟ್ ಹಂಚಿಕೆ ವಿಚಾರ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯರ ವಿರುದ್ಧದ ಪ್ರಕರಣ ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂಬ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣರ ಅರ್ಜಿ ವಜಾಗೊಳಿಸಿರುವುದು ಸತ್ಯಕ್ಕೆ ಸಂದ ಜಯ ಎಂದು ಜವಾಹರ ಬಾಲ್ ಮಂಚ್ ಜಿಲ್ಲಾಧ್ಯಕ್ಷ ಮೊಹಮ್ಮದ್ ಜಿಕ್ರಿಯಾ ಹೇಳಿದ್ದಾರೆ.

ಹೈಕೋರ್ಟ್ ತೀರ್ಪಿನ ಬಗ್ಗೆ ಪ್ರತಿಕ್ರಿಯೆ ನೀಡಿರುವ ಅವರು, ಸಿಬಿಐಗೆ ವಹಿಸಲು ಹೈಕೋರ್ಟ್ ಸ್ಪಷ್ಟವಾಗಿ ನಿರಾಕರಿಸಿದೆ. ಈ ಮೂಲಕ ಈ ಪ್ರಕರಣದಲ್ಲಿ ಸಿದ್ದರಾಮಯ್ಯರ ಪಾತ್ರ ಇಲ್ಲ ಎಂಬುದು ಸ್ಪಷ್ಟವಾಗಿದೆ. ಬಿಜೆಪಿ ಹಾಗೂ ಜೆಡಿಎಸ್ ನವರು ವಿನಾಕಾರಣ ಆರೋಪ ಮಾಡಿ ಜನರಲ್ಲಿ ತಪ್ಪು ಭಾವನೆ ಮೂಡಿಸಲು ಪ್ರಯತ್ನಿಸಿದರು. ಆದ್ರೆ, ಈಗ ಹೈಕೋರ್ಟ್ ನೀಡಿರುವ ತೀರ್ಪಿನಿಂದ ಬಿಜೆಪಿ – ಜೆಡಿಎಸ್ ಷಡ್ಯಂತ್ರ ಬಯಲಾಗಿದೆ ಎಂದು ಹೇಳಿದ್ದಾರೆ.

ಹಿಂದುಳಿದ ವರ್ಗದ, ಅಹಿಂದ ಜನರ ಮನಮಾನಸದಲ್ಲಿ ಬೇರೂರಿರುವ ಸಿದ್ದರಾಮಯ್ಯರು ಗ್ಯಾರಂಟಿ ಯೋಜನೆಗಳನ್ನು ನೀಡಿದ್ದಾರೆ. ಜನಪ್ರಿಯ ಆಡಳಿತ ನೀಡುತ್ತಿದ್ದಾರೆ. ಮಹಿಳೆಯರು, ಯುವಕರು ಸೇರಿದಂತೆ ಎಲ್ಲಾ ವರ್ಗದವರಿಗೆ ಅನುಕೂಲ ಮಾಡಿಕೊಡುತ್ತಿದ್ದಾರೆ. ಸಿದ್ದರಾಮಯ್ಯರ ಜನಪ್ರಿಯತೆ, ಸಮರ್ಥ ಆಡಳಿತ ಸಹಿಸದೇ ಬಿಜೆಪಿಗರು ಸುಳ್ಳು ಆರೋಪ ಮಾಡಿದ್ದಾರೆ ಎಂಬುದು ಹೈಕೋರ್ಟ್ ತೀರ್ಪಿನಿಂದ ಸಾಬೀತಾಗಿದೆ ಎಂದು ಹೇಳಿದ್ದಾರೆ.

## ಮಂಡ್ಯ: ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರ, ಆರೋಪಿಗೆ 20 ವರ್ಷಗಳ ಜೈಲು ಶಿಕ್ಷೆ!

**ಮಂಡ್ಯ:** ಅಪ್ರಾಪ್ತ ಬಾಲಕಿಗೆ ಆಮಿಷ ಒಡ್ಡಿ ಅತ್ಯಾಚಾರ ಎಸಗಿದ ಆರೋಪಿಗೆ ಸ್ಥಳೀಯ ನ್ಯಾಯಾಲಯ ಶನಿವಾರ 20 ವರ್ಷ ಜೈಲು ಶಿಕ್ಷೆ ವಿಧಿಸಿದೆ.

ಪೋಕ್ಸೋ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಬಿ.ದಿಲೀಪ್ ಕುಮಾರ್ ಅವರು ಈ ಆದೇಶ ಹೊರಡಿಸಿದ್ದಾರೆ. ಬೆಳ್ಳೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿತ್ತು.

ಪೋಕ್ಸೊ ಕಾಯ್ದೆಯಡಿ ನ್ಯಾಯಾಲಯ ಆರೋಪಿಗೆ 20 ವರ್ಷ ಜೈಲು ಶಿಕ್ಷೆ ಹಾಗೂ 50 ಸಾವಿರ ದಂಡ ವಿಧಿಸಿದೆ. ಸಂತ್ರಸ್ತೆಗೆ 50,000 ರೂಪಾಯಿ ಪರಿಹಾರ ನೀಡುವಂತೆ ಆದೇಶಿಸಿದೆ.

ಆರೋಪಿ 2019ರಲ್ಲಿ ಆಮಿಷವೊಡ್ಡುವ ಮೂಲಕ 17 ವರ್ಷದ ಸಂತ್ರಸ್ತೆ ಮೇಲೆ ಅತ್ಯಾಚಾರವೆಸಗಿದ್ದ. ಬಳಿಕ ಆಕೆ ಗರ್ಭಿಣಿಯಾಗಿದ್ದಳು. ಪೊಲೀಸರು ಆರೋಪಿ ವಿರುದ್ಧ ಪೋಕ್ಸೊ ಪ್ರಕರಣ ದಾಖಲಿಸಿಕೊಂಡು, ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

## ಯುವಸಮೂಹ ಹಠಾತ್ ಸಾವು: ತನಿಖೆಗೆ ಸಮಿತಿ ರಚನೆ

**ಬೆಂಗಳೂರು:** ಯುವಜನತೆಯಲ್ಲಿ ಇತ್ತೀಚಿನ ದಿನಗಳಲ್ಲಿ ಕಂಡುಬರುತ್ತಿರುವ ಹಠಾತ್ ಸಾವು ಪ್ರಕರಣಗಳನ್ನು ಗಂಭೀರವಾಗಿ ರಾಜ್ಯ ಸರ್ಕಾರ ಈ ಬಗ್ಗೆ ತನಿಖೆ ನಡೆಸಲು ತಜ್ಞರ ಸಮಿತಿಯೊಂದನ್ನು ರಚಿಸಿದೆ. ಕೊವಿಡ್ ಅಥವಾ ಕೊವಿಡ್ ಲಸಿಕೆಯ ಅಡ್ಡಪರಿಣಾಮದಿಂದ ಹಠಾತ್ ಸಾವಿಗೀಡಾದವರ ಬಗ್ಗೆ ಅಧ್ಯಯನ ನಡೆಸಿ, ಮುಂದೆ ಇಂತಹ ಸಾವುಗಳು ಸಂಭವಿಸದಂತೆ ತಡೆಯುವ ಉದ್ದೇಶದಿಂದ ಸಮರ್ಪಕ ಸಂಶೋಧನೆ ನಡೆಸಲು ತಜ್ಞರು ಹಾಗೂ ವಿಜ್ಞಾನಿಗಳನ್ನು ಒಳಗೊಂಡ ಒಂದು ಸಮಿತಿ ರಚನೆಗೆ ನಿರ್ಧರಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಮಕ್ಕಳಲ್ಲಿ, ಯುವ ಸಮೂಹದಲ್ಲೂ ಹೃದಯಾಘಾತದಿಂದ ದಿಢೀರ್ ಸಾವುಗಳಾಗುತ್ತಿದ್ದು ಇದರ ಬಗ್ಗೆ ತಜ್ಞರ ಸಮಿತಿ ರಚಿಸುವಂತೆ ಹಿರಿಯ ಪತ್ರಕರ್ತ ರಾಜಾರಾಂ ತಲ್ಲೂರು ಪತ್ರ ಬರೆದಿದ್ದರು.

# ಕಾಂಗ್ರೆಸ್‌ನ ಕೈ ಯಾರೇ ಹಿಡಿದರೂ ಅವರ ಅಂತ್ಯ ಅನಿವಾರ್ಯ

## ಇಂಡಿ ಮೈತ್ರಿಕೂಟಕ್ಕೆ ಪ್ರಧಾನಿ ಮೋದಿ ಬಿಗ್ ಮೆಸೆಜ್

**ಹೊಸದಿಲ್ಲಿ:** 2025ರ ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ತಮ್ಮ ಭಾರತೀಯ ಜನತಾ ಪಕ್ಷದ ಗೆಲುವನ್ನು ಸಂಭ್ರಮಿಸುತ್ತಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ, ನಿನ್ನೆ(ಫೆ.8–ಶನಿವಾರ) ಬಿಜೆಪಿ ಕೇಂದ್ರ ಕಚೇರಿಯಲ್ಲಿ ಮಾಡಿದ ತಮ್ಮ ಭಾಷಣದಲ್ಲಿ ಕಾಂಗ್ರೆಸ್ ವಿರುದ್ಧ ತೀವ್ರ ಟೀಕಾಪ್ರಹಾರ ಮಾಡಿದ್ದಾರೆ.

ಕಾಂಗ್ರೆಸ್ ತನ್ನ ಮಿತ್ರಪಕ್ಷಗಳಿಂದ ಮತದಾರರನ್ನು ಕದಿಯುತ್ತಿದ್ದು, ಒಂದಾದ ಮೇಲೊಂದರಂತೆ ತನ್ನ ಎಲ್ಲಾ ಮಿತ್ರಪಕ್ಷಗಳನ್ನು ನುಂಗಿ ಹಾಕುತ್ತಿದೆ. ಇಂಡಿ ಮೈತ್ರಿಕೂಟದ ಮಿತ್ರಪಕ್ಷಗಳ ಅಸ್ತಿತ್ವವನ್ನು ನಾಶಪಡಿಸುವುದೇ ಕಾಂಗ್ರೆಸ್ ಗುರಿಯಾಗಿದೆ.." ಎಂದು ಪ್ರಧಾನಿ ಮೋದಿ ಗಂಭೀರ ಆರೋಪ ಮಾಡಿದ್ದಾರೆ



ಕಾಂಗ್ರೆಸ್ ಒಂದು ಪರಾವಲಂಬಿ ಪಕ್ಷ. ದೆಹಲಿಯಲ್ಲಿ ಸತತ ಆರು ಪ್ರಮುಖ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷ ಒಂದೇ ಒಂದು ಸ್ಥಾನವನ್ನು ಗೆಲ್ಲಲು ವಿಫಲವಾಗಿದೆ. ಕಳೆದ ಮೂರು ವಿಧಾನಸಭೆ ಮತ್ತು ಮೂರು ಲೋಕಸಭೆ ಚುನಾವಣೆಗಳಲ್ಲಿ ಆ ಪಕ್ಷ ದೆಹಲಿಯಲ್ಲಿ ಶೂನ್ಯ ಸ್ಥಾನಗಳನ್ನು ಗೆದ್ದಿದೆ.." ಎಂದು ಪ್ರಧಾನಿ ಮೋದಿ ಇದೇ ವೇಳೆ ವ್ಯಂಗ್ಯವಾಡಿದರು.

ನಾನು ಮೊದಲೇ ಹೇಳಿದ್ದೆ. ಕಾಂಗ್ರೆಸ್ ಪರಾವಲಂಬಿ ಪಕ್ಷ.ತನ್ನರಾಜಕೀಯಅಸ್ತಿತ್ವಡೋಲಾಯಮಾನವಾದಾಗ ಅದು ಅನ್ಯ ಪಕ್ಷಗಳೊಂದಿಗೆ ಸೇರಿ ಮೈತ್ರಿಕೂಟ ರಚಿಸುತ್ತದೆ. ಆ ಬಳಿಕ ಮಿತ್ರ ಪಕ್ಷಗಳ ರಾಜಕೀಯ ಅಜೆಂಡಾವನ್ನು ಕದ್ದು ಆ ಪಕ್ಷಗಳ ಮತದಾರರನ್ನು ಕಾಂಗ್ರೆಸ್ ಟಾರ್ಗೆಟ್ ಮಾಡುತ್ತದೆ. ಉತ್ತರ ಪ್ರದೇಶದಲ್ಲಿ ಸಮಾಜವಾದಿ ಪಕ್ಷ ಮತ್ತು ಬಹುಜನ ಸಮಾಜ ಪಕ್ಷದ ಮತದಾರರನ್ನು ಟಾರ್ಗೆಟ್ ಮಾಡಿರುವುದು ನಮಗೆಲ್ಲಾ ತಿಳಿದಿದೆ.." ಎಂದು ಪ್ರಧಾನಿ ಮೋದಿ ಹರಿಹಾಯ್ದರು.

ತಮಿಳುನಾಡು, ಪಶ್ಚಿಮ ಬಂಗಾಳ ಮತ್ತು ಜಮ್ಮು ಮತ್ತು ಕಾಶ್ಮೀರದಲ್ಲೂ ಕಾಂಗ್ರೆಸ್ ಇದೇ ಕೆಲಸ ಮಾಡುತ್ತಿದೆ. ಅಂತಿಮವಾಗಿ ತನ್ನ ಮಿತ್ರಪಕ್ಷಗಳನ್ನು ಮುಗಿಸುವುದೇ ಕಾಂಗ್ರೆಸ್‌ನ ಏಕೈಕ ಉದ್ದೇಶವಾಗಿರುತ್ತದೆ. ಕಾಂಗ್ರೆಸ್‌ನ ಕೈಗಳನ್ನು ಯಾರೇ ಹಿಡಿದರೂ ಅವರ ಅಂತ್ಯ ಅನಿವಾರ್ಯ.." ಎಂದು ಪ್ರಧಾನಿ ಮೋದಿ ಇದೇ ವೇಳೆ ಮಾರ್ಮಿಕವಾಗಿ ಹೇಳಿದರು.

ಕಾಂಗ್ರೆಸ್‌ನ ಕೈ ಹಿಡಿದವರು ನಾಶವಾಗುತ್ತಿದ್ದಾರೆ. ಏಕೆಂದರೆ ಅದು ಸ್ವಾತಂತ್ರ್ಯದ ಮೊದಲು ಇದ್ದ ಕಾಂಗ್ರೆಸ್ ಪಕ್ಷ ಅಲ್ಲ. ಇಂದು ಅದು ನಗರ ನಕ್ಸಲ್ ರಾಜಕೀಯ ಮಾಡುತ್ತಿದೆ. ಅವರು ದೇಶದಲ್ಲಿ ಅರಾಜಕತೆಯನ್ನು ತರಲು ಬಯಸುತ್ತಾರೆ.." ಎಂದು ಪ್ರಧಾನಿ ಮೋದಿ ಗಂಭೀರ ಆರೋಪ ಮಾಡಿದರು.

ಕುಕ್ಕವಾಡ ಗ್ರಾಮದ ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಚಾಲನೆ

## ಶಿಕ್ಷಣದಿಂದ ಮಾತ್ರ ಮನುಷ್ಯನ ಜೀವನ ಸಾರ್ಥಕ

### ಉದ್ಯಮಿ ಎಸ್.ಎಸ್.ಗಣೇಶ್



**ದಾವಣಗೆರೆ:** ಪ್ರತಿಯೊಬ್ಬರ ಜೀವನ ಪರಿಪೂರ್ಣತೆ ಹೊಂದಬೇಕಾದರೆ ಅದು ಶಿಕ್ಷಣದಿಂದ ಮಾತ್ರ ಸಾಧ್ಯವಾಗಲಿದೆ ಎಂಬುದನ್ನು ಅರಿತು ಪ್ರತಿಯೊಬ್ಬರು ಶಿಕ್ಷಣ ಪಡೆಯಲು ಮುಂದಾಗಬೇಕೆಂದು ದಾವಣಗೆರೆ ಷುಗರ್ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾದ ಎಸ್.ಎಸ್.ಗಣೇಶ್ ಅವರು ಕರೆ ನೀಡಿದರು.

ಅವರಿಂದು ದಾವಣಗೆರೆ ತಾಲ್ಲೂಕಿನ ಕುಕ್ಕವಾಡ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯ ಶಾಲಾ ಆವರಣದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಹಮ್ಮಿಕೊಂಡಿದ್ದ ಕರ್ನಾಟಕ ಪಬ್ಲಿಕ್ ಶಾಲೆಯ ನೂತನ ಕೊಠಡಿಗಳ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೇರವೇರಿಸಿ ಮಾತನಾಡಿದರು.

ಶಿಕ್ಷಣ ನಮ್ಮನ್ನು ವಿನಯವಂತರನ್ನಾಗಿ ಮಾಡುತ್ತದೆ. ಶಿಕ್ಷಣವು ಜಾಗೃತಿ ಮೂಡಿಸುತ್ತದೆ ಮತ್ತು ನಮ್ಮ ಪರಿಧಿಯನ್ನು ವಿಸ್ತರಿಸುತ್ತದೆ. ನಾವು ನಮ್ಮ ಬಗ್ಗೆ, ಸಮಾಜ ಮತ್ತು ನಮ್ಮನ್ನು ಸುತ್ತುವರೆದಿರುವ ಮತ್ತು ನಮ್ಮ ಜೀವನದ ಮೇಲೆ ಪರಿಣಾಮ ಬೀರುವ ಎಲ್ಲದರ ಬಗ್ಗೆ ಹೆಚ್ಚು ಜಾಗೃತರಾಗುತ್ತೇವೆ ಎಂಬುದನ್ನು ನಾವು ಅರಿತು ಶಿಕ್ಷಣವಂತರಾಗಲು ಪ್ರಯತ್ನಿಸಬೇಕು ಎಂದರು.

ಈ ಹಿಂದೆ ಎಲ್ಲರಿಗೂ ಶಿಕ್ಷಣ ದೊರೆಯುತ್ತಿರಲಿಲ್ಲ. ಆದರೆ ಇಂದು ಸರ್ಕಾರವೇ ಕಡ್ಡಾಯ ಶಿಕ್ಷಣ ಜಾರಿಗೆ ತಂದಿದ್ದು, ಇದರಿಂದ ಎಷ್ಟೋ ಬಡವರ ಮಕ್ಕಳು ಶಿಕ್ಷಣ ಪಡೆದು ಉನ್ನತ ಸ್ಥಾನಗಳನ್ನು ಅಲಂಕರಿಸಿದ್ದಾರೆ ಎಂದ ಅವರು ತಾವು ಶಿಕ್ಷಣ ಪಡೆದ ಬಗ್ಗೆ ವಿವರವಾಗಿ ತಿಳಿಸಿದರು.

ಇಂದು ನಮ್ಮ ತಂದೆಯವರು ಈ ಕಾರ್ಯಕ್ರಮ ನೇರವೇರಿಸಬೇಕಾಗಿತ್ತು. ಆದರೆ ಅವರು ಕಾರಣಾಂತರಗಳಿಂದ ಬಾರದ ಕಾರಣ ನನಗೆ ಈ ಸುದೈವ ಬಂದಿದ್ದು, ಈ ಗ್ರಾಮಕ್ಕೆ ನಮ್ಮ ತಂದೆಯವರ ಕೊಡುಗೆ ಸಾಕ್ಷಿದೆ ಎಂದು ತಿಳಿಸಿದ ಅವರು ಸದಾ ಜನರ ಸಂಕಷ್ಟಕ್ಕೆ ಸ್ಪಂದಿಸಿ ಅಭಿವೃದ್ಧಿ ಪರ ಕೆಲಸ ಮಾಡುವವರನ್ನು ಬೆಂಬಲಿಸಬೇಕು ಎಂದು ಮಾರ್ಮಿಕವಾಗಿ ನುಡಿದರು.

ಗ್ರಾಮದ ಹಿರಿಯ ಮುಖಂಡ ಡಿ.ಮಲ್ಲೇಶಪ್ಪನವರು ಮಾತನಾಡಿ ಶಾಮನೂರು ಶಿವಶಂಕರಪ್ಪನವರು ಈ ಭಾಗದ ಶಾಸಕರಾದ ನಂತರ ಗ್ರಾಮದ ಅಭಿವೃದ್ಧಿಗೆ ಸಾಕಷ್ಟು ಅನುದಾನ ನೀಡಿದ್ದಾರೆ. ಅವರು ಅನುದಾನ ನೀಡಲು ನಮಗೆ ಯಾವಾಗಲೂ ಬೆಂಬಲವಾಗಿ ಎಸ್.ಎಸ್.ಗಣೇಶ್ ಅವರು ನೀಂತಿದ್ದಾರೆ ಎಂದು ಉದಾಹರಣೆ ಸಮೇತ ವಿವರಿಸಿದರು.

ದಾವಣಗೆರೆ ತಾಲ್ಲೂಕು ಮಾಜಿ ಸದಸ್ಯ ಜಿ.ಎಂ.ರುದ್ರೇಗೌಡ ಮಾತನಾಡಿ ಶಾಸಕರಾದ ಶಾಮನೂರು ಶಿವಶಂಕರಪ್ಪನವರು ಸದಾ ಅಭಿವೃದ್ಧಿ ಬಗ್ಗೆ ಚಿಂತನೆ ನಡೆಸುತ್ತಾರೆ ಎಂಬುದಕ್ಕೆ ನಮ್ಮ ಗ್ರಾಮಕ್ಕೆ ಅವರು ನೀಡಿದ ಕೊಡುಗೆಯೇ ಸಾಕ್ಷಿ ಎಂದರು.

ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ಶಿವಮೂರ್ತಿ, ಗ್ರಾಮದ ಮುಖಂಡರುಗಳಾದ ಅರವಿಂದ್, ಪ್ರವೀಣ್, ಜಗದೀಶ್, ರಾಜಶೇಖರಪ್ಪ, ಶಂಕರ್, ಲಿಂಗರಾಜ್, ಗುತ್ತಿಗೆದಾರರು ಹಾಗೂ ಮತ್ತಿತರರಿದ್ದರು.

## ಯತ್ನಾಳ್ ಒಮ್ಮೆ ಸಿಎಂ ಆಗಲಿ

### ಬಾಡದ ಆನಂದರಾಜ್



**ದಾವಣಗೆರೆ:** ಭ್ರಷ್ಟಾಚಾರ ರಹಿತ ಮತ್ತು ಸ್ವಾಭಿಮಾನಯುತ ಆಡಳಿತಕ್ಕಾಗಿ ರಾಜ್ಯದಲ್ಲಿ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ಅಂತವರು ಮುಖ್ಯಮಂತ್ರಿಯಾಗಬೇಕೆಂದು ದಾವಣಗೆರೆ ಶೋಷಿತ ವರ್ಗಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಬಾಡದ ಆನಂದರಾಜ್ ಹೇಳಿದರು.

ನಗರದ ಜಿಎಂಐಟಿ ಅತಿಥಿ ಗೃಹದಲ್ಲಿ ಯತ್ನಾಳ್ ಅವರನ್ನ ಆತ್ಮೀಯವಾಗಿ ಸನ್ಮಾನಿಸಿ ಮಾತನಾಡಿ, ಈ ರಾಜ್ಯದಲ್ಲಿ ಮುಲಾಜಿಲ್ಲದೆ ನಿರ್ಧಾರ ತೆಗೆದುಕೊಳ್ಳುವಂತಹ ಪ್ರಧಾನಿ ನರೇಂದ್ರ ಮೋದಿ, ಯುಪಿ ಮುಖ್ಯಮಂತ್ರಿ ಯೋಗಿಯಂತಿರುವ ರಾಜ್ಯದ ಫೈರ್ ಬ್ರಾಂಡ್ ಎಂದೇ ಹೆಸರಾಗಿರುವ ಶಾಸಕ ಬಸನಗೌಡ ಯತ್ನಾಳ್ ಅಂತವರು ರಾಜ್ಯದ ಮುಖ್ಯಮಂತ್ರಿಯಾದರೆ ಭ್ರಷ್ಟಾಚಾರ, ವಂಶಾಡಳಿತ ರಾಜಕಾರಣ ಮತ್ತು ಹೊಂದಾಣಿಕೆ ರಾಜಕಾರಣಕ್ಕೆ ತಿಲಾಂಜಲಿಯಿಟ್ಟು, ರಾಮರಾಜ್ಯದ ಕನಸು ನನಸಾಗುತ್ತದೆ ಎಂದು ಅಭಿಪ್ರಾಯಿಸಿದರು.

ಸಿಎಂ.ಮಾಡಲು ಮದ್ಯಕರ್ನಾಟಕದ ಬಿಜೆಪಿ ಹಿರಿಯ ಮುಖಂಡ ಹಾಗೂ ಮಾಜಿ ಕೇಂದ್ರ ಸಚಿವ ಡಾ.ಜಿಎಂ.ಸಿದ್ದೇಶ್ವರ ಅವರ ಬೆಂಬಲ ಯತ್ನಾಳ್‌ಗೆ ಆನೆ ಬಲ ಸಿಕ್ಕಂತಾಗಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಕೇಂದ್ರ ಸಚಿವ ಡಾ.ಜಿಎಂ.ಸಿದ್ದೇಶ್ವರ, ರಾಯಚೂರು ಮಾಜಿ ಸಂಸದ ಭೀಮನಾಯ್ಕ್, ನಿಕಟಪೂರ್ವ ಬಿಜೆಪಿ ಜಿಲ್ಲಾಧ್ಯಕ್ಷ ವಿರೇಶ್ ಹನಗವಾಡಿ, ಮಾಜಿ ಪ್ರಧಾನ ಕಾರ್ಯದರ್ಶಿ ಬಿ. ಎಸ್. ಜಗದೀಶ್, ಬಿಜೆಪಿ ಯುವನಾಯಕ ಎಲ್ ಡಿ. ರವಿ ದಾಗಿಕಟ್ಟೆ, ನಾಗರಾಜ್ ನಿಲೋಗಲ್ಲ, ಪ್ರಸನ್ನಕುಮಾರ್ ಮತ್ತಿತರರಿದ್ದರು.

## 27 ವರ್ಷಗಳ ಬಳಿಕ ಬಿಜೆಪಿಗೆ ದೆಹಲಿ ಗದ್ದುಗೆ: ರಾಜ್ಯ ಕಾಂಗ್ರೆಸ್‌ಗೆ ಎಚ್ಚರಿಕೆಯ ಕರೆಗಂಟೆ

**ಬೆಂಗಳೂರು:** ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯ ಅತ್ಯಾಕರ್ಷಕ ಗೆಲುವು ಕರ್ನಾಟಕದ ರಾಜಕೀಯದ ಮೇಲೆ ಪ್ರಭಾವ ಬೀರುವ ಸಾಧ್ಯತೆಯಿದೆ. ರಾಜ್ಯ ಬಿಜೆಪಿಯಲ್ಲಿ ಭುಗಿಲೆದ್ದಿರುವ ಬಣ ರಾಜಕೀಯವನ್ನು ತಣ್ಣಗಾಗಿಸಲು ದೆಹಲಿ ಫಲಿತಾಂಶ ಸಹಾಯ ಮಾಡುವ ಸಾಧ್ಯತೆಯಿದೆ.

ಇದರ ಜೊತೆ ಜೊತೆಗೆ ರಾಜ್ಯ ಕಾಂಗ್ರೆಸ್ ಪಾಲಿಗೆ ಇದು ಎಚ್ಚರಿಕೆಯ ಗಂಟೆಯಾಗಿದೆ ಎಂದು ಸಹ ಹೇಳಲಾಗುತ್ತಿದೆ. ಕಲ್ಯಾಣ ಯೋಜನೆಗಳು, ವಿಶೇಷವಾಗಿ ಖಾತರಿಗಳು, ಆಡಳಿತ ವಿರೋಧಿ ಹಾಗೂ ಭ್ರಷ್ಟಾಚಾರದ ವಿರುದ್ಧ ಕೆಲಸ ಮಾಡುವುದಿಲ್ಲ ಎಂಬ ಸಂದೇಶವನ್ನು ಫಲಿತಾಂಶಗಳು ರವಾನಿಸಿವೆ. ಖಾತರಿ ಯೋಜನೆಗಳನ್ನು ಎಎಪಿ ತನ್ನ ಟ್ರಂಪ್ ಕಾರ್ಡ್ ಗಳನ್ನಾಗಿ ಬಳಸಿಕೊಂಡಿತ್ತು.

ಪಕ್ಷದಲ್ಲಿನ ಗುಂಪುಗಾರಿಕೆಯಿಂದ ಬೇಸತ್ತಿರುವ ಬಿಜೆಪಿ ಕಾರ್ಯಕರ್ತರಿಗೆ ಈ ಗೆಲುವು ನೈತಿಕ ಸ್ಥೈರ್ಯ ತುಂಬಬೇಕು. ಈಗ, ಹೈಕಮಾಂಡ್ ಸೂಚನೆಗಳನ್ನು ಅನುಸರಿಸುವಂತೆ ಭಿನ್ನ ಬಣಗಳಿಗೆ ಸೂಚಿಸಬೇಕು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ರಾಜ್ಯಾಧ್ಯಕ್ಷ ಸ್ಥಾನದ ಸಮಸ್ಯೆಯನ್ನು ಫೆಬ್ರವರಿ 20 ರೊಳಗೆ ಪರಿಹರಿಸಲಾಗುವುದು ಎಂದು ಹೇಳಿದ್ದರೂ, ಫೆಬ್ರವರಿ 15 ರೊಳಗೆ ಹೈಕಮಾಂಡ್ ನಿರ್ಧರಿಸುತ್ತದೆ ಎಂದು ಮೂಲಗಳು ತಿಳಿಸಿವೆ.

ಬಿ.ಎಸ್. ಯಡಿಯೂರಪ್ಪ ಅವರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸಿದಾಗ ಹಿನ್ನಡೆಯಾಗಿದ್ದರಿಂದ ಕೇಂದ್ರ ನಾಯಕತ್ವವು ಅಧ್ಯಕ್ಷ ಸ್ಥಾನ ಸೇರಿದಂತೆ ಪಕ್ಷದ ರಾಜ್ಯ ಘಟಕದಲ್ಲಿ ತೀವ್ರ ಬದಲಾವಣೆಗಳನ್ನು



ಮಾಡುವ ಸಾಧ್ಯತೆಯಿಲ್ಲ.ದೆಹಲಿ ಚುನಾವಣಾ ಫಲಿತಾಂಶದ ನಂತರ, ಭಿನ್ನಮತೀಯರು ಮತ್ತು 'ತಟಸ್ಥ' ನಾಯಕರು ತಮ್ಮ ನಿಲುವಿನಲ್ಲಿ ಬದಲಾವಣೆ ಮಾಡಿಕೊಳ್ಳುವ ಸಾಧ್ಯತೆಯಿದೆ. ತಮ್ಮ ಅಭಿಪ್ರಾಯಗಳನ್ನು ಸಾರ್ವಜನಿಕವಾಗಿ ಬಿತ್ತರಿಸುವವರಿಗೆ ದಿಲ್ಲಿ ಚುನಾವಣಾ ಫಲಿತಾಂಶ ಗಲಿಬಿಲಿಯಾಗಲಿದೆ ಎಂದು ಮಾಜಿ ಸಿಎಂ ಡಿವಿ ಸದಾನಂದಗೌಡ ಹೇಳಿದ್ದಾರೆ. ಕರ್ನಾಟಕದಲ್ಲಿ ಪಕ್ಷವು ಸೋತ ನಂತರ, ಅನೇಕರು ಅದನ್ನು ಲಘುವಾಗಿ ಪರಿಗಣಿಸಿದರು ಮತ್ತು ಸಾರ್ವಜನಿಕವಾಗಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತ ಪಡಿಸಿದ್ದಾರೆ.

ಈಗ ಮಹಾರಾಷ್ಟ್ರ, ಹರ್ಯಾಣ ಮತ್ತು ದೆಹಲಿಯಲ್ಲಿ ಪಕ್ಷದ ಬ್ಯಾಕ್ ಟು ಬ್ಯಾಕ್ ಯಶಸ್ಸಿನ ನಂತರ, ಅವರು ತಮ್ಮ ಅಭ್ಯಾಸವನ್ನು ಮುಂದುವರಿಸಲು ಕಷ್ಟಪಡುತ್ತಾರೆ ಎಂದು ಅವರು ತಿಳಿಸಿದ್ದಾರೆ. ಈಗ ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರ ಅವರ ಮುಂದುವರಿಕೆಯ ದೃಢೀಕರಣ ಮಾತ್ರ ಬಾಕಿ ಉಳಿದಿದೆ. 23 ಸಾಂಸ್ಥಿಕ ಜಿಲ್ಲೆಗಳ ಅಧ್ಯಕ್ಷರನ್ನು ಘೋಷಿಸಲಾಗಿದೆ ಎಂದು ಮಾಜಿ ಎಂಎಲ್‌ಸಿ ಮತ್ತು ಹಿರಿಯ ಬಿಜೆಪಿ ವಕ್ತಾರರು ತಿಳಿಸಿದ್ದಾರೆ.

ಕೇಂದ್ರ ರೈಲ್ವೇ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರ ಮನೆ ಗೃಹ ಪ್ರವೇಶದ ಹಿನ್ನೆಲೆಯಲ್ಲಿ ಬಸನಗೌಡ ಪಾಟೀಲ್ ಯತ್ನಾಳ್ ಅವರ ಬಂಡಾಯ ತಂಡವು ಯೋಜಿಸಿರುವ ಸಭೆ ನಡೆಯುವ ಸಾಧ್ಯತೆ ಕಡಿಮೆ. ಯಾವುದೇ ಸಭೆ ನಡೆಯುವುದಿಲ್ಲ ನಡೆದಿಲ್ಲ ಎಂದು ಸೋಮಣ್ಣ ಸ್ಪಷ್ಟಪಡಿಸಿದರು. ಶನಿವಾರ ದಾವಣಗೆರೆಯಲ್ಲಿ ಮಾತನಾಡಿದ ಅವರು, "ರಾಜ್ಯದ 19 ಎನ್‌ಡಿಎ ಸಂಸದರನ್ನು ಗೃಹಪ್ರವೇಶಕ್ಕೆ ಆಹ್ವಾನಿಸಿದ್ದೇನೆ. ತಾನು ರಾಜ್ಯಾಧ್ಯಕ್ಷ ಸ್ಥಾನದ ಆಕಾಂಕ್ಷಿ ಎಂಬ ಊಹಾಪೋಹವನ್ನು ಅವರು ಅಲ್ಲಗಳೆದರು.

ದೆಹಲಿ ಚುನಾವಣಾ ಫಲಿತಾಂಶ ಇತರೆ ರಾಜ್ಯಗಳ ಚುನಾವಣೆಯ ಮೇಲೆ ಪರಿಣಾಮ ಬೀರುವುದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದ್ದಾರೆ. ಲೋಕಸಭೆ ಚುನಾವಣೆಯಲ್ಲಿ ಇತರ ವಿಷಯಗಳ ಬಗ್ಗೆ ಚರ್ಚಿಸಿ ಮೈತ್ರಿ ಮಾಡಿಕೊಳ್ಳಲಾಗುವುದು. ವಿಧಾನಸಭಾ ಚುನಾವಣೆಯು ಸ್ಥಳೀಯ ಸಮಸ್ಯೆಗಳ ಮೇಲೆ ಅವಲಂಬಿತವಾಗಿದೆ. ಮೈತ್ರಿ ಕಾರ್ಯರೂಪಕ್ಕೆ ಬರುವುದಿಲ್ಲ ಎಂದು ವಿವರಿಸಿದ್ದಾರೆ.

## ಸಾರ್ವಜನಿಕರು ಸರ್ಕಾರಿ ಆಸ್ತಿಗಳನ್ನು ಸಂರಕ್ಷಿಸಿ



**ಚಿಕ್ಕಮಗಳೂರು:** ಸರ್ಕಾರಿ ಆಸ್ತಿಗಳನ್ನು ಉತ್ತಮ ರೀತಿಯಲ್ಲಿ ಬಳಸಿಕೊಂಡು ಸ್ವಚ್ಛವಾಗಿರಿಸಿಕೊಳ್ಳುವುದರ ಜೊತೆಗೆ ಅವುಗಳನ್ನು ಸಂರಕ್ಷಿಸುವುದು ಪ್ರತಿಯೊಬ್ಬ ನಾಗರೀಕರ ಜವಾಬ್ದಾರಿಯಾಗಿದೆ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ಹೇಳಿದರು.

ನಗರದ ಕೋಟೆ ಬಡಾವಣೆ, ಹಿರೇಮಗಳೂರು, ಕಲ್ಯಾಣ ನಗರ ಮತ್ತು ಕಣಿವೆ ಸಿದ್ದೇಶ್ವರ ದೇವಸ್ಥಾನದ ಬಳಿ ಹೈಟೆಕ್ ಪ್ರಯಾಣಿಕರ ಸಾರ್ವಜನಿಕ ಬಸ್ಸ್ ತಂಗುದಾಣಗಳಿಗೆ ಶಂಕು ಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ಕಾಮಗಾರಿಗೆ ಚಾಲನೆ ನೀಡಿದ ಅವರು ಮಾತನಾಡಿ, ಈ ಹಿಂದೆ ಹಿರೇಮಗಳೂರಿನಲ್ಲಿ ಇದ್ದ ಬಸ್ಸ್ ನಿಲ್ದಾಣವು ರಸ್ತೆ ಅಗಲೀಕರಣದ ಸಂದರ್ಭದಲ್ಲಿ ತೆರವುಗೊಳಿಸಲಾಗಿತ್ತು. ಹಿರೇಮಗಳೂರು ಸೇರಿದಂತೆ ಸುತ್ತಮುತ್ತಲಿನ ಸಾರ್ವಜನಿಕರು ಬೆಂಗಳೂರು, ಹಾಸನ, ಬೇಲೂರು ಭಾಗಗಳಿಗೆ ತೆರಳಬೇಕಾದರೆ ಮಳೆ, ಚಳಿ, ಗಾಳಿಯಲ್ಲೂ ಈ ಸ್ಥಳದಲ್ಲಿ ನಿಂತು ಬಸ್ಸ್‌ಗಾಗಿ ಕಾಯುತ್ತಿರುವುದನ್ನು ಗಮನಿಸಿ ಇಲ್ಲಿ ಬಸ್ಸ್ ನಿಲ್ದಾಣದ ಅವಶ್ಯಕತೆಯನ್ನು ಮನಗೊಂಡು ನೂತನ ನಿಲ್ದಾಣಕ್ಕಾಗಿ ಇಂದು ಗುದ್ದಲಿ ಪೂಜೆ ನೆರವೇರಿಸಿ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದರು.

ಕಾಯಕ ಯೋಗಿಗಳಾದ ಆಟೋ ಚಾಲಕರ ಬೇಡಿಕೆಯಂತೆ ಆಟೋ ನಿಲ್ದಾಣಕ್ಕು ಯೋಜನೆ ಸಿದ್ಧಪಡಿಸಲಾಗಿದೆ. ಇನ್ನೂ ಕೆಲವೇ ದಿನಗಳಲ್ಲಿ ಆಟೋ ನಿಲ್ದಾಣವನ್ನು ನಿರ್ಮಿಸಿ ಬಸ್ಸ್ ಹಾಗೂ ಆಟೋ ನಿಲ್ದಾಣಗಳ ಕಾಮಗಾರಿಯನ್ನು ಪ್ರಾರಂಭಿಸಿ ಶೀಘ್ರವಾಗಿ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುವುದು ಎಂದ ಅವರು, ಪ್ರಸ್ತುತ ಬಸ್ ನಿಲ್ದಾಣವು ವಿನೂತನ ರೀತಿಯಲ್ಲಿ ನಿರ್ಮಿಸಲಾಗುತ್ತಿದ್ದು, ಸಾರ್ವಜನಿಕರು ಸ್ವಚ್ಚತೆಯಿಂದ ಇರಿಸಿಕೊಂಡು ಇದರ ಸಂರಕ್ಷಣೆಗೆ ಸಹಕರಿಸಬೇಕು ಎಂದರು.

ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್, ಸದಸ್ಯ ಪರಮೇಶ್, ಅರುಣ್ ಕುಮಾರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಯಾಜ್ ಅಹಮದ್, ಸಿ.ಡಿ.ಎ ಆಯುಕ್ತರಾದ ನಾಗರತ್ನ, ಪೌರಾಯುಕ್ತರಾದ ಬಿ.ಸಿ ಬಸವರಾಜ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಸ್.ಪಿ ಮಂಜೇಗೌಡ ಉಪಸ್ಥಿತರಿದ್ದರು.

## ಮಣಿಪುರ: ಮುಖ್ಯಮಂತ್ರಿ ಸ್ಥಾನಕ್ಕೆ ಎನ್ ಬಿರೇನ್ ಸಿಂಗ್ ದಿಢೀರ್ ರಾಜೀನಾಮೆ!

**ಇಂಫಾಲ್:** ಮಣಿಪುರದ ಬಿಜೆಪಿ ಸರ್ಕಾರದ ಬಗ್ಗೆ ಅವಿಶ್ವಾಸ ನಿರ್ಣಯ ಮಂಡಿಸುವ ಬಗ್ಗೆ ಪ್ರತಿಪಕ್ಷಗಳು ಚರ್ಚೆಯಲ್ಲಿ ತೊಡಗಿರುವಂತೆಯೇ ಮುಖ್ಯಮಂತ್ರಿ ಸ್ಥಾನಕ್ಕೆ ಎನ್. ಬಿರೇನ್ ಸಿಂಗ್ ಭಾನುವಾರ ದಿಢೀರ್ ರಾಜೀನಾಮೆ ನೀಡಿದ್ದಾರೆ.



ಈಶಾನ್ಯ ರಾಜ್ಯ ಮೇ 2023 ರಿಂದ ಜನಾಂಗೀಯ ಹಿಂಸಾಚಾರದಿಂದ ನರಳುತ್ತಿದೆ. ನವದೆಹಲಿಯಲ್ಲಿ ಗೃಹ ಸಚಿವ ಅಮಿತ್ ಶಾ ಅವರನ್ನು ಬಿರೇನ್ ಸಿಂಗ್ ಭೇಟಿಯಾದ ಸ್ವಲ್ಪ ಸಮಯದ ನಂತರ ಇಂಫಾಲ್‌ನಲ್ಲಿ ರಾಜ್ಯಪಾಲ ಅಜಯ್ ಕುಮಾರ್ ಭಲ್ಲಾ ಅವರಿಗೆ ರಾಜೀನಾಮೆ ಸಲ್ಲಿಸಿದ್ದಾರೆ.

ಇದಕ್ಕೂ ಮೊದಲು ಸಿಂಗ್ ಅವರು ಬಿಜೆಪಿ ನೇತೃತ್ವದ ಆಡಳಿತಾರೂಢ ಮೈತ್ರಿಕೂಟದ ಶಾಸಕರೊಂದಿಗೆ ಸಿಎಂ ಸೆಕ್ರೆಟರಿಯೇಟ್‌ನಲ್ಲಿ ಸಭೆ ನಡೆಸಿದರು.

ಸಿಂಗ್ ಸರ್ಕಾರದ ವಿರುದ್ಧ ವಿಧಾನಸಭೆಯಲ್ಲಿ ಅವಿಶ್ವಾಸ ನಿರ್ಣಯ ಮಂಡಿಸುವುದಾಗಿ ಕಾಂಗ್ರೆಸ್ ಶುಕ್ರವಾರ ಘೋಷಿಸಿತ್ತು. ಇದರ ಬೆನ್ನಲ್ಲೇ ಬಿರೇನ್ ಸಿಂಗ್ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಮುಂದಿನ ರಾಜಕೀಯ ಬೆಳವಣಿಗೆಗಳು ತೀವ್ರ ಕುತುಹೂಲ ಮೂಡಿಸಿವೆ.

ರಾಜ್ಯಪಾಲರಿಗೆ ಸಲ್ಲಿಸಿರುವ ಪತ್ರದಲ್ಲಿ ಇಷ್ಟು ದಿನ ರಾಜ್ಯದ ಜನರಿಗೆ ಸೇವೆ ಸಲ್ಲಿಸುವ ಅವಕಾಶ ಸಿಕ್ಕಿದ್ದಕ್ಕೆ ಕೃತಜ್ಞತೆ ವ್ಯಕ್ತಪಡಿಸಿದ್ದಾರೆ ಮತ್ತು ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಕೇಂದ್ರ ಸರ್ಕಾರದ ಬೆಂಬಲವನ್ನು ಒಪ್ಪಿಕೊಂಡಿದ್ದಾರೆ.ಸಿಂಗ್ ಅವರ ರಾಜೀನಾಮೆ ಪತ್ರವು ಮಣಿಪುರದ ಸಮಗ್ರತೆ ಮತ್ತು ಭದ್ರತೆಗೆ ಅವರ ಬದ್ಧತೆಯನ್ನು ಒತ್ತಿಹೇಳಿದೆ.

ಪ್ರಾದೇಶಿಕ ಸಮಗ್ರತೆ, ಗಡಿ ಭದ್ರತೆ, ಅಕ್ರಮ ವಲಸೆ ಮತ್ತು ಮಾದಕವಸ್ತು ಕಳ್ಳಸಾಗಣೆ ವಿರುದ್ಧದ ಹೋರಾಟ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಪ್ರಯತ್ನಗಳನ್ನು ಮುಂದುವರಿಸಲು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನೀವು ಜೀವನದಲ್ಲಿ ಹಣದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳುವುದಿಲ್ಲ ಆದರೆ ಇಂದು ನೀವು ಹಣದ ಮೌಲ್ಯವನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ನಿಮಗೆ ಹಣದ ಅಗತ್ಯವಿರುತ್ತದೆ ಆದರೆ ನಿಮ್ಮ ಸಾಕಷ್ಟು ಹಣ ಇರುವುದಿಲ್ಲ. ನಿಮ್ಮ ನಿರ್ಧಾರದಲ್ಲಿ ಪೋಷಕರ ಸಹಾಯ ನಿಮಗೆ ತುಂಬ ಸಹಾಯ ಮಾಡುತ್ತದೆ.

### ವೃಷಭ ರಾಶಿ

ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ನಿಮ್ಮ ಜೊತೆಗಿರುವವರ ಜೊತೆ ವಾದವಿವಾದಕ್ಕೆ ತೊಡಗಬೇಡಿ. ಯಾವುದೇ ಭಿನ್ನಾಭಿಪ್ರಾಯದ ವಿಷಯಗಳಿದ್ದಲ್ಲಿ – ಸೌಹಾರ್ದತೆಯಿಂದ ಬಗೆಹರಿಸಿಕೊಳ್ಳಿ.

### ಮಿಥುನ ರಾಶಿ

ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ನೀವು ಬಾಕಿಯಿರುವ ಎಲ್ಲಾ ಕುಟುಂಬದ ಸಾಲಗಳನ್ನು ತೀರಿಸಲು ಸಾಧ್ಯವಾಗುತ್ತದೆ. ಇಂದು ನೀವು ನಿಮ್ಮ ಜೀವನದಲ್ಲಿ ನಿಜವಾದ ಪ್ರೀತಿಯ ಅನುಪಸ್ಥಿತಿಯನ್ನು ಅನುಭವಿಸುತ್ತೀರಿ. ಚಿಂತಿಸಬೇಡಿ, ಕಾಲಕಳೆದಂತೆ ಎಲ್ಲವೂ ಬದಲಾಗುತ್ತದೆ, ನಿಮ್ಮ ಪ್ರಣಯ ಜೀವನವೂ ಸಹ. ನಿಮ್ಮ ದಾರಿಯಲ್ಲಿ ಯಾರೇ ಬಂದರೂ ಸಭ್ಯರೂ ಮತ್ತು ಆಕರ್ಷಕರೂ ಆಗಿರಿ – ನಿಮ್ಮ ಇಂದ್ರಜಾಲದಂಥ ಆಕರ್ಷಣೆಯ ಹಿಂದಿನ ರಹಸ್ಯ ಕಲವರಿಗೆ ಮಾತ್ರವೇ ತಿಳಿದಿದೆ.

### ಕರ್ಕ ರಾಶಿ

ಜೀವನದಲ್ಲಿ ಒತ್ತಡದ ಮನೋಭಾವವನ್ನು ತಪ್ಪಿಸಿ ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ನೀವು ಮನೆಯಲ್ಲಿ ಜನರೊಡನೆ ಏನಾದರೂ ರೋಮಾಂಚಕ ಮತ್ತು ವೈವಿಧ್ಯಮಯವಾದದ್ದನ್ನು ಮಾಡಬೇಕು. ಇಂದು ಪ್ರೀತಿಯ ಅನುಪಸ್ಥಿತಿಯ ಭಾವನೆ ಬರಬಹುದು. ಕೆಲವು ಮನರಂಜನೆ ಮತ್ತು ಉಲ್ಲಾಸಕ್ಕೆ ಒಳ್ಳೆಯ ದಿನ.

### ಸಿಂಹ ರಾಶಿ

ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ. ವಿದೇಶಿ ಸಂಪರ್ಕಗಳನ್ನು ಹೊಂದಿರುವ ವ್ಯಾಪಾರಿಗಳಿಗೆ ಇಂದು ಹಣದ ನಷ್ಟವಾಗುವ ಸಾಧ್ಯತೆ ಇದೆ ಆದ್ದರಿಂದ ಇಂದು ಯೋಚಿಸಿ ಅರ್ಥಮಾಡಿಕೊಂಡು ನಡೆಯಿರಿ ಮಗುವಿನ ಅಧ್ಯಯನದ ಬಗ್ಗೆ ಚಿಂತಿಸುವ ಅಗತ್ಯವಿಲ್ಲ.

### ಕನ್ಯಾ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಆಲೋಚಿಸದೆ ನೀವು ಯಾರಿಗೂ ತಮ್ಮ ಹಣವನ್ನು ಕೊಡಬಾರದು, ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ದೊಡ್ಡ ತೊದರೆಗೊಳಗಾಗಬಹುದು. ಧಾರ್ಮಿಕ ಸ್ಥಳಕ್ಕೆ ಅಥವಾ ಸಂಬಂಧಿಗಳ ಭೇಟಿ ಸಾಧ್ಯವಿದೆ. ನಿಮ್ಮ ಪ್ರಿಯತಮೆ ಇಡೀ ದಿನ ನಿಮಗಾಗಿ ಪರಿತಪಿಸುತ್ತಾಳೆ. ಒಂದು ಅಚ್ಚರಿಯನ್ನು ಯೋಜಿಸಿ ಮತ್ತು ಇದನ್ನು ನಿಮ್ಮ ಜೀವನದ ಅತ್ಯಂತ ಸುಂದರ ದಿನವನ್ನಾಗಿ ಮಾಡಿ. ಜೀವನ ಸಂಗಾತಿಯೊಂದಿಗೆ ಸಮಯವನ್ನು ಕಳೆಯಲು ಇಂದು ನೀವು ಕಚೇರಿಯಿಂದ ಬೇಗನೆ ಹೋರಾಡುತ್ತಿರಿ ಆದರೆ ದಾರಿಯಲ್ಲಿ ವಿಪರೀತ ಜಾಮ್ನಿಂದಾಗಿ ಇದನ್ನು ಮಾಡಲು ನಿಮಗೆ ಸಾಧ್ಯವಾಗುವುದಿಲ್ಲ

### ತುಲಾ ರಾಶಿ

ನಿಮ್ಮ ಹೆಚ್ಚು ಆತ್ಮವಿಶ್ವಾಸವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಒತ್ತಡದ ದಿನದ ಹೊರತಾಗಿಯೂ ನೀವು ನಿಮ್ಮ ಚೈತನ್ಯವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ.

### ವೃಶ್ಚಿಕ ರಾಶಿ

ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಿರಲಿ. ಬಿಕ್ಕಟ್ಟಿನ ಸಮಯದಲ್ಲಿ ಸಂಬಂಧಿಗಳೂ ಸಹಾಯ ಮಾಡುತ್ತಾರೆ. ಇಂದು ನೀವು ನಿಮ್ಮ ಹಣವನ್ನು ಖರ್ಚು ಮಾಡುವ ಅಗತ್ಯವಿಲ್ಲ, ಏಕೆಂದರೆ ಮನೆಯ ಯಾವುದೇ ಹಿರಿಯ ಸದಸ್ಯ ಇಂದು ನಿಮಗೆ ಹಣವನ್ನು ನೀಡಬಹುದು.

### ಧನು ರಾಶಿ

ನಿಮ್ಮ ದೊಡ್ಡ ಆಸ್ತಿಯೆಂದರೆ ನಿಮ್ಮ ಹಾಸ್ಯಪ್ರಜ್ಞೆಯಾಗಿದೆ ಇದನ್ನು ನಿಮ್ಮ ಅನಾರೋಗ್ಯ ಗುಣಪಡಿಸಲು ಬಳಸಲು ಪ್ರಯತ್ನಿಸಿ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ಸೋದರಿಯ ಪ್ರೀತಿ ನಿಮ್ಮನ್ನು ಉತ್ತೇಜಿಸುತ್ತದೆ. ಅದರೆ ನೀವು ಚಿಕ್ಕ ವಿಷಯಳಿಗೆ ತಾಳ್ಮೆ ಕಳೆದುಕೊಳ್ಳಬಾರದು ಏಕೆಂದರೆ ಅದು ನಿಮ್ಮ ಆಸಕ್ತಿಗಳನ್ನು ಹಾಳು ಮಾಡುತ್ತದೆ.

### ಮಕರ ರಾಶಿ

ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ಒಬ್ಬ ಹಿರಿಯ ವ್ಯಕ್ತಿಯ ಆರೋಗ್ಯ ಕೊಂಚ ಆತಂಕಕ್ಕೆ ಕಾರಣವಾಗುತ್ತದೆ. ಪ್ರೀತಿ ದೇವರ ಪೂಜೆಗೆ ಪರ್ಯಾಯವಾಗಿದೆ; ಇದು ಅತ್ಯಂತ ಆಧ್ಯಾತ್ಮಿಕವೂ ಹಾಗೂ ಧಾರ್ಮಿಕವೂ ಆಗಿದೆ. ಇಂದು ನೀವು ಇದನ್ನು ತಿಳಿಯುತ್ತೀರಿ.

### ಕುಂಭ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಊಹೆಗಳು ಲಾಭ ತರುತ್ತವೆ. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ. ನೀವು ಇಂದು ಪ್ರೀತಿಯ ಸಮೃದ್ಧ ಚಾಕೊಲೇಟ್ನ ರುಚಿ ಸವಿಯುತ್ತೀರಿ. ನಿಮ್ಮ ಸಂಗಾತಿ ನಿಮ್ಮಿಂದ ಕೇವಲ ಸ್ವಲ್ಪ ಸಮಯವನ್ನು ಬಯಸುತ್ತಿದ್ದಾರೆ ಆದರೆ ನೀವು ಅವರಿಗೆ ಸಮಯ ನೀಡಲಾಗುತ್ತಿಲ್ಲ.

### ಮೀನ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಆರ್ಥಿಕ ನಿರ್ಬಂಧಗಳನ್ನು ತಪ್ಪಿಸಲು ನಿಮ್ಮ ಬಜೆಟ್ಗೆ ಅಂಟಿಕೊಳ್ಳಿ. ಕೆಲವರು ಅವರಿಗೆ ಸಾಧ್ಯವಿರುವುದಕ್ಕಿಂತ ಹೆಚ್ಚು ನೀಡುವ ಭರವಸೆ ನೀಡುತ್ತಾರೆ ಕೇವಲ ಮಾತನಾಡುವ ಮತ್ತು ಯಾವುದೇ ಫಲಿತಾಂಶಗಳ ನೀಡದ ಇಂಥ ಜನರನ್ನು ಮರೆತುಬಿಡಿ.

## ಸೆಲ್ಯೂಟ್ ದಿ ಸೈಲೆಂಟ್ ವರ್ಕರ್ ಕಾರ್ಯಕ್ರಮದಲ್ಲಿ ಪತ್ರಕರ್ತ ರುದ್ರಯ್ಯ ಹಾಗೂ ಲೈನ್ಮ್ಯಾನ್ ಲಿಂಗರಾಜುರಿಗೆ ಸನ್ಮಾನ




**ಚಿಕ್ಕಮಗಳೂರು:** ಜೆ.ಸಿ.ಐ ಸಪ್ತಾಹದ ಹಿನ್ನೆಲೆಯಲ್ಲಿ ಸೆಲ್ಯೂಟ್ ಡಿ ಸೈಲೆಂಟ್ ವರ್ಕರ್ ಕಾರ್ಯಕ್ರಮದಡಿಯಲ್ಲಿ ಎಲೆಮರೆಯ ಕಾಯಿಯಂತೆ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತ ರುದ್ರಯ್ಯ ಹಾಗೂ ಲೈನ್ಮ್ಯಾನ್ ಲಿಂಗರಾಜುರಿಗೆ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ನಗರದ ಖಾಸಗಿ ವಾಹಿನಿಯ ಕಚೇರಿಯಲ್ಲಿ ಕಾರ್ಯಕ್ರಮ ಏರ್ಪಡಿಸಿದ ಜೆ.ಸಿ.ಐ ಮಲ್ನಾಡ್ ಸಂಸ್ಥೆ ಎಲೆಮರೆಯ ಕಾಯಿಯಂತೆ ಕಾರ್ಯನಿರ್ವಹಿಸುತ್ತಿರುವ ವ್ಯಕ್ತಿಗಳನ್ನು ಗುರುತಿಸಿ ಅವರಲ್ಲಿ ಆತ್ಮಸ್ಥೈರ್ಯ ತುಂಬುವ ನಿಟ್ಟಿನಲ್ಲಿ ಪತ್ರಕರ್ತರಾದ ರುದ್ರಯ್ಯ ಹಾಗೂ ಲೈನ್ ಮ್ಯಾನ್ ಲಿಂಗರಾಜು ಅವರನ್ನು ಗೌರವಿಸಿ ಅಭಿನಂದಿಸಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಪತ್ರಕರ್ತರಾದ ರುದ್ರಯ್ಯ ಅವರು ನನ್ನ ಸೇವೆಯನ್ನು ಗುರುತಿಸಿ ಗೌರವಿಸಿ ಸನ್ಮಾನಿಸುತ್ತಿರುವ ಜೆಸಿಐ ಸಂಸ್ಥೆಗೆ ಆಭಾರಿಯಾಗಿದ್ದೇನೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಲೈನ್ ಮ್ಯಾನ್ ಲಿಂಗರಾಜು ಅವರು ತಮ್ಮ ಸೇವೆಯನ್ನು ಗುರುತಿಸಿ, ಗೌರವಿಸಿ ಸನ್ಮಾನಿಸುತ್ತಿರುವುದಕ್ಕೆ ಸಂತೋಷ ವ್ಯಕ್ತ ಪಡಿಸಿದರು.

ಜೆ.ಸಿ.ಐ ಮಲ್ನಾಡ್ ಸಂಸ್ಥೆಯ ಅಧ್ಯಕ್ಷರಾದ ಪ್ರದೀಪ್ ಅವರು ಮಾತನಾಡಿ ಜೆಸಿಐ ಸಂಸ್ಥೆ ವ್ಯಕ್ತಿ ವಿಕಸನದ ಸಂಸ್ಥೆಯಾಗಿದ್ದು ಹಲವು ವರ್ಷಗಳಿಂದ ಸಮಾಜಮುಖಿಯಾಗಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಸಮಾಜದಲ್ಲಿ ಎಲೆಮರೆಕಾಯಿಯಂತೆ ಸೇವೆ ಸಲ್ಲಿಸುತ್ತಿರುವ ವ್ಯಕ್ತಿಗಳಿಗೆ ಗೌರವಿಸುತ್ತಾ ಬಂದಿದ್ದು ಇಂದು ಪತ್ರಕರ್ತರಲ್ಲಿ ಹಾಗೂ ಕೆಪಿಟಿಸಿಎಲ್ ಅಲ್ಲಿ ಎಲೆ ಮರೆಯ ಕಾಯಿಯಂತೆ ಕಾರ್ಯನಿರ್ವಹಿಸುತ್ತಿರುವ ರುದ್ರಯ್ಯ ಹಾಗೂ ಲಿಂಗರಾಜು ಅವರನ್ನು ಸನ್ಮಾನಿಸುತ್ತಿರುವುದು ಸಂತಸದ ಸುದ್ದಿ ಎಂದು ಹೇಳಿದರು .

ಜೋನ್ ಪ್ರೆಸಿಡೆಂಟ್ ವಿಜಯ್ ಕುಮಾರ್ ಅವರು ಮಾತನಾಡಿ ವಿಶ್ವದಾದ್ಯಂತ ಸಮಾಜಮುಖಿ ಚಿಂತನೆಗಳೊಂದಿಗೆ

ಕಾರ್ಯನಿರ್ವಹಿಸುತ್ತಿರುವ ಜೆಸಿಐ ಸಂಸ್ಥೆ ಚಿಕ್ಕಮಗಳೂರಿನಲ್ಲೂ ಕೂಡ ಉತ್ತಮ ಸಂಘಟನೆಯೊಂದಿಗೆ ಹಲವು ತರಬೇತಿ ಹಾಗೂ ಸೇವಾ ಕಾರ್ಯಗಳನ್ನು ಕೈಗೊಂಡಿದ್ದು ಇಂದು ಪತ್ರಕರ್ತರು ಹಾಗೂ ಕೆಪಿಟಿಸಿಎಲ್ ಸಿಬ್ಬಂದಿಯವರನ್ನು ಗೌರವಿಸುತ್ತಿರುವುದು ಸಂತೋಷದ ಸಂಗತಿ ಎಂದು ಹೇಳಿದರು.

ಜೆಸಿಐ ಮಲ್ನಾಡ್ ಸಂಸ್ಥಾಪಕರಾದ ಅನಿಲ್ ಆನಂದ್, ನಿಕಟ ಪೂರ್ವ ಅಧ್ಯಕ್ಷರಾದ ಪುಷ್ಪ,ಲೇಡಿ ಜೆಸಿ ಕೋಆರ್ಡಿನೇಟರ್ ಪೂರ್ಣಿಮಾ ಅನಿಲ್, ಪೂರ್ವ ಅಧ್ಯಕ್ಷರಾದ ಗಿರಿಧ್ರಾಜ್ ಅರಸ್, ರಘು, ಸೆಕ್ರೆಟರಿ ತಿಲಕ್, ಸದಸ್ಯರಾದ ಗುರುಮೂರ್ತಿ ನಾಡಿಗ್, ರಾಮಚಂದ್ರ, ಕೃಷ್ಣಮೂರ್ತಿ, ರವಿ,ರೋಹಿತ್, ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ತುಂಬುವ ಕೆಲಸವನ್ನು ಗುರುಕುಲ ಶಿಕ್ಷಣ ಸಂಸ್ಥೆ ಮಾಡುತ್ತಿದೆ : ಮೇಯರ್ ಕೆ.ಚಮನ್ ಸಾಬ್

### ಗುರುಕುಲ ವೈಭವದಲ್ಲಿ: ಸಾಂಸ್ಕೃತಿಕ ಕಲಾ ವೈಭವ ಅನಾವರಣ

**ದಾವಣಗೆರೆ:** ಇಂದಿನ ದಿನಮಾನಗಳಲ್ಲಿ ಶಾಲೆ ನಡೆಸುವುದೇ ಕಷ್ಟಕರವಾಗಿದ್ದು, ಶಿಕ್ಷಣ ನೀಡುವ ಜೊತೆಗೆ ನೂರಾರು ಜನರಿಗೆ ಉದ್ಯೋಗ ನೀಡಿದ ಕೀರ್ತಿ ಗುರುಕುಲ ವಸತಿಯುತ ಶಾಲೆಯದ್ದಾಗಿದೆ ಎಂದು ಮಹಾನಗರ ಪಾಲಿಕೆ ಮೇಯರ್ ಕೆ.ಚಮನ್ ಸಾಬ್ ಅಭಿಪ್ರಾಯಪಟ್ಟರು. ನಗರದ ಹೈಸ್ಕೂಲ್ ಮೈದಾನದಲ್ಲಿ ಗುರುಕುಲ ವಸತಿಯುತ ಶಾಲೆಯಿಂದ ಆಯೋಜಿಸಿದ್ದ ಗುರುಕುಲ ವೈಭವ –2025 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಶಾಸಕ ಶಾಮನೂರು ಶಿವಶಂಕರಪ್ಪ ಅವರ ಪ್ರಯತ್ನದಿಂದಾಗಿ ದಾವಣಗೆರೆಯು ಎಜ್ಯುಕೇಷನ್ ಹಬ್ ಆಗಿ ಬದಲಾಗಿದೆ. ಅವರು ಸಾಕಷ್ಟು ಶಾಲೆ, ಕಾಲೇಜುಗಳನ್ನು ಕಟ್ಟಿ ಮಾದರಿಯಾಗಿದ್ದಾರೆ ಎಂದರು. ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ತುಂಬುವ ನೀಡುತ್ತಿದ್ದಾರೆ. ಇದರ ಸದುಪಯೋಗವನ್ನು ಮಕ್ಕಳು ಪಡೆಯಬೇಕು ಎಂದರು. ವಿದ್ಯಾರ್ಥಿಗಳು ಅನ್ಯ ಮಾರ್ಗಗಳತ್ತ ಗಮನ ಹರಿಸದೇ ಶೈಕ್ಷಣಿಕ ಪ್ರಗತಿಗೆ ಮಾತ್ರ ಗಮನ ಹರಿಸಬೇಕು. ಆ ಮೂಲಕ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು. ಗುರುಕುಲ ಎಜ್ಯುಕೇಷನಲ್ ಟ್ರಸ್ಟ್ ಅಧ್ಯಕ್ಷ ಅಬ್ದುಲ್ ಆರ್. ಅಧ್ಯಕ್ಷತೆ ವಹಿಸಿದ್ದರು. ನ್ಯಾಯಾಧೀಶರಾದ ಗಾಯತ್ರಿ, ಡಿಡಿಪಿಐ ಕೊಟ್ರೇಶ್ ಜಿ., ಬಿಇಒ ಪುಷ್ಪಲತಾ, ಜಿಲ್ಲಾ ಕಾರಾಗೃಹ ಅಧೀಕ್ಷಕ ಆನಂದ್ ಸಿ. ಭಜಂತ್ರಿ, ಡಿವೈಎಸ್ಪಿ ಶರಣಬಸವೇಶ್ವರಯ್ಯ, ಕರವೇ ಜಿಲ್ಲಾ ಘಟಕದ ಅಧ್ಯಕ್ಷ ರಾಮೇಗೌಡ ಸೇರಿದಂತೆ ಹಲವು ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಸಾಂಸ್ಕೃತಿಕ ಕಾರ್ಯಕ್ರಮ ಗುರುಕುಲ ವೈಭವ ಕಾರ್ಯಕ್ರಮದಲ್ಲಿ



ಕೆಲಸವನ್ನು ಗುರುಕುಲ ಶಿಕ್ಷಣ ಸಂಸ್ಥೆ ಮಾಡುತ್ತಿದೆ. ವಿದ್ಯಾರ್ಥಿಗಳಿಗೆ ಶಿಕ್ಷಣದೊಂದಿಗೆ ಕ್ರಿಯಾಶೀಲತೆಯನ್ನೂ ಕಲಿಸಲಾಗುತ್ತಿದೆ ಎಂದರು. ಮಧ್ಯಮವರ್ಗದ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು. ಶಿಕ್ಷಕರ ವೃತ್ತಿ ಸಮಾಜದಲ್ಲಿ ಶ್ರೇಷ್ಠ ಸ್ಥಾನ ಪಡೆದಿದೆ. ಸಾಂಸ್ಕೃತಿಕ, ಕ್ರೀಡೆ ಹಾಗೂ ಇನ್ನಿತರ ಕಾರ್ಯಕ್ರಮಗಳಿಗೆ ಮಕ್ಕಳ ಪ್ರತಿಭಾ ಪ್ರದರ್ಶನಕ್ಕೆ ಪಾಲಕರು ಉತ್ತೇಜನ

ಮಕ್ಕಳು ಸಾಂಸ್ಕೃತಿಕ ಕಲಾ ವೈಭವವನ್ನು ಅನಾವರಣ ಮಾಡಿದರು. ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿದ್ದ ಪ್ರೇಕ್ಷಕರನ್ನು ಹಾಡು, ನೃತ್ಯ ಪ್ರದರ್ಶನದ ಮೂಲಕ ವಿದ್ಯಾರ್ಥಿಗಳು ಗಮನ ಸೆಳೆದರು. ವಿಶಾಲ ವೇದಿಕೆಯನ್ನು ಸರಿಯಾಗಿ ಬಳಸಿಕೊಂಡು ವಿದ್ಯಾರ್ಥಿಗಳು ಅದ್ಭುತವಾಗಿ ಹೆಜ್ಜೆ ಹಾಕಿದರು. ನೆರೆದಿದ್ದ ಪಾಲಕರು, ಶಾಲಾ ಆಡಳಿತ ಮಂಡಳಿ ಸದಸ್ಯರು, ಸಿಬ್ಬಂದಿ ಸಂಭ್ರಮಿಸಿದರು.

### ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಚಾಲನೆ

## ದೈಹಿಕ, ಮಾನಸಿಕ ಸದೃಢತೆಗೆ ಕ್ರೀಡೆ ಸಹಕಾರಿ

**ಗದಗ:** ವ್ಯಕ್ತಿಯು ದೈನಂದಿನವಾಗಿ ಕ್ರಿಯಾಶೀಲತೆಯಿಂದ ಹಾಗೂ ಉತ್ಸಾಹದಿಂದ ಕಾರ್ಯನಿರ್ವಹಿಸಲು ದೈಹಿಕ ಹಾಗೂ ಮಾನಸಿಕ ಸದೃಢತೆ ಕಾಪಾಡಿಕೊಳ್ಳಲು ಕ್ರೀಡೆ ಸಹಕಾರಿಯಾಗಿದೆ ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಗದಗ ಅವರಿಂದ ನಗರದ ಕೆಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ 2024 25 ನೇ ಸಾಲಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿಗಳ ಹಾಗೂ ಸಿಬ್ಬಂದಿಗಳ ಜಿಲ್ಲಾ ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ದೈನಂದಿನ ಸರ್ಕಾರಿ ನೌಕರಿಯಲ್ಲಿ ಸಾರ್ವಜನಿಕ ಸೇವೆಯಲ್ಲಿರುವವರು ಸಂಯಮದಿಂದ ಹಾಗೂ ಹೆಚ್ಚು ಕ್ರಿಯಾಶೀಲವಾಗಿ ಕಾರ್ಯ ನಿರ್ವಹಣೆಗೆ ಮಾನಸಿಕ ಆರೋಗ್ಯವು ಪ್ರಮುಖವಾಗಿದೆ. ಮಾನಸಿಕ ಆರೋಗ್ಯ ಕಾಯ್ದುಕೊಳ್ಳಲು ದಿನನಿತ್ಯದ ಜೀವನ ಶೈಲಿಯಲ್ಲಿ ದೈಹಿಕ ಕ್ರೀಡಾ ಚಟುವಟಿಕೆಯಿಂದ ಕೂಡಿರಬೇಕಾಗುತ್ತದೆ ಎಂದರು.

ಕ್ರೀಡಾಕೂಟದಲ್ಲಿ ಎಲ್ಲರೂ ಭಾಗವಹಿಸುವುದು ಮುಖ್ಯ ಸೋಲು ಗೆಲುವಲ್ಲ ಎಂಬುದನ್ನು ಎಲ್ಲರೂ ತಿಳಿದುಕೊಳ್ಳಬೇಕು, ಉತ್ಸಾಹದಿಂದ ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದರಿಂದ ನಮ್ಮ ದೈಹಿಕ ಆರೋಗ್ಯ



ಸುಧಾರಿಸುವುದರೊಂದಿಗೆ ದೈನಂದಿನ ಕರ್ತವ್ಯ ನಿರ್ವಹಣೆಗೆ ಮನಸ್ಸು ಉತ್ಸುಕವಾಗುತ್ತದೆ ಹಲವಾರು ಕಾಯಿಲೆಗಳಿಂದ ನಮ್ಮ ದೇಹವನ್ನು ಕಾಪಾಡಿಕೊಳ್ಳಲು ಸಹಕಾರಿಯಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಸರ್ಕಾರದಿಂದ ನೌಕರರ ಆರೋಗ್ಯ ಸುಧಾರಣೆಗೆ ಹಾಗೂ ಮಾನಸಿಕ ದೈಹಿಕ ಸದೃಢತೆಗೆ ಕ್ರೀಡಾ ಚಟುವಟಿಕೆಗಳನ್ನ ಹಮ್ಮಿಕೊಂಡು ಬರಲಾಗುತ್ತಿದ್ದು, ನೌಕರರು ಕೀಳರಿಮೆ ತೊರೆದು ಕ್ರೀಡಾಕೂಟದಲ್ಲಿ ಪಾಲ್ಗೊಂಡು, ತಮ್ಮ ಅಭಿವ್ಯಕ್ತಿ ಪ್ರದರ್ಶಿಸಬೇಕು ಎಂದರು.

ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಗೆಲವು ಸಾಧಿಸಿದವರು ರಾಜ್ಯಮಟ್ಟದಲ್ಲಿ ಪಾಲ್ಗೊಂಡು ಗದಗ ಜಿಲ್ಲೆಗೆ ಕೀರ್ತಿ ತರಬೇಕು. ಆ ಮೂಲಕ ಗದಗ ಜಿಲ್ಲೆ ಎಲ್ಲ ರಂಗದಲ್ಲಿಯೂ ಉತ್ತಮ ಪ್ರದರ್ಶನ ಕಾಣುವಂತಾಗಬೇಕು ಎಂದು ಕ್ರೀಡಾ ಪಟುಗಳಿಗೆ ಸ್ಪೂರ್ತಿ ಮಾತುಗಳನ್ನಾಡಿದರು.

ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ರವಿ ಗುಂಜಿಕರ ಅವರು ಮಾತನಾಡಿ, ನೌಕರರ ಕ್ಷೇಮಾಭಿವೃದ್ಧಿಗೆ ಸಂಗವು ಸದಾ ನಿಮ್ಮೊಂದಿಗಿರುತ್ತದೆ ಎಂದರು. ಕ್ರೀಡೆಗಳಲ್ಲಿ ಹುಚ್ಚು ಉತ್ಸುಕತೆಯಿಂದ ಪಾಲ್ಗೊಳ್ಳುವ ಮೂಲಕ ನೌಕರ ಬಾಂಧವರು ಕ್ರೀಡಾ ಸ್ಪೂರ್ತಿ ಮೆರೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದ ವೇದಿಕೆಯಲ್ಲಿ ಗದಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಉಪ ಕಾರ್ಯದರ್ಶಿ ಸಿ ಆರ್ ಮುಂಡರಗಿ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ರಮೇಶ ಪಾಟಿಲ, ಕ್ರೀಡಾಧಿಕಾರಿ ಶರಣು ಗೋಗೇರಿ ಸೇರಿದಂತೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ನೌಕರರು ಉಪಸ್ಥಿತರಿದ್ದರು.

## ಬಿಸಲೇರಿ ಬಸಮ್ಮ ಭೀಮಪ್ಪ ಪ್ರೌಢಶಾಲಾ ಮಾನ್ಯತಾ ರದ್ದು

**ದಾವಣಗೆರೆ:** ಶ್ರೀಜಯಪ್ರಕಾಶ್ ನಾರಾಯಣ ವಿದ್ಯಾಸಂಸ್ಥೆ(ರಿ) ಐಗೂರು ದಾವಣಗೆರೆ ಇವರ ಆಶ್ರಯದಲ್ಲಿ ನಡೆಯುತ್ತಿದ್ದ ಶ್ರೀಬಿಸಲೇರಿ ಬಸಮ್ಮ ಭೀಮಪ್ಪ ಪ್ರೌಢಶಾಲೆ, ಕಾಡಜ್ಜಿ, ದಾವಣಗೆರೆ ಉತ್ತರ ವಲಯ ಈ ಶಾಲೆಗೆ 8 ರಿಂದ 10 ತರಗತಿಯವರೆಗೆ ನೀಡಲಾದ ಮಾನ್ಯತೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆಯಡಿ ಹಿಂಪಡೆಯಲಾಗಿದೆ. ಆದ್ದರಿಂದ ಪೋಷಕರು ಈ ಶಾಲೆಗೆ ಮಕ್ಕಳನ್ನು ದಾಖಲಿಸಬಾರದೆಂದು ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿನಲ್ಲಿ ಗ್ಯಾರಂಟಿ ಯೋಜನೆಯಾದ ಯುವನಿಧಿ ಯೋಜನೆಯಡಿಯಲ್ಲಿ ತೇರ್ಗಡೆಯಾದ ಪದವಿ, ಸ್ನಾತಕೋತ್ತರ ಹಾಗೂ ಡಿಪ್ಲಮೋ ಅರ್ಹತೆ ಹೊಂದಿದವರು ಯುವನಿಧಿ ಯೋಜನೆಯ ನಿರುದ್ಯೋಗಿ ಭತ್ಯೆ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಫೆಬ್ರವರಿ 15 ಕೊನೆಯ ದಿನವಾಗಿರುತ್ತದೆ. ದಾವಣಗೆರೆ ವಿಶ್ವವಿದ್ಯಾನಿಲಯ ಹಾಗೂ ಜಿಲ್ಲೆಯಾದ್ಯಂತ ಇರುವ ಪದವಿ ಕಾಲೇಜುಗಳು ಹಾಗೂ ಡಿಪ್ಲಮೋ ಕಾಲೇಜುಗಳು ಮತ್ತು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ವಿಶೇಷ ನೋಂದಣಿ ಕೌಂಟರ್ ತೆರೆಯಲಾಗಿದ್ದು, ವಿಶೇಷ ನೋಂದಣಿ ಅಭಿಯಾನವನ್ನು ಆಯೋಜಿಸಲಾಗಿದೆ. ಅಲ್ಲದೇ ಗ್ರಾಮಒನ್, ಕರ್ನಾಟಕ ಒನ್, ದಾವಣಗೆರೆ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲೂ ನಿರಂತರವಾಗಿ ಯುವನಿಧಿ ನೋಂದಣಿ ಮಾಡಿಕೊಳ್ಳಬಹುದು. ನಿರುದ್ಯೋಗಿ ಯುವಕ–ಯುವತಿಯರು ಈ ವಿಶೇಷ ನೋಂದಣಿ ಅಭಿಯಾನದ ಸದುಪಯೋಗವನ್ನು ಪಡೆಯಬಹುದು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಪಿ.ಬಿ. ರಸ್ತೆ, ದಾವಣಗೆರೆಯನ್ನು ಸಂಪರ್ಕಿಸಲು ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

## ನಗರಸಭಾ ಸದಸ್ಯೆ ಶೈಲಾ ಬಾಕಳೆ ಅವರಿಂದ ರಸ್ತೆ ಕಾಮಗಾರಿಗೆ ಭೂಮಿಪೂಜೆ

ಗದಗ : ನಗರದ 31 ನೇ ವಾರ್ಡಿನ ಜೋಡ ಮಾರುತಿ ದೇವಸ್ಥಾನದ ಹತ್ತಿರ ಹಾಗೂ ರಂಗನವಾಡ ಪ್ರದೇಶದಲ್ಲಿ ರಸ್ತೆ ಕಾಮಗಾರಿಗಳಿಗೆ ನಗರಸಭೆ ಸದಸ್ಯೆ ಶೈಲಾ ಬಾಕಳೆ ಅವರು ಭೂಮಿಪೂಜೆ ನೆರವೇರಿಸಿದರು.

ನಂತರ ಮಾತನಾಡಿದ ಅವರು 31 ನೇ ವಾರ್ಡಿನಲ್ಲಿನ ಜನರ ಸಮಸ್ಯೆಗಳಿಗೆ ಸ್ಪಂಧಿಸಿ ಹಂತ ಹಂತವಾಗಿ ಅಭಿವೃದ್ಧಿ ಕೆಲಸಗಳನ್ನು ಮಾಡಲಾಗುತ್ತಿದ್ದು, ಗುತ್ತಿಗೆದಾರರು ಗುಣಮಟ್ಟದ ಕೆಲಸ ಮಾಡುವ ಮೂಲಕ ಜನರ ವಿಶ್ವಾಸಗಳಿಸಬೇಕು ಎಂದು ಹೇಳಿದರು.

ರಾಜ್ಯ ಬಿಜೆಪಿ ಹಿಂದುಳಿದ ವರ್ಗಗಳ ಕಾರ್ಯದರ್ಶಿ ಸುಧೀರ ಕಾಟಿಗರ ಅವರು ಮಾತನಾಡಿ, ಸರಕಾರದಿಂದ ಇನ್ನಷ್ಟು ಅನುದಾನವನ್ನು ಪಡೆದು 31 ನೇ ವಾರ್ಡನ್ನು ಅಭಿವೃದ್ದಿಗೊಳಿಸುವ ಮೂಲಕ



ಅವಳಿ ನಗರದಲ್ಲಿ ಮಾದರಿ ವಾರ್ಡವನ್ನಾಗಿ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಾರ್ಡಿನ ಹಿರಿಯರಾದ ಲೋಕನಾಥಸಾ ಬದಿ, ಜಗದೀಶ ಶೇಜವಾಡೆಕರ, ರಾಜು ಕಾಟಿಗರ, ನಿರಂಜನ ಓಝಾ, ಇರ್ಷಾದ ಮಾನ್ವಿ, ನಗರಸಭೆ ಮಾಜಿ ಸದಸ್ಯೆ ಯಲ್ಲೂಬಾಯಿ ನಿರಂಜನ, ಉದ್ಯಮಿ ಕಿರಣ ಬಾಂಡಗೆ, ಶ್ರೀಕಾಂತ ಬಾಕಳೆ, ರಾಮಚಂದ್ರಸಾ ಶಿದ್ಲಿಂಗ, ರಾಜೇಶ ಖೋಡೆ, ನಾಸೀರ್ ನರೇಗಲ್, ಅಂಜು ಖಟವಟೆ, ಶ್ರೀಕಾಂತ ಪವಾರ, ಪ್ರಕಾಶ ಕಾಟಿಗರ, ನಾಗರಾಜ ಖೋಡೆ, ಚಂದ್ರಕಾಂತ ಬಾಕಳೆ, ಮಾಧು ಬದಿ, ರವಿ ಚವ್ಹಾಣ, ಭರತ ಮಾರೆಪ್ಪನವರ, ಮಯೂರ ಕಾಟಿಗರ, ವಿಠ್ಠಲ ಬದಿ, ಸರೋಜಾಬಾಯಿ ಶೇಜವಾಡೆಕರ, ಸುಮಿತ್ರಾಬಾಯಿ ಕಾಟಿಗರ, ರುಕ್ಮಿಣಿಬಾಯಿ ಕಾಟಿಗರ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

## ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರ ಜಿಲ್ಲಾ ಪ್ರವಾಸ

**ದಾವಣಗೆರೆ:** ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಡಾ.ಪುರುಷೋತ್ತಮ ಬಿಳಿಮಲೆ ಇವರು ಫೆಬ್ರವರಿ 9 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಫೆ.9 ರಂದು ಬೆಳಿಗ್ಗೆ 11 ಗಂಟೆಗೆ ದಾವಣಗೆರೆ ಆಗಮಿಸಿ, ನಂತರ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಂಜೆ 4.30ಕ್ಕೆ ಬೆಂಗಳೂರಿಗೆ ತೆರಳುವರೆಂದು ತಿಳಿಸಿದ್ದಾರೆ.

## ಮಹಿಳಾ ಸ್ವ–ಸಹಾಯ ಸಂಘಗಳಿಂದ ಅರ್ಜಿ ಆಹ್ವಾನ

**ದಾವಣಗೆರೆ:** ಕೇಂದ್ರ ಪುರಸ್ಕೃತ ಅಮೃತ್–2.0 ಅಭಿಯಾನದ ಅಮೃತ್ ಮಿತ್ರ ಕಾರ್ಯಕ್ರಮದಡಿ ನಗರಸಭೆ ವ್ಯಾಪ್ತಿಯಲ್ಲಿ ನಿರ್ವಹಣೆ ಮಾಡಲು ಡೇ–ನಲ್ಮ್ ಅಭಿಯಾನದಡಿ ನೊಂದಾಯಿತ ಮಹಿಳಾ ಸ್ವ–ಸಹಾಯ ಸಂಘಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಡೇ–ನಲ್ಮ್ ಯೋಜನೆಯಡಿ ನೊಂದಾಯಿಸಿಕೊಂಡ ಆಸಕ್ತ ಸ್ವ–ಸಹಾಯ ಗುಂಪುಗಳ ಸದಸ್ಯರುಗಳು ತಮ್ಮ ಆಸಕ್ತಿಯನ್ನು ಮುಚ್ಚಿದ ಲಕೋಟೆಯಲ್ಲಿ ನಗರಸಭೆ ಹರಿಹರ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಫೆಬ್ರವರಿ 15 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಚೆ?ರಿಯ ಡೇ–ನಲ್ಮ್ ಸಂಪರ್ಕಿಸಲು ಪೌರಾಯುಕ್ತರು ತಿಳಿಸಿದ್ದಾರೆ.

## “ನಟನಂ ಕಲಾ ಸಂಸ್ಕೃತಿ ಉತ್ಸವ– 2025”

**ಶಿವಮೊಗ್ಗ:** ಶಿವಮೊಗ್ಗ ರಾಜೇಂದ್ರ ನಗರದ ಪ್ರತಿಷ್ಠಿತ ನಟನಂ ಬಾಲ ನಾಟ್ಯ ಕೇಂದ್ರವು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಕರ್ನಾಟಕ ಕಲಾಶ್ರೀ ವಿದ್ವಾನ್ ಡಾ.ಎಸ್. ಕೇಶವಕುಮಾರ್ ಪಿಳ್ಳೈ ಅವರ ನೇತೃತ್ವದಲ್ಲಿ ಫೆ 10ರ ಸೋಮವಾರ ಸಂಜೆ 5:00ಗೆ ಕುವೆಂಪುರಂಗ ಮಂದಿರದಲ್ಲಿ “ನಟನಂ ಕಲಾ ಸಂಸ್ಕೃತಿ ಉತ್ಸವ– 2025” ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಭರತನಾಟ್ಯ ವಿಧುಷಿ ಶ್ರೀವಲ್ಲಿ ಅಂಬರೀಶ್ ಹಾಗೂ ಅಂಬರೀಶ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ನಟನಂ ಬಾಲನಾಟ್ಯ ಕೇಂದ್ರದ ಕಾರ್ಯದರ್ಶಿ ಆರ್. ಶೇಖರ್ ಅಧ್ಯಕ್ಷತೆ ವಹಿಸಲಿದ್ದಾರೆ. ಇಡೀ ಉತ್ಸವದ ನಿರ್ದೇಶನವನ್ನು ಡಾ. ಎಸ್. ಕೇಶವಕುಮಾರ್ ಪಿಳ್ಳೈ ವಹಿಸಲಿದ್ದಾರೆ.

ಇದರಲ್ಲಿ ವಿಶೇಷವಾಗಿ ಒಡಿಸ್ಸಿ ನೃತ್ಯವನ್ನು ಬೆಂಗಳೂರಿನ ನವಭಾವ ನೃತ್ಯ ಶಾಲೆಯ ಫೌಂಡರ್ ಗುರು ಸೌಮ್ಯ ರಂಗಸ್ವಾಮಿ ಪ್ರದರ್ಶಿಸಲಿದ್ದಾರೆ.

ಅಂತೆಯೇ ಬೆಂಗಳೂರಿನ ನಾಟ್ಯಪ್ರಿಯ ಕಲಾನಿಕೇತನ ಕೇಂದ್ರದ ಫೌಂಡರ್ ವಿದುಷಿ ಸುಪ್ರಿಯ ಕಾರ್ತಿಕೇಯನ್ ಕೂಚುಪುಡಿ ನೃತ್ಯವನ್ನು ಪ್ರದರ್ಶಿಸಲಿದ್ದಾರೆ.

ಮೋಹಿನಿ ಆಟಂ ನಾಟ್ಯವನ್ನು ಶಿವಮೊಗ್ಗ ಬೊಮ್ಮನಕಟ್ಟೆಯ ಶ್ರೀ ಶಿವಾನಿ ಭರತನಾಟ್ಯ ಕಲಾ ಕೇಂದ್ರದ ವಿದುಷಿ ಚೈತ್ರ ಕಾರ್ತಿಕ್ ಪ್ರದರ್ಶಿಸಲಿದ್ದು, ಭರತನಾಟ್ಯಂ ಅನ್ನು ನಟನಂ ಕೇಂದ್ರದ ವಿಧುಷಿ ನಾಟ್ಯಶ್ರೀ ಚೇತನ್ ಹಾಗೂ ವಿದ್ವಾನ್ ಚೇತನ್ ಎಸ್. ಸಿ. ಪ್ರದರ್ಶಿಸಲಿದ್ದು, ಅದೇ ಬಗೆಯಲ್ಲಿ ಬೆಂಗಳೂರಿನ

ರಾಜರಾಜೇಶ್ವರಿ ನಗರದ ನಾಟ್ಯಶಂಕರ ನೃತ್ಯಾಲಯದ ವಿದ್ವಾನ್ ಮಾಲತೇಶ್ ಟಿಕಾರೆ ಪ್ರದರ್ಶಿಸಲಿದ್ದಾರೆ.

ವಿಶೇಷ ಆಕರ್ಷಣೆಯಾಗಿ ದಕ್ಷ ಯಜ್ಞ ನೃತ್ಯ ರೂಪಕವನ್ನ ವಿದ್ವಾನ್ ಡಾ. ಎಸ್. ಕೇಶವಕುಮಾರ್ ಪಿಳ್ಳೈ ಪ್ರದರ್ಶಿಸಲಿದ್ದಾರೆ. ಈ ಸಂದರ್ಭದಲ್ಲಿ ಜಪಾನಿನ ಫ್ಯಾನ್ ಡ್ಯಾನ್ಸ್ ಹಾಗೂ ಈಜಿಪ್ಟಿನ ವಿಂಗ್ ಡ್ಯಾನ್ಸನ್ನು ಕಲಾವಿದರು ಪ್ರದರ್ಶಿಸಲಿದ್ದಾರೆ.

ಕಾರ್ಯಕ್ರಮಕ್ಕೆ ಸರ್ವರನ್ನು ನಟನಂ ಬಾಲನಾಟ್ಯ ಕೇಂದ್ರ ಹಾಗೂ ಕಲಾವಿದರು, ಪೋಷಕರು ಆತ್ಮೀಯವಾಗಿ ಸ್ವಾಗತಿಸಿದ್ದಾರೆ.

## ಮೈಸೂರು ಕಿಸಾನ್ ಮಾಲ್ ಸ್ಥಾಪಿಸಲು ಅರ್ಜಿ ಆಹ್ವಾನ

**ದಾವಣಗೆರೆ;** ಪ್ರಸಕ್ತ ಸಾಲಿನಲ್ಲಿ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ತೋಟಗಾರಿಕೆ ಇಲಾಖೆ, ಅವರಣ, ವಿನೋಬನಗರ ದಾವಣಗೆರೆ ಇಲ್ಲಿ ಮೈಸೂರು ಕಿಸಾನ್ ಮಾಲ್ ಸ್ಥಾಪಿಸಲು ರೈತ ಉತ್ಪಾದಕರ ಸಂಸ್ಥೆಯಿಂದ ಆಸಕ್ತಿ ಅಭಿವ್ಯಕ್ತಪಡಿಸುವಿಕೆ ಪೊರಕ್ಯುರ್ಮೆಂಟ್ ಪೋರ್ಟಲ್ ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. https//kppp.karnataka.gov.in/#/portal/portal-home ಫೆಬ್ರವರಿ 17 ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ:9663067019 ನ್ನು ಸಂಪರ್ಕಿಸಲು ತೋಟಗಾರಿಕೆ ನಿರ್ದೇಶಕರಾದ ರಾಘವೇಂದ್ರ ಪ್ರಸಾದ್ ತಿಳಿಸಿದ್ದಾರೆ.

## ಗಂಡು ಮಗುವಿನ ಪೋಷಕರ ಪತ್ತೆಗಾಗಿ ಮನವಿ

**ಶಿವಮೊಗ್ಗ:** ಇಲ್ಲಿನ ಶ್ರೀರಾಂಪುರ ನಗರ ಮೊದಲ ತಿರುವಿನ ರಸ್ತೆಯ ಪಕ್ಕದಲ್ಲಿ ಕೈಚೀಲದಲ್ಲಿ ಇತ್ತೀಚೆಗೆ ಸುಮಾರು 1 ದಿನದ ಗಂಡು ಮಗು ಪತ್ತೆಯಾಗಿದ್ದು ಸಾರ್ವಜನಿಕರು ರಕ್ಷಣೆ ಮಾಡಿ ಜಿಲ್ಲಾ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಿ, ಡಿಸಿ ಪಿಯು ಘಟಕ ಮತ್ತು ಮಕ್ಕಳ ಸಹಾಯವಾಣಿ ಅಧಿಕಾರಿಗಳು, ಮಕ್ಕಳ ಕಲ್ಯಾಣ ಸಮಿತಿ ಶಿವಮೊಗ್ಗ ಇಲ್ಲಿಗೆ ದಾಖಲಿಸಿದ್ದರು. ಮಗುವಿನ ಮುಂದಿನ ಪುನರ್ವಸತಿ ಹಿತದೃಷ್ಠಿಯಿಂದ ಮಗುವಿನ ಸಂಬಂಧಿ ಕರು ಯಾರಾದರೂ ಇದ್ದಲ್ಲಿ ಅಥವಾ ಪೋಷಕರ ಬಗ್ಗೆ ಮಾಹಿತಿ ದೊರೆತಲ್ಲಿ ಸೂಕ್ತ ದಾಖಲಾತಿಯೊಂದಿಗೆ ಅಧೀಕ್ಷಕರು, ಸರ್ಕಾರಿ ಬಾಲಕರ ಬಾಲಮಂದಿರ, ಆಲ್ಕೊಳ, ಶಿವಮೊಗ್ಗ ಇವರ ಕಛೇರಿಗೆ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 08182-295511 ಗೆ ಸಂಪರ್ಕಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕ ಟಣೆಯಲ್ಲಿ ತಿಳಿಸಿದ್ದಾರೆ.

## ಸೂರ್ಯ ನಮಸ್ಕಾರದಿಂದ ಆರೋಗ್ಯ ವೃದ್ಧಿ

**ಶಿವಮೊಗ್ಗ:** ಸೂರ್ಯ ನಮಸ್ಕಾರಗಳ ನಿತ್ಯ ಅಭ್ಯಾಸದಿಂದ ಆಯುಷ್ಯ ಮತ್ತು ಆರೋಗ್ಯ ವೃದ್ದಿಯಾಗುವುದು ಎಂದು ಶಾಸಕ ಎಸ್. ಎನ್.ಚನ್ನಬಸಪ್ಪ ಹೇಳಿ ದರು.ಮಂಗಳವಾರ ಸೂರ್ಯ ಜಯಂತಿ" ಅಂಗವಾಗಿ ಕಣಾದ ಯೋಗ & ರಿಸರ್ಚ್ ಫೌಂಡೇ ಷನ್ (ರಿ) ಮತ್ತು ಯುವ ಸಬಲೀಕರಣ & ಕ್ರೀಡಾ ಇಲಾಖೆಯ ಸಹಯೋಗದಲ್ಲಿ ನೆಹರು ಕ್ರೀಡಾಂಗಣದ ಸಭಾಂಗಣದಲ್ಲಿ ಮಾತನಾಡಿದರು.ವಿಶೇಷವಾಗಿ ಮಕ್ಕಳಿಗೆ ಸ್ಮರಣ ಶಕ್ತಿ, ಏಕಾಗ್ರತೆ ಹೆಚ್ಚಿಸಲು ಸಹಾಯಕವಾಗುತ್ತದೆ, ಆದ್ದ ರಿಂದ ಆರೋಗ್ಯಕ್ಕಾಗಿ ಕನಿಷ್ಠ ಸೂರ್ಯನಮಸ್ಕಾರ ಮಾಡುವ ಹವ್ಯಾಸ ಬೆಳೆಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಯೋಗಾಚಾರ್ಯ ಅನಿಲ್‌ಕುಮಾರ್. ಹೆಚ್.ಶೆಟ್ಟರ್‌ರವರ ಮಾರ್ಗದರ್ಶ ನದಲ್ಲಿ ಜರುಗಿತು. ಸೂರ್ಯ ಮಂಡಲ ಪೂಜೆಯ ನಂತರದಲ್ಲಿ ಕ್ರೀಡಾಪಟು ಗಳು ಮತ್ತು ನಿತ್ಯಯೋಗಾಭ್ಯಾಸಿಗಳು ಮತ್ತು ಸಾರ್ವಜನಿಕರು ಸಾಮೂಹಿಕವಾಗಿ ಬೀಜಾಕ್ಷರ ಮಂತ್ರಗಳ ಸಹಿತವಾದ ಸೂರ್ಯ ಶತನಾಮಾವಳಿಯ ಪಠಣದೊಂ ದಿಗೆ 60 ನಿಮಿಷಗಳಲ್ಲಿ 108 ಸೂರ್ಯ ನಮಸ್ಕಾರಗಳನ್ನು ಮಾಡಿದರು. ಕಣಾದ ಯೋಗ ಕೇಂದ್ರದ ಬೆಲಗೂರು ಮಂಜುನಾಥ್ ಅವರು ಅತ್ಯಂತ ಕಿರಿಯ ವಯಸ್ಸಿನ ಅಪ್ರಮೇಯನಿಗೆ ನಗದು ಬಹುಮಾನವನ್ನು ನೀಡಿದರು.ಚಂದ್ರಿಕಾ ಮೂರ್ತಿ ಯವರು ಬೀಜಾಕ್ಷರ ಸಹಿತವಾಗಿ 108 ಸೂರ್ಯಾಷ್ಟೋತ್ತರ ಶತನಾಮಾವಳಿಯನ್ನು ಪಠಿಸಿದರು,10 ಎಣಿಕೆಗಳ ಈ ಸೂರ್ಯನಮಸ್ಕಾರ ಮಾಡು ವಾಗ ಪ್ರತಿಯೊಂದು ಮಂಡಲ ದಲ್ಲಿ ಒಂದು ವಿಷಯಕ್ಕೆ ಸಂಬಂಧಿಸಿದ 10 ಪದಗಳ "ಜ್ಞಾನ ಯೋಗ"ದ ಕ್ರಿಯಾ ಶೀಲತೆಯನ್ನು ಯೋಗಬಂಧುಗಳಾದ ಕಾರ್ನಳ್ಳಿ ಮಂಜು, ಕಲರ್ಸ ಹರ್ಷ,ರಘು ನಾಥ್, ದೀಪುರವರು ನಡೆಸಿ ಕೊಂಡು "ಕೇಳಿ-ಹೇಳಿ" ಎಂಬ ಸುತ್ತುಗಳು ಎಲ್ಲರ ಮೆಚ್ಚುಗೆ ಗಳಿಸಿತು.ಸುಬ್ರಹ್ಮಣ್ಯ ಆಚಾರ್ಯರು ಪೂಜಾ ಕಾರ್ಯಕ್ರಮ ನೆರವೇರಿದರು.

## ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಜಾರಿಗೆ ಮನವಿ

**ಚಿಕ್ಕಮಗಳೂರು:** ನಗರದ ಐಜಿ ರಸ್ತೆಯ ಎರಡೂ ಬದಿಗಳಲ್ಲಿ ಪ್ರತಿ ದಿನ ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಜಾರಿಗೆ ತರುವಂತೆ ಶಾಸಕ ಎಚ್.ಡಿ.ತಮ್ಮಯ್ಯ ಅವರನ್ನು ಆ ರಸ್ತೆಯ ವ್ಯಾಪಾರಸ್ಥರು ಒತ್ತಾಯಿಸಿದ್ದಾರೆ. ಐಜಿ ರಸ್ತೆ ಕಟ್ಟಡ ಮಾಲೀಕರು, ವ್ಯಾಪಾರಸ್ಥರ ಸಂಘದ ನೇತೃತ್ವದಲ್ಲಿ ಶಾಸಕ ಎಚ್.ಡಿ.ತಮ್ಮಯ್ಯ ಅವರನ್ನು ಭೇಟಿ ಮಾಡಿದ ವ್ಯಾಪಾರಸ್ಥರು ಈ ಸಂಬಂಧ ಮನವಿ ಸಲ್ಲಿಸಿದರು.ಐಜಿ ರಸ್ತೆಯಲ್ಲಿ ಪ್ರಸ್ತುತ ಒಂದೊಂದು ದಿನ ಒಂದೊಂದು ಬದಿಯಲ್ಲಿ ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಜಾರಿಯಲ್ಲಿ ಇರುವುದರಿಂದಾಗಿ ತಮ್ಮ ಅಂಗಡಿ ಮುಂಗಟ್ಟುಗಳಲ್ಲಿ ವ್ಯವಹಾರ ನಡೆಯುತ್ತಿಲ್ಲ ಎಂದು ಅಳಲು ತೋಡಿಕೊಂಡರು.ರಸ್ತೆಯಲ್ಲಿ ಜನ, ವಾಹನ ಸಂಚಾರ ಅತ್ಯಧಿಕವಾಗಿರುವುದರಿಂದ ವಾಹನಗಳಲ್ಲಿ ಬರುವ ನಾಗರೀಕರು ಎತ್ತರವಾಗಿ ಕಟ್ಟಿರುವ ಡಿವೈಡರ್‌ಗಳನ್ನು ದಾಟಿ ಅಂಗಡಿಗಳಿಗೆ ವ್ಯಾಪಾರ ಮಾಡಲು ಬರುತ್ತಿಲ್ಲ. ಇದರಿಂದಾಗಿ ಸಾಲ ಸೋಲ ಮಾಡಿ ಬಂಡವಾಳ ಹಾಕಿರುವ ನಾವು ವ್ಯಾಪಾರವಿಲ್ಲದೆ ಪರದಾಡುವಂತಾಗಿದೆ ಎಂದರು.ಎರಡೂ ಬದಿಗಳಲ್ಲಿ ಪ್ರತಿದಿನ ಪಾರ್ಕಿಂಗ್ ವ್ಯವಸ್ಥೆ ಜಾರಿಗೆ ತರುವುದರಿಂದ ಎರಡೂ ಬದಿಯ ಅಂಗಡಿಗಳಿಗೆ ವ್ಯಾಪಾರವಾಗುತ್ತದೆ ಎಂದು ತಿಳಿಸಿದರು.ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಂ.ಎಲ್.ಮೂರ್ತಿ ಐಜಿ ರಸ್ತೆ ಕಟ್ಟಡ ಮಾಲೀಕರು, ವ್ಯಾಪಾರಸ್ಥರ ಸಂಘದ ಅಧ್ಯಕ್ಷ ದಯಾನಂದ್ ನಾಯ್ಡು, ಪ್ರಧಾನ ಕಾರ್ಯದರ್ಶಿ ಜಗದೀಶಾಚಾರ್ ವ್ಯಾಪಾರಸ್ಥರಾದ ವಿಕ್ರಂ, ಸಿ.ಮನೂಪ್, ಪಾಶಾ, ಅಕ್ರಂ ಹಾಜರಿದ್ದರು.



## ಹೆದ್ದಾರಿಗೆ ಉರುಳಿ ಬಿದ್ದ ಗೋಣಿ ಮರ

ಆಲ್ದೂರು: ಕೂದುವಳ್ಳಿ ಲೂರ್ದು ಮಾತೆ ಚರ್ಚ್ ಮುಂಭಾಗ ಹಾದುಹೋಗುವ ರಾಜ್ಯ ಹೆದ್ದಾರಿ 27ರ ಬದಿಯಲ್ಲಿದ್ದ ಗೋಣಿ ಮರ ಹೆದ್ದಾರಿಗೆ ಉರುಳಿ ಬಿದ್ದಿದೆ.

ಈ ಸಂದರ್ಭ ಆಲ್ದೂರು ರೈಸ್ಮಿಲ್ ರಸ್ತೆಯ ನಿವಾಸಿಗಳಾದ ದಿವಾಕರ್ ಸಹಿತ ಕುಟುಂ ಬದಮೂವರು ಆಟೋದಲ್ಲಿ ಸಖರಾಯಪಟ್ಟಣದ ಸಗನಿರಂಗನಾಥಸ್ವಾಮಿ ದೇ ವಸ್ಥಾನಕ್ಕೆ ತೆರಳುತ್ತಿದ್ದು ಮರದ ಕೊಂಬೆಯೊಂದು ಆಟೊ ಮೇಲೆ ಬಿದ್ದು, ಆಟೊ ಜಖಂಗೊಂಡಿದೆ.

1ತಾಸು ಟ್ರಾಫಿಕ್ ಜಾಮ್ ಉಂಟಾಗಿ ವಾಹನ ಸವಾರರು ಪರದಾಡುವಂ ತಾಯಿತು. ಸ್ಥಳೀಯರಾದ ಕಣತಿ ಮಹಮ್ಮದ್ ಅವರು ತಮ್ಮ ಸಿಬ್ಬಂದಿಯೊಂದಿಗೆ ಮರವನ್ನು ತುಂಡರಿಸಲು ಸಹಕರಿಸಿದರು.

ಘಟನಾ ಸ್ಥಳಕ್ಕೆ ಬಂದ ಉಪವಲಯ ಅರಣ್ಯ ಅಧಿಕಾರಿ ಸಂದೀಪ್, ಇನ್ನುಳಿದ ಮರವನ್ನು ರಸ್ತೆ ಬದಿಗೆ ಸಿಬ್ಬಂದಿಗಳ ಸಹಾಯದೊಂದಿಗೆ ತೆರವು ಮಾಡಿದರು.

# ಅಡಿಕೆ ತೋಟದಲ್ಲಿ ಕ್ಷಮಾ ಕಟ್ಟೆ



> ಮಾರುಕಟ್ಟೆ ಬೇಡಿಕೆಗೆ ಹೊಂದಿಕೆಯಾಗುವಂತೆ ತರಕಾರಿ, ಹೂವುಗಳನ್ನು ಬೆಳೆಯುತ್ತಿದ್ದೇನೆ. ಸ್ಥಳೀಯವಾದ ಭತ್ತದ ತಳಿಯನ್ನು ಬಳಸಿ ಗದ್ದೆ ಮಾಡುತ್ತಿದ್ದೇವೆ. ಕುರಿ, ಕೋಳಿ ಸಾಕಣೆಯೂ ಆದಾಯ ನೀಡುತ್ತಿದೆ. ಮಾರುಕಟ್ಟೆಗೆ ಅನುಕೂಲವಾಗುವಂತೆ ವಾಟ್ಸಪ್ ಗ್ರೂಪ್‌ಗಳನ್ನು ಬಳಕೆ ಮಾಡುತ್ತಿದ್ದೇನೆ.
> **-ಕ್ಷಮಾ ಕಟ್ಟೆ,** ಸಾಧಕ ರೈತ ಮಹಿಳೆ.

**ಶಿವಮೊಗ್ಗ:** ಕೃಷಿ ಕ್ಷೇತ್ರದಲ್ಲೂ ಮಹಿಳೆಯರು ತಮ್ಮ ಛಾಪು ಮೂಡಿಸಿರುವ ಅದೆಷ್ಟೋ ಉದಾಹರಣೆಗಳಿವೆ. ಬದಲಾದ ಕಾಲಘಟ್ಟದಲ್ಲಿ ಅಧುನಿಕತೆಯನ್ನು ಅಳವಡಿಸಿ ಕೊಂಡು ಕೃಷಿಯಲ್ಲಿ ಯಶಸ್ವಿಯಾದ ಅನೇಕ ಮಹಿಳೆಯರು ನಮ್ಮ ನಡುವೆ ಇದ್ದಾರೆ. ತೀರ್ಥಹಳ್ಳಿ ಸಮೀಪದ ನೆರಟೂರು ಬೋರ್ಡ್‌ಗಲ್ ಗ್ರಾಮದ ಆಧು ನಿಕ ರೈತ ಮಹಿಳೆ ಕ್ಷಮಾ ಕಟ್ಟೆ ಕೂಡಾ ಒಬ್ಬರು.

ಬೆಂಗಳೂರಿನಲ್ಲಿ ಅನಿಮೇಷನ್ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದ ಕ್ಷಮಾ ಕಟ್ಟೆ ಎಂಟು ವರ್ಷದ ಹಿಂದೆ ಗ್ರಾಮಕ್ಕೆ ಮರಳಿದರು. ತಂದೆ ಕಾಲದಿಂದಲೂ ಮಾಡು ತ್ತಿದ್ದ ಕೃಷಿಗೆ ಹೊಸ ಟಚ್ ನೀಡಿದರು. ಕ್ರಮೇಣ ಕೃಷಿಯಲ್ಲಿ ಆಳವಾದ ಜ್ಞಾನ ಪಡೆದ ಪರಿಣಾಮ ಇಂದು ಸಮಗ್ರ ಕೃಷಿಯಲ್ಲಿ ಮನೆ ಮಾತಾಗಿದ್ದಾರೆ. ಪುಷ್ಪ ಕೃಷಿ, ಕೋಳಿ ಸಾಕಣೆ, ಕುರಿ ಸಾಕಣೆ, ಭತ್ತ, ಅಡಕೆ, ಡ್ರ್ಯಾಗನ್ ಫ್ರೂಟ್, ತೆಂಗು...ಹೀಗೆ ಬಗೆ ಬಗೆಯ ಬೆಳೆಯ ಮೂಲಕ ಕ್ಷಮಾ ಕಟ್ಟೆ ಯಶಸ್ಸು ಕಂಡುಕೊಂಡಿದ್ದಾರೆ. ಹೂವು, ತರಕಾರಿಗೆ ಸ್ಥಳೀಯವಾಗಿ ಮಾರುಕಟ್ಟೆಯನ್ನು ಕಂಡುಕೊಂಡಿರುವ ಇವರು, ವರ್ಷಪೂರ್ತಿ ತರಕಾರಿ, ಸೊಪ್ಪು ಬೆಳೆದು ಆದಾಯ ಗಳಿಸುತ್ತಿದ್ದಾರೆ. ಪತಿ ಲಿಂಗರಾಜ್ ಇವರಿಗೆ ಅಗತ್ಯ ಮಾರ್ಗದರ್ಶನ ಹಾಗೂ ಸಹಕಾರ ನೀಡುತ್ತಿದ್ದಾರೆ.

ಎರಡು ಪಾಲಿಹೌಸ್‌ಗಳನ್ನು ನಿರ್ಮಿಸಿಕೊಂಡಿದ್ದಾರೆ. ಒಂದರಲ್ಲಿ ಚೆಂಡು ಹೂವು, ಸೇವಂತಿಗೆ, ಮತ್ತೊಂದರಲ್ಲಿ ಬೀನ್ಸ್, ಹೀರೆಕಾಯಿ, ಬಗೆ ಬಗೆಯ ಸೊಪ್ಪುಗಳು, ನವಿಲುಕೋಸು, ಟೊಮ್ಯಾಟೊ ಮುಂತಾದ ತರಕಾರಿಗಳನ್ನು ಬೆಳೆ ಯುತ್ತಿದ್ದಾ-ರೆ. ಆರಂಭದಲ್ಲಿ ಪುಷ್ಪ ಕೃಷಿಗೆ ಹೆಚ್ಚು ಒತ್ತು ನೀಡಿ, ಆಂತೋ-ರಿಯಂ, ಜರ್ಬರಾ ಮುಂತಾದ ಹೂವುಗಳನ್ನು ಬೆಳೆಯಬೇಕೆಂದಿದ್ದೆ. ಅದರ ಬಗ್ಗೆ ಹೆಚ್ಚೇನೂ ಜ್ಞಾನವಿಲ್ಲದ ಕಾರಣ ಕೈ ಬಿಟ್ಟು ಚೆಂಡು ಹೂವು, ಸೇವಂತಿಗೆ ಬೆಳೆ ಯಲು ನಿರ್ಧರಿಸಿದೆ



ಎಂದು ಕ್ಷಮಾ ಆರಂಭದ ದಿನಗಳನ್ನು ನೆನಪಿಸಿಕೊಂಡಿದ್ದಾರೆ.ಒಟ್ಟು ಜಮೀನಿನ ಎರಡು ಎಕರೆಯಲ್ಲಿ ಭತ್ತ ಬೆಳೆಯಲಾಗುತ್ತಿತ್ತು. ಉಳಿದ ಭೂಮಿಯನ್ನು ಹಾಗೆಯೇ ಬಿಟ್ಟಿದ್ದರು. ಅದನ್ನು ಸದ್ಬಳಕೆ ಮಾಡಿಕೊಳ್ಳಲು ತೀರ್ಮಾನಿಸಿದೆ. ಅದರ ಪರಿಣಾಮವಾಗಿ ಇಂದು ಒಂದು ಎಕರೆಯಲ್ಲಿ ಅಡಕೆ ಫಸಲು ಬರುತ್ತಿದೆ. ಉಳಿದ ಎರಡು ಎಕರೆಯಲ್ಲಿ ಕೆಲವೇ ವರ್ಷಗಳಲ್ಲಿ ಫಸಲು ಕೈಸೇರಲಿದೆ. ಕೋಳಿ ಹಾಗೂ ಕುರಿ ಸಾಕಣೆಗೆ ಪ್ರತ್ಯೇಕ ಶೆಡ್ ನಿರ್ಮಿಸಿಕೊಂಡಿ ದ್ದೇನೆ ಎಂದು ತಮ್ಮ ಸಮಗ್ರ ಕೃಷಿಯ ಬಗ್ಗೆ ವಿವರಣೆ ನೀಡುತ್ತಾ-ರೆ ಕ್ಷಮಾ ಕಟ್ಟೆ.ಇವರ ಸಾಧನೆಯನ್ನು ಪರಿಗಣಿಸಿ ಕೃಷಿ ಇಲಾಖೆಯಿಂದ 2020-21ರಲ್ಲಿ ತೀರ್ಥಹಳ್ಳಿ ತಾಲೂಕಿನ ಸಾಧಕ ರೈತ ಮಹಿಳೆ ಪುರಸ್ಕಾರ ನೀಡಿ ಗೌರವಿಸ ಲಾಗಿದೆ. ಸಹ್ಯಾದ್ರಿ ಪ್ರಕಾಶನದವರು ಇವರ ಸಮಗ್ರ ಕೃಷಿಯನ್ನು ಗುರುತಿಸಿ ಸನ್ಮಾನಿಸಿದ್ದಾರೆ. ಮನಸ್ಸಿದ್ದರೆ ಮಾರ್ಗವಿದೆ ಎಂಬುದಕ್ಕೆ ಕ್ಷಮಾ ಜ್ವಲಂತ ಉದಾ ಹರಣೆ. ರಾಜಧಾನಿಯಲ್ಲಿ ಕೈ ತುಂಬಾ ಸಂಬಳ ಬರುವ ಕೆಲಸವನ್ನು ಬಿಟ್ಟು ಕೃಷಿಯತ್ತ ಮುಖ ಮಾಡಿರುವುದು ಇತರರಿಗೂ ಪ್ರೇರಣೆಯಾಗಿದೆ.

## ಎಸ್.ಸಿ.ಪಿ.-ಟಿ.ಎಸ್.ಪಿ. ಕಾಯ್ದೆಗೆ ಪ್ರತ್ಯೇಕ ಶಾಶ್ವತ ನ್ಯಾಯಮಂಡಳಿ ರಚನೆಗೆ ಆಗ್ರಹ

**ಚಿಕ್ಕಮಗಳೂರು:** ಕರ್ನಾಟಕ ರಾಜ್ಯದಲ್ಲಿ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಕಾಯ್ದೆಗೆ ಪ್ರತ್ಯೇಕ, ಶಾಶ್ವತ ನ್ಯಾಯಮಂಡಳಿ ರಚನೆ ಮಾಡುವಂತೆ ವಿವಿಧ ಪ್ರಗತಿಪರ ಸಂಘಟನೆಗಳು ಸರ್ಕಾರವನ್ನು ಒತ್ತಾಯಿಸಿವೆ. ಈ ಸಂಬಂಧ ರಾಜ್ಯದ ಮುಖ್ಯಮಂತ್ರಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಗಿದೆ ಎಂದು ಭಾರತದ ಶೋಷಿತ ವರ್ಗಗಳ ಸಮೂಹದ ಸಂಸ್ಥಾಪಕ ಡಾ. ಎಸ್.ಆರ್.ಶಿವುಪ್ರಸಾದ್, ಸಂವಿಧಾನ ಸಂರಕ್ಷಣೆ ವೇದಿಕೆಯ ಮುಖಂಡ ಕೃಷ್ಣಮೂರ್ತಿ, ದಲಿತ ಸಂಘರ್ಷ ಸಮಿತಿಯ ಮರ್ಲೆ ಅಣ್ಣಯ್ಯ, ಬಿಳೇಕಲ್ಲು ಬಾಲಕೃಷ್ಣ, ದಂಟರಮಕ್ಕಿ ಶ್ರೀನಿವಾಸ್, ವಿರೂಪಾಕ್ಷ, ಛಲವಾದಿ ಮಹಾಸಭಾದ ಜಿಲ್ಲಾಧ್ಯಕ್ಷ ಬಿ.ಎಂ.ರಘು, ಅಂಬೇಡ್ಕರ್ ಸೇನೆಯ ಜಿಲ್ಲಾಧ್ಯಕ್ಷ ಸಂತೋಷ್‌ಕುಮಾರ್, ಪಿ.ಟಿ.ಚಂದ್ರಶೇಖರ್ ಮನವಿ ಸಲ್ಲಿಸಿದ್ದಾರೆ.ಸಾಮಾಜಿಕ ರಕ್ಷಣೆಗಳ ನೈಸರ್ಗಿಕ ಸಂಪನ್ಮೂಲಗಳು, ಆರ್ಥಿಕ ಷೇರುಗಳಲ್ಲಿ ತಮ್ಮ ಕಾನೂನುಬದ್ದ ಪಾಲನ್ನು ಕಳೆದುಕೊಂಡಿರುವ ಎಸ್ಸಿ ಎಸ್ಟಿ ಜನಸಂಖ್ಯೆಯ ಉನ್ನತಿಗಾಗಿ ವಿವಿಧ ಅವಕಾಶಗಳನ್ನು ಸೃಷ್ಟಿಸುವ ಉದ್ದೇಶದಿಂದ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆಗಳನ್ನು ಭಾರತದಲ್ಲಿ 1970ರಲ್ಲಿ ಪ್ರಾರಂಭಿಸಲಾಯಿತು. ರಾಜ್ಯದಲ್ಲಿ ಈವರೆಗೂ ಆಡಳಿತ ನಡೆಸಿರುವ ಸರ್ಕಾರಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿಲ್ಲ. ಈ ನಿಧಿಗಳ ಉತ್ತಮ ಬಳಕೆಗಾಗಿ ಯೋಜನೆ ರೂಪಿಸುವಲ್ಲಿ ವಿಫಲವಾಗಿವೆ ಎಂದು ಆರೋಪಿಸಿದ್ದಾರೆ.ಶೋಷಿತ ವರ್ಗಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಿ, ಈ ವರ್ಗದ ಜನರಿಗೆ ಆಗಿರುವ ಆರ್ಥಿಕ ತಾರತಮ್ಯವನ್ನು ಕಡಿಮೆ ಮಾಡಲು ರಾಜ್ಯಮಟ್ಟದಲ್ಲಿ ಶಾಶ್ವತ ನ್ಯಾಯಮಂಡಳಿಯನ್ನು ಸ್ಥಾಪಿಸಬೇಕೆಂದು ಒತ್ತಾಯಿಸಿದ್ದು, ಈ ವರ್ಗದ ಜನರ ಆರ್ಥಿಕ ಅಭಿವೃದ್ಧಿಗೆ ಹಂಚಿಕೆಯಾಗಿರುವ ನಿಧಿಯನ್ನು ಪರಿಣಾಮಕಾರಿಯಾಗಿ ಬಳಕೆಯಾಗದಿರುವುದಕ್ಕೆ ಹಣಕಾಸು ಸಚಿವರು, ಸಮಾಜ ಕಲ್ಯಾಣ ಸಚಿವರು ಮತ್ತು ಪರಿಶಿಷ್ಟ ಪಂಗಡಳಗಳ ಇಲಾಖೆಯ ಸಚಿವರನ್ನು ಹೊಣೆಗಾರರನ್ನಾಗಿ ಮಾಡುವಂತೆ ಒತ್ತಾಯಿಸಿದ್ದಾರೆ.ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಹಣವನ್ನು ಹಂಚಿಕೆ ಮಾಡುವ ಆಯಾ ಜಾತಿಗಳ ಜನಸಂಖ್ಯೆ ಅನುಗುಣವಾಗಿ ಯಾವುದೇ ಜಾತಿಗಳು ಉಪ ಘಟಕ ಯೋಜನೆಗಳ ಪ್ರಯೋಜನಗಳಿಂದ ಹೊರಗುಳಿಯದಂತೆ ನೋಡಿಕೊಳ್ಳುವಂತೆ ಸರ್ಕಾರವನ್ನು ಆಗ್ರಹಿಸಿದ್ದಾರೆ.

## ಮತದಾನದಲ್ಲಿ ಗೊಂದಲ: ಆರೋಪ

**ಶಿವಮೊಗ್ಗ:** ಇಲ್ಲಿನ ಎಪಿಎಂಸಿ ಆವರಣದಲ್ಲಿ ಮಂಗಳವಾರ ನಡೆದ ಮ್ಯಾಮ್ ಕೋಸ್ ಚುನಾವಣೆ ಸಂದರ್ಭದಲ್ಲಿ ಗುರಿತಿನ ಚೀಟಿಯನ್ನು ಎದುರಾಳಿಗಳು ದುರುಪಯೋಗ ಮಾಡಿಕೊಂಡು ಮತದಾನದಲ್ಲಿ ಗೊಂದಲ ಎಬ್ಬಿಸಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ. ಸಹಕಾರ ಭಾರತಿಯ ಕೇಸರಿ ಕಲರ್ ಗುರುತಿನ ಚೀಟಿಗಳನ್ನು ಎದುರಾಳಿ ತಂಡ ಸಾವಿರಾರು ಗಟ್ಟಲೆ ಮಾಡಿಸಿ ಘ್ರಾಕ್ಸಿ ಮತಗಳು ಬೀಳಿಸುವ ಹುನ್ನಾರ ನಡೆಸಿ ಚುನಾವಣೆಯಲ್ಲಿ ಗೊಂದಲ ಮೂಡಿಸುವ ಪ್ರಯತ್ನ ಮಾಡಿದೆ ಎಂದು ಬಿಜೆಪಿ ಬೆಂಬಲಿತ ಸಹಕಾರಿ ಭಾರತಿ ಗಂಭೀರ ಆರೋಪ ಮಾಡಿದೆ. ಈ ಕುರಿತು ಮಾತನಾಡಿದ ಸಹಕಾರ ಭಾರತಿಯ ಸದಸ್ಯ ವಿರುಪಾಕ್ಷಪ್ಪ, ಎದುರಾಳಿ ತಂಡ ಚುನಾವಣೆ ಅಖಾಡದಲ್ಲಿ ಅನುಚಿತ ವರ್ತನೆ ತೋರಿದ್ದಾರೆ. ಸಹಕಾರಿ ಭಾರತಿಯ 19 ಜನರಿರುವ ಗುರುತಿನ ಚೀಟಿಯನ್ನು ರಾಷ್ಟ್ರೀಯ ಸಹಕಾರ ಪ್ರತಿಷ್ಠಾನದಿಂದ ಪ್ರಿಂಟ್ ಮಾಡಿಸಿಕೊಂಡು ಬಂದು ಮತದಾರರಲ್ಲಿ ಹಂಚಿ ಗೊಂದಲ ಉಂಟುಮಾಡುವ ಯತ್ನ ನಡೆಸಲಾಗುತ್ತಿದೆ ಎಂದು ದೂರಿ ದ್ದಾರೆ. ಸಹಕಾರಿ ಭಾರತಿಯ ಸದಸ್ಯರ ಕೇಸರಿ ಕಲರ್ ಗುರುತಿನ ಚೀಟಿಗಳನ್ನು ಮಾಡಿ ಕೊಂಡು ಬಂದಿರುವ ಎದುರಾಳಿ ಸಹಕಾರಿ ಪ್ರತಿಷ್ಠಾನದವರು ಬಿಳಿ ಬಣ್ಣದ ಗುರುತಿನ ಚೀಟಿ ಹಂಚುವ ಬದಲು ಕೇಸರಿ ಕಲರ್ ಹಂಚಿ ನಮ್ಮ ಹೆಸರಿನಲ್ಲಿ ಮತದಾರರಲ್ಲಿ ಗೊಂದಲ ಉಂಟುಮಾಡುತ್ತಿದ್ದಾರೆ. ಚುನಾವಣೆಯಲ್ಲಿ ಸೋಲನ್ನು ಒಪ್ಪಿರುವ ಸಹಕಾರ ಪ್ರತಿಷ್ಠಾನ ಎಲ್ಲಿ ಪ್ರಿಂಟ್ ಮುದ್ರಣ ಮಾಡಿಸಿ ದ್ದಾರೋ ಆ ಮುದ್ರಣ ಕಚೇರಿ ಮೇಲೆ ಚುನಾವಣಾ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು. ಆದರೆ ಈ ಆರೋಪವನ್ನು ಕಾಂಗ್ರೆಸ್ ಬೆಂಬಲಿತ ರಾಷ್ಟ್ರೀಯ ಸಹಕಾರ ಪ್ರತಿಷ್ಠಾ ನದವರು ಸಾರಾಸಗಟಾಗಿ ತಿರಸ್ಕರಿಸಿದ್ದಾರೆ. ಒಟ್ಟಿನಲ್ಲಿ ವಿಧಾನಸಭಾ ಚುನಾವ ಣೆಗಿಂತ ಮ್ಯಾಮ್‌ಕೋಸ್ ಚುನಾವಣೆಯಲ್ಲಿ ಘೋಷಣೆಗಳು, ಪರಸ್ಪರ ಆರೋ ಪಗಳ ಸುರಿಮಳೆ ಜೋರಾಗಿ ಕೇಳಿ ಬಂದಿತು. ತೀರ್ಥಹಳ್ಳಿ ಮತದಾನ ಕೇಂದ್ರಗಳಲ್ಲೂ ಚುನಾವಣೆ ಬಿರುಸಿನಿಂದ ನಡೆದಿದೆ. ಉಳಿದಂತೆ ಇತರೆಡೆ ಶಾಂತಿಯುತವಾಗಿ ಮತದಾನವಾಗಿದೆ.

## ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನೂತನ ಅಧ್ಯಕರ ಆಯ್ಕೆ

**ಚಿಕ್ಕಮಗಳೂರು:** ಮೈಲಿಮನೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಅಧ್ಯಕರಾಗಿ ಎಂ.ಎಸ್.ಜಯಚಂದ್ರ, ಉಪಾಧ್ಯಕ್ಷರಾಗಿ ಷಕೀಲ್‌ಅಹಮದ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಡಿ.ಟಿ.ನಾಗರಾಜ್ ಘೋಷಿಸಿದರು. ನಂತರ ನಡೆದ ಅಭಿನಂದನಾ ಸಮಾರಂಭದಲ್ಲಿ ನೂತನ ಅಧ್ಯಕ್ಷ ಉಪಾಧ್ಯಕ್ಷರನ್ನು ಸಮಾಜ ಸೇವಕ ಮೈಲಿಮನೆ ಪೂರ್ಣೇಶ್ ಅಭಿನಂದಿಸಿ ಮಾತನಾಡಿ, ರೈತರ ಸಮಸ್ಯೆಗಳಿಗೆ ಸ್ಪಂಧಿಸಿ ಸಮಸ್ಯೆಗಳ ಪರಿಹಾರಕ್ಕೆ ಸೂಕ್ತ ರೀತಿಯಲ್ಲಿ ಪರಿಹಾರ ಒದಗಿಸಿಸುತ್ತಾರೆಂಬ ಬಹಳ ನಿರೀಕ್ಷೆ ಇದೆ. ತಮ್ಮ ಆಡಳಿತ ಅವದಿಯಲ್ಲಿ ಹೆಚ್ಚು ಪರೋಪಕಾರಿ ಕಾರ್ಯಗಳನ್ನು ನಿರ್ವಹಿಸಲಿ ಎಂದರು. ಮೈಲಿಮನೆ ಪಂಚಾಯ್ತಿ ಮಾಜಿ ಅಧ್ಯಕ್ಷ ಚೇತನ್‌ಗೌಡ ಮಾತನಾಡಿ, ನೂತನವಾಗಿ ಆಯ್ಕೆಯಾಗಿರುವ ಅಧ್ಯಕ್ಷ ಉಪಾಧ್ಯಕರುಗಳು ಸಂಘದ ಬೆಳವಣಿಗೆಗೆ ಸಹಕರಿಸಬೇಕು. ರೈತರ ಸಮಸ್ಯೆಗಳನ್ನು ಸಾಮಾನ್ಯವಾಗಿ ಪರಿಗಣಿಸಿ ಕಡೆಗಣಿಸದೇ ಎಲ್ಲಾ ಸಮಸ್ಯೆಗಳಿಗೂ ವ್ಯವಸ್ಥಿತವಾದ ಪರಿಹಾರ ನೀಡಿ ಸಂಘವನ್ನು ಇನ್ನಷ್ಟು ಭದ್ರಗೊಳಿಸಿ ಎಂದರು.



ಸಂಘದ ಅಧ್ಯಕ್ಷ ಎಂ.ಎಸ್ ಜಯಚಂದ್ರ, ಉಪಾಧ್ಯಕ್ಷ ಷಕೀಲ್ ಅಹಮದ್ ಮಾತನಾಡಿದರು.ಈ ಸಂಧರ್ಭದಲ್ಲಿ ಮಾಜಿ ಶಾಸಕ ಬಿ.ಬಿ.ನಿಂಗಯ್ಯ, ಜಿಲ್ಲಾ ಒಕ್ಕಲಿಗರ ಸಂಘದ ಉಪಾಧ್ಯಕ್ಷ ಟಿ.ಡಿ.ಮಲ್ಲೇಶ್, ನಿರ್ದೇಶಕ ರತೀಶ್ ಕುಮಾರ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಸತೀಶ್, ಮುಗುಳುವಳ್ಳಿ ನಿರಂಜನ್, ಎಂ.ಜಿ.ಪೂರ್ಣೇಶ್, ಹಫೀಜುರ್ ರೆಹಮಾನ್, ಮಹಮದ್ ತಾಹೇರ್ ಏಕ್ಬಾಲ್, ಅನು ರಾಜೇಗೌಡ, ಸರ್ವರಿಬೇಗಮ್, ದೇವರಾಜು, ಕಿಶನ್, ಅರ್ಪಿತ, ಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಪವನ್‌ಕುಮಾರ್, ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಬಿ.ಹೆಚ್.ವೆಂಕಟೇಶ್ ಇದ್ದರು.

## ಭದ್ರಾ ಮೇಲ್ದಂಡೆ ಯೋಜನೆಗೆ ಹಣ ಬಿಡುಗಡೆ ಮಾಡಲು ಪ್ರಧಾನಿಗೆ ಸಿಎಂ ಪತ್ರ

**ಬೆಂಗಳೂರು:** ಭದ್ರಾ ಮೇಲ್ದಂಡೆ ಯೋಜನೆಗೆ ಬಜೆಟ್ ನಲ್ಲಿ ಘೋಷಣೆ ಮಾಡಿದ್ದ 5,300 ಕೋಟಿ ರೂ.ಗಳನ್ನು ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ ಮಾಡಿದ್ದಾರೆ. ಈ ಸಂಬಂಧ ಪ್ರಧಾನಮಂತ್ರಿ ನರೇಂದ್ರ ಮೋದಿಯವರಿಗೆ ಪತ್ರ ಬರೆದಿರುವ ಸಿಎಂ, 2023–24ನೇ ಸಾಲಿನ ಕೇಂದ್ರದ ಬಜೆಟ್ನಲ್ಲಿ 5,300 ಕೋಟಿ ರು. ಅನುದಾನದ ಜತೆಗೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸುವುದಾಗಿ ತಿಳಿಸಲಾಗಿತ್ತು. ಆದರೆ, ಮೂರು ವರ್ಷವಾದರೂ ಅನುದಾನ ಬಿಡುಗಡೆ ಮಾಡಲಾಗಿಲ್ಲ. ಈ ವರ್ಷವಾದರೂ ಬಿಡುಗಡೆ ಮಾಡುವಂತೆ ಹಣಕಾಸು ಮತ್ತು ಜಲಶಕ್ತಿ ಸಚಿವಾಲಯಗಳಿಗೆ ನಿರ್ದೇಶನ ನೀಡುವಂತೆ ಮನವಿ ಮಾಡಿದ್ದಾರೆ. ಭದ್ರಾ ಮೇಲ್ದಂಡೆ ಯೋಜನೆ ಚಿಕ್ಕಮಗಳೂರು, ಚಿತ್ರದುರ್ಗ, ತುಮಕೂರು ಮತ್ತು ದಾವಣಗೆರೆ ಜಿಲ್ಲೆಗಳ ಸುಮಾರು 2.25 ಲಕ್ಷ ಹೆಕ್ಟೇರ್ ಭೂ ಪ್ರದೇಶಕ್ಕೆ ಹನಿ ನೀರಾವರಿ ಒದಗಿಸಲಿದೆ. ಜೊತೆಗೆ 367 ಕೆರೆಗಳಿಗೆ ನೀರು ತುಂಬಿಸಲಿದೆ.

## ವಸಿಷ್ಠ–ಹರಿಪ್ರಿಯಾ ದಂಪತಿಗೆ ಗಂಡು ಮಗು ಜನನ!

**ಬೆಂಗಳೂರು:** ಸ್ಯಾಂಡಲ್ವುಡ್ ನ ಸೆಲೆಬ್ರೆಟಿ ದಂಪತಿ ವಸಿಷ್ಠ ಸಿಂಹ ಹಾಗೂ ಹರಿಪ್ರಿಯಾ ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದರು. ಇಂದು ಹರಿಪ್ರಿಯಾ ಗಂಡು ಮಗುವಿಗೆ ಜನ್ಮ ನೀಡಿದ್ದಾರೆ.ಹಲವು ವರ್ಷಗಳಿಂದ ಪ್ರೀತಿಯಲ್ಲಿದ್ದ ಜೋಡಿ ಎಲ್ಲಿಯೂ ತಮ್ಮ ಗುಟ್ಟು ಬಿಟ್ಟುಕೊಟ್ಟಿರಲಿಲ್ಲ. ಮದುವೆಗೆ ಇನ್ನೇನು ಕೆಲ ದಿನಗಳು ಇದೆ ಎಂದಾಗ ತಮ್ಮ ಪ್ರೇಮ ಪುರಾಣವನ್ನು ಅಭಿಮಾನಿಗಳೆದುರು ತೆರೆದಿಟ್ಟಿದ್ದರು. 2023ರ ಜನವರಿ 26ರಂದು ಮೈಸೂರಿನ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಹರಿಪ್ರಿಯಾ ಹಾಗೂ ವಸಿಷ್ಠ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದರು. ಹರಿಪ್ರಿಯಾ ಗಂಡು ಮಗುವಿಗೆ ಜನ್ಮ ಕೊಟ್ಟಿದ್ದಾರೆ. ಮಗು ಮತ್ತು ತಾಯಿ ಆರೋಗ್ಯವಾಗಿದ್ದಾರೆ. ತಂದೆಯಾದ ಖುಷಿಯನ್ನು ವಸಿಷ್ಠ ಸಿಂಹ ಹಂಚಿಕೊಂಡಿದ್ದಾರೆ.

## ತುಮಕೂರು ಸಮೀಪ 2ನೇ ಏರ್ಪೋರ್ಟ್ ನಿರ್ಮಾಣ: ಗೃಹ ಸಚಿವ ಡಾ. ಜಿ ಪರಮೇಶ್ವರ್

**ತುಮಕೂರು:** ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿನ ಜನ ದಟ್ಟಣೆ ನಿವಾರಿಸುವ ನಿಟ್ಟಿನಲ್ಲಿ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಮುಂದಾಗಿದ್ದು,ಇದಕ್ಕೆ ಅಗತ್ಯವಾದ ಭೂಮಿ ಗುರುತಿಸುವ ಕಾರ್ಯ ನಡೆಯುತ್ತಿದೆ. ತುಮಕೂರು, ಬಿಡದಿ ಸೇರಿದಂತೆ ನಾಲ್ಕು ಕಡೆಗಳಲ್ಲಿ ವಿಮಾನ ನಿಲ್ದಾಣಕ್ಕೆ ಪ್ರಸ್ತಾವನೆ ಬಂದಿದೆ ಎಂದು ಮೂಲಗಳು ತಿಳಿಸಿವೆ.ಈ ಮಧ್ಯೆ ತುಮಕೂರು ಬಳಿಯೇ ರಾಜ್ಯದ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸುವಂತೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ ಎಂದು ಗೃಹ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಭಾನುವಾರ ತಿಳಿಸಿದ್ದಾರೆ.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ತುಮಕೂರು ಹೊರವಲಯ ವಸಂತನರಸಾಪುರ ಬಳಿ ರಾಷ್ಟ್ರೀಯ ಹೆದ್ದಾರಿ 48ಕ್ಕೆ ಹೊಂದಿಕೊಂಡಂತೆ ಮೂರು ಸಾವಿರ ಎಕರೆ ಭೂಮಿ ಗುರುತಿಸಲಾಗಿದೆ. ತಾಲೂಕ್ಕಿನ ಸೀಬಿ ಹತ್ತಿರ ಐದು ಸಾವಿರ ಎಕರೆ ಭೂಮಿಯನ್ನು ಗುರುತಿಸಲಾಗಿದೆ. ಎರಡು ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಜಿಲ್ಲೆಯಲ್ಲಿಯೇ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.ತುಮಕೂರು ನಗರದ 2 ಕಡೆ ವಧಾಗಾರ ಮಾರುಕಟ್ಟೆ ನಿರ್ಮಾಣ ಮಾಡಲಾಗುವುದು, ಅಮಾನಿಕೆರೆಗೆ ಗ್ಲಾಸ್ ಬ್ರಿಡ್ಜ್ ಮಾಡಲು ಉದ್ದೇಶಿಸಲಾಗಿದೆ. ಅಲ್ಲದೆ ಅಂಬೇಡ್ಕರ್ ಪುತ್ಥಳಿ ಟೌನ್ ಹಾಲ್ನಲ್ಲಿ ಸರ್ಕಲ್ ಮಾಡಲು ಉದ್ದೇಶಿಸಲಾಗಿದೆ ಎಂದು ಹೇಳಿದರು.ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಸುಮಾರು 2.50 ಲಕ್ಷ ಹುದ್ದೆಗಳು ಖಾಲಿಯಿದ್ದು, ಆದ್ಯತೆ ಮೇರೆಗೆ ಭರ್ತಿ ಮಾಡಲಾಗುವುದು, ಈಗಾಗಲೇ 400 ಪಿಎಸ್ ಐ ಹುದ್ದೆಗಳ ನೇಮಕಾತಿಗೆ ಪರೀಕ್ಷೆ ನಡೆಸಲಾಗಿದ್ದು, ಮುಂದಿನ ದಿನಗಳಲ್ಲಿ 600 ಪಿಐಸ್ ಐ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗುವುದು ಎಂದರು. ಇದೇ ವೇಳೆ ಮೈಕ್ರೋ ಫೈನಾನ್ಸ್ ಕಿರುಕುಳ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾತನಾಡಿದ ಪರಮೇಶ್ವರ, ಈ ಬಗ್ಗೆ ನಿನ್ನೆ ಸರ್ಕಾರ ಸಭೆ ನಡೆಸಿದೆ. ಇರುವ ಕಾನೂನು ಭದ್ರ ಮಾಡುವುದು ಹಾಗೂ ಹೊಸ ಕಾನೂನು ಸೇರಿಸುವ ಬಗ್ಗೆ ಚಿಂತನೆ ನಡೆದಿದೆ. ಒಂದು ವಾರದಲ್ಲಿ ಹೊಸ ಕಾನೂನು ವರದಿಯನ್ನು ರಾಜ್ಯಪಾಲರಿಗೆ ನೀಡಲಾಗುವುದು. ಪೊಲೀಸರಿಗೆ ಸುಮೋಟೋ ಕೇಸ್ ಹಾಕುವ ಅಧಿಕಾರ ಕೊಡುವ ಬಗ್ಗೆ ಚಿಂತನೆ ನಡೆದಿದೆ. ಅನಧಿಕೃತ ಮೈಕ್ರೋ ಫೈನಾನ್ಸ್ ಕಂಪನಿಗಳ ಪತ್ತೆ ಹಚ್ಚಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ ಎಂದು ತಿಳಿಸಿದರು.




# ವೀರಪುತ್ರರ ನಾಡು ಈಸೂರು; ಸ್ವಾತಂತ್ರ್ಯ ಘೋಷಿಸಿಕೊಂಡ ಮೊದಲ ಗ್ರಾಮ

ಶಿವಮೊಗ್ಗ ಜಿಲ್ಲೆ ಶಿಕಾರಿಪುರ ತಾಲ್ಲೂಕಿನ ಈಸೂರು ದೇಶದಲ್ಲಿ ಹೆಸರುಮಾಡಿದ ಗ್ರಾಮ. ಬ್ರಿಟಿಷರ ವಿರುದ್ಧ ಹೋರಾಡಿ, ಪ್ರಥಮ ಸ್ವತಂತ್ರ ಗ್ರಾಮವೆಂದು ಘೋಷಿಸಿಕೊಂಡ ಹಿರಿಮೆ ಇದರದ್ದು. ಇದು ಕಲಿಗಳ ಬೀಡಾಗಿತ್ತು. ಆದ್ದರಿಂದಲೇ 'ಏಸೂರು ಕೊಟ್ಟರೂ, ಈಸೂರು ಬಿಡೆವು' ಎಂಬ ಗಾದೆ ಈ ಭಾಗದಲ್ಲಿ ಜನಜನಿತವಾಗಿತ್ತು. ಅಂತಹ ಸಮೃದ್ಧ ಮತ್ತು ವೀರರ ಬೀಡು ಈ ಗ್ರಾಮ.

ಇಡೀ ದೇಶದಲ್ಲಿ ಮೊದಲ ಸ್ವತಂತ್ರ ಗ್ರಾಮವೆಂದು ಘೋಷಿಸಿಕೊಂಡು ಗಮನ ಸೆಳೆದ ಶಿವಮೊಗ್ಗ ಜಿಲ್ಲೆಯ ಈಸೂರು ಚಳವಳಿ ನಡೆದು 84 ವರ್ಷವಾಯಿತು. ಅದರ ಸ್ಮರಣಾರ್ಥ ಇದೇ ಜನವರಿ 29 ಮತ್ತು 30 ರಂದು ಹುತಾತ್ಮರ ದಿನದಂದು ಗ್ರಾಮದಲ್ಲಿ ಸರ್ವೋದಯ ಮಂಡಲದ ರಾಷ್ಟ್ರೀಯ ಸಮ್ಮೇಳನ ನಡೆಯುತ್ತಿದೆ.

ಇಡೀ ಗ್ರಾಮದ ಜನರು ಸ್ವಾತಂತ್ರ್ಯ ಚಳವಳಿಯಲ್ಲಿ ಪಾಲ್ಗೊಂಡ ಕೀರ್ತಿಗೆ ಪಾತ್ರವಾದ ಈಸೂರನ್ನು, ವೀರಪುತ್ರರ ನಾಡೆಂದು ಗುರುತಿಸುತ್ತಿದ್ದರು. 1942ಕ್ಕಿಂತ ಮೊದಲೇ ಇಲ್ಲಿನ ಪ್ರತಿಯೊಂದು ಮನೆಯವರೂ ಸ್ವಾತಂತ್ರ್ಯ ಚಳವಳಿಯಲ್ಲಿ ಪಾಲ್ಗೊಂಡವರೇ. ಈ ಕಾರಣಕ್ಕಾಗಿ ದೇಶದ ಗಮನ ಸೆಳೆದ ಈ ಗ್ರಾಮದ ಕಥೆಯೇ ರೋಚಕ...

1942 ಸೆಪ್ಟೆಂಬರ್ 25 ಗ್ರಾಮದ ವೀರಭದ್ರಸ್ವಾಮಿ ದೇವಾಲಯದ ಮೇಲೆ ತ್ರಿವರ್ಣ ಧ್ವಜ ಹಾರಿಸಿ ತಮ್ಮ ಗ್ರಾಮ ಸ್ವತಂತ್ರ, ತಾವು ಯಾರಿಗೂ ಗುಲಾಮರಲ್ಲ ಎಂದು ಘೋಷಿಸಲಾಯಿತು. ಸರ್ಕಾರಕ್ಕೆ ಯಾವ ತೆರಿಗೆಯನ್ನೂ ಕಟ್ಟದೆ ಅಸಹಕಾರ ಚಳವಳಿಯಲ್ಲಿ ಪಾಲ್ಗೊಂಡರು. ಗಾಂಧೀಜಿಯ ಅಪ್ಪಟ ಅನುಯಾಯಿಗಳಾಗಿ, ಸ್ವಾತಂತ್ರ್ಯ ಸಂಗ್ರಾಮದ ಕಿಚ್ಚನ್ನು ಹೆಚ್ಚಿಸಿದರು.

ಈಸೂರಿನ ಸ್ಮಾರಕ ಭವನ.

1942 ರ ಸೆಪ್ಟೆಂಬರ್ 28 ರಂದು, 'ಬ್ರಿಟಿಷರೇ ಭಾರತ ಬಿಟ್ಟು ತೊಲಗಿ' ಚಳವಳಿಯಲ್ಲಿ ಗ್ರಾಮದ ವೀರಹೋರಾಟಗಾರರು ಸಕ್ರಿಯವಾಗಿ ಭಾಗವಹಿಸಿದರು. ಇಡೀ ಗ್ರಾಮವೇ ಚಳವಳಿಗೆ ಧುಮುಕಿತು. ಗ್ರಾಮದಲ್ಲಿ ತಮ್ಮದೇ ಅಧಿಕಾರಿಗಳನ್ನು ನೇಮಿಸಿಕೊಂಡು ಗ್ರಾಮವನ್ನು ಸ್ವತಂತ್ರ ಗ್ರಾಮವೆಂದು ಘೋಷಿಸಿಕೊಂಡರು. ಆಡಳಿತ ಮಾಡಲು ಹದಿನಾಲ್ಕು ವರ್ಷದ ಜಯಣ್ಣನನ್ನು ಅಮಲ್ದಾರನನ್ನಾಗಿ, ಪೋಲಿಸ್ ಸಬ್ಇನ್ಸ್ಪೆಕ್ಟರ್ ಆಗಿ ಮಲ್ಲಣ್ಣ ಅವರನ್ನು ನೇಮಕಮಾಡಿಕೊಂಡರು. ಸಾಹುಕಾರ್ ಬಸವಣ್ಣೆಪ್ಪನವರಂತೂ ಕಂದಾಯ ವಸೂಲಿಗೆ ಗ್ರಾಮಕ್ಕೆ ಬಂದಿದ್ದ ಶಾನುಭೋಗ ಮತ್ತು ಕುಲಕರ್ಣಿಯ ಕೈಲಿದ್ದ ಕಂದಾಯ ಪುಸ್ತಕವನ್ನೇ ಕಸಿದುಕೊಂಡು ಬೆಂಕಿಗೆ ಹಾಕಿದರು. ಅವರಿಗೆ ಗಾಂಧಿ ಟೋಪಿ ಹಾಕಿಕೊಳ್ಳಲು ತಾಕೀತು ಮಾಡಿದರು. ಅವರಿಬ್ಬರು ಶಿಕಾರಿಪುರಕ್ಕೆ ಓಡಿಹೋಗಿ ಘಟನೆಯ ವಿವರಗಳನ್ನು ಅಮಲ್ದಾರರಿಗೆ ವರದಿ ಮಾಡಿದರು.

ಬ್ರಿಟಿಷ್ ಸರ್ಕಾರ ಸುಮ್ಮನಿರಲಿಲ್ಲ. ಇವರ ದಂಗೆಯನ್ನು ಅಡಗಿಸಲು ತಹಶೀಲ್ದಾರ್ ಚನ್ನಕೃಷ್ಣಯ್ಯ ಮತ್ತು ಸಬ್ಇನ್ಸ್ಪೆಕ್ಟರ್ ಕೆಂಚೇಗೌಡರ ನೇತೃತ್ವದಲ್ಲಿ ಪೋಲಿಸರನ್ನು ಕಳಿಸಿತು. ಈ ಸಂದರ್ಭದಲ್ಲಿ ಬ್ರಿಟಿಷ್ ಅಧಿಕಾರಿಗಳು ಮತ್ತು ಗ್ರಾಮಸ್ಥರ ನಡುವೆ ತೀವ್ರ ಸಂಘರ್ಷ ನಡೆಯಿತು. ಈ ಗಲಭೆಯಲ್ಲಿ ಅಮಲ್ದಾರ ಮತ್ತು ಸಬ್ಇನ್ಸ್ಪೆಕ್ಟರ್ ಇಬ್ಬರನ್ನೂ ಜನಗಳ ಗುಂಪು ಹತ್ಯೆ ಮಾಡಿತು. ಇದನ್ನು ಕಂಡ ಬ್ರಿಟಿಷ್ ಸರ್ಕಾರ ಕೆರಳಿ, ಹೆಚ್ಚಿನ ಪೋಲಿಸ್ ತುಕಡಿಯನ್ನು ಈಸೂರಿಗೆ ಕಳುಹಿಸಿಕೊಟ್ಟಿತು. ಪೋಲಿಸರ ಲಾಠಿ ಪ್ರಹಾರ ಮತ್ತು ಗೋಲಿಬಾರ್ನಿಂದ ವಿಚಲಿತರಾದ ಅನೇಕರು ಊರು ಬಿಟ್ಟು ಪರಾರಿಯಾದರು. ಬ್ರಿಟಷ್ ಅಧಿಕಾರಿಗಳು ಗುಂಡು ಹಾರಿಸಿದ್ದರಿಂದ ಗ್ರಾಮದಮೂವರು ಹುತಾತ್ಮರಾದರು. ಮನೆಗಳಿಗೆ ಬೆಂಕಿ ಹಚ್ಚಿ, ಸಿಕ್ಕ ಸಿಕ್ಕವರ ಮೇಲೆ ಹಲ್ಲೆ ನಡೆಸಿ, ಬ್ರಿಟಿಷರು ದಬ್ಬಾಳಿಕೆಮಾ[illegible] ದೊಂಬಿಗೆ ಸಂಬಂಧಿಸಿದಂತೆ ಅನೇಕರನ್ನು ಬಂಧಿಸಲಾಯಿತು. ಬಹುತೇಕರು ಕಾಡಿಗೆ ಪಲಾಯನಮಾಡಿ ತಲೆಮರೆಸಿಕೊಂಡರು. ಬಸವಣ್ಣಪ್ಪ ಮತ್ತು ಎ.ಹಾಲಪ್ಪ ಭೂಗತರಾಗಿದ್ದುಕೊಂಡೇ ಕ್ರಾಂತಿಕಾರಿಗಳಿಗೆ ನೆರವಾಗುತ್ತಿದ್ದರು.



ಸ್ವಾತಂತ್ರ್ಯ ಹೋರಾಟಗಾರ ಹುಚ್ಚರಾಯಪ್ಪ ಈಸೂರು ಸ್ವಾತಂತ್ರ್ಯ ಹೋ ರಾಟಗಾರರ ಸ್ಮಾರಕ ಬಳಿ ಮಕ್ಕಳಿಗೆಹೋರಾಟದ ಕಥೆ ಹೇಳುತ್ತಿರುವುದು. (ಸಂಗ್ರಹ ಚಿತ್ರ)

ಆಗ ಬಂಧಿತರಾದ ಗ್ರಾಮದ 50 ಜನರನ್ನು ಬೆಂಗಳೂರು ಮತ್ತು ಶಿವಮೊಗ್ಗ ಜೈಲಿನಲ್ಲಿಟ್ಟು ವಿಚಾರಣೆಗೆ ಗುರಿಪಡಿಸಲಾಯಿತು. ಅವರಲ್ಲಿ ಅನೇಕರನ್ನು ನಿರಪರಾಧಿಗಳೆಂದು ನ್ಯಾಯಾಲಯ ಬಿಡುಗಡೆಮಾಡಿತು. ಉಳಿದವರಲ್ಲಿ ಗೌಡರ ಶಂಕರಪ್ಪ, ಬಡಕಳ್ಳಿ ಹಾಲಪ್ಪ, ಕೆ.ಮಲ್ಲಪ್ಪ, ಕೆ.ಗುರಪ್ಪ ಮತ್ತು ಸೂರ್ಯ ನಾರಾಯಣಾಚಾರ್ ಅವರಿಗೆ ಮರಣದಂಡನೆ ವಿಧಿಸಿ, ಬೆಂಗಳೂರಿನ ಸೆಂಟ್ರಲ್ ಜೈಲಿನಲ್ಲಿ 1943ರಲ್ಲಿ ನೇಣುಗಂಬಕ್ಕೇರಿಸಲಾಯಿತು. ಇತರರಿಗೆ ಜೀವಾವಧಿ ಶಿಕ್ಷೆಗೆ ಗುರಿಪಡಿಸಲಾಯಿತು. ಹೀಗೆ ದೇಶಕ್ಕಾಗಿ ಪ್ರಾಣ ನೀಡಿ ಹುತಾತ್ಮರಾದ ಅವರ ಹೆಸರು ದೇಶದ ಸ್ವಾತಂತ್ರ್ಯದ ಇತಿಹಾಸದಲ್ಲಿ ದಾಖಲಾಗಿ, ಅಜರಾಮರವಾಗಿದೆ. ಈಗ ಅವರ ಸ್ಮರಣಾರ್ಥ ಈಸೂರಿನಲ್ಲಿ ಸ್ಮಾರಕವಿದೆ.

ಶೌರ್ಯಕ್ಕೆ, ಮಹಾಕ್ರಾಂತಿಗೆ ಹೆಸರಾದ ಶಿವಮೊಗ್ಗ ಜಿಲ್ಲೆಯ ಈಸೂರು ಬ್ರಿಟಿಷ್ ಸರ್ಕಾರವನ್ನೇ ನಡುಗಿಸಿದ್ದು ಸಾಮಾನ್ಯ ವಿಷಯವಲ್ಲ. ಇಲ್ಲಿನ ಜನ ಬ್ರಿಟಿಷರ ವಿರುದ್ಧ ಹೋರಾಡಿ, ಕಾದಾಡಿ, ಮನೆ ಮಠಗಳನ್ನು ಕಳೆದುಕೊಂಡು, ಕೊನೆಗೆ ಐವರ ಬಲಿದಾನವನ್ನೂ ಮಾಡಿ ವೀರಪುತ್ರರ ನಾಡು ಎಂದು ಕರೆಸಿಕೊಂಡಿದೆ.



# ಹೃದಯದ ಆರೋಗ್ಯ ವೃದ್ಧಿಸುವ ಮತ್ತು ಕೊಲೆಸ್ಟ್ರಾಲ್ ಕಮ್ಮಿ ಮಾಡುವ 5 ಬಗೆಯ ಹಿಟ್ಟುಗಳು



ಇತ್ತೀಚಿನ ದಿನಗಳಲ್ಲಿ ಮನುಷ್ಯ ಸಾವನ್ನಪ್ಪಲು ಪ್ರಮುಖ ಕಾರಣಗಳು ಎಂದರೆ ಅದು ಕೊಲೆಸ್ಟ್ರಾಲ್ ಮತ್ತು ರಕ್ತದ ಒತ್ತಡ. ಕೊಲೆಸ್ಟ್ರಾಲ್ ಹೆಚ್ಚಾಯಿತು ಎಂದರೆ ರಕ್ತದ ಒತ್ತಡ ಕೂಡ ಏರುಪೇರಾಗುತ್ತದೆ. ಇದು ಹೃದಯದ ತೊಂದರೆಗೆ ಪ್ರಮುಖ ಕಾರಣವಾಗುತ್ತದೆ. ಬ್ರಿಟಿಷ್ ಹಾರ್ಟ್ ಅಸೋಸಿಯೇಷನ್ ಹೇಳುವ ಹಾಗೆ ಯಾರ ರಕ್ತದಲ್ಲಿ ಹೆಚ್ಚು ಕೊಲೆಸ್ಟ್ರಾಲ್ ಇರುತ್ತದೆ ಅವರಿಗೆ ಹೃದಯಘಾತ ಸಮಸ್ಯೆ ತಪ್ಪಿದ್ದಲ್ಲ. ಹೀಗಾಗಿ ಕೊಲೆಸ್ಟ್ರಾಲ್ ನಿರ್ವಹಣೆಗೆ ಮತ್ತು ಹೃದಯದ ಆರೋಗ್ಯವನ್ನು ಉತ್ತಮವಾಗಿ ಕಾಪಾಡಿಕೊಳ್ಳಲು ಈ ಐದು ಬಗೆಯ ಹಿಟ್ಟುಗಳು ಸಾಕಷ್ಟು ನೆರವಿಗೆ ಬರುತ್ತವೆ. ಹೀಗಾಗಿ ನಿಮ್ಮ ಆಹಾರ ಪದ್ಧತಿಯಲ್ಲಿ ಸಾಧ್ಯವಾದಷ್ಟು ಇವುಗಳನ್ನು ಸೇರಿಸಿ ಸೇವಿಸಿ.

ಬಾಜ್ರಾ ಹಿಟ್ಟು

ಪೌಷ್ಟಿಕಾಂಶಗಳ ಆಗರವಾಗಿರುವ ಬಾಜ್ರಾ ಹಿಟ್ಟು ದೇಹಕ್ಕೆ ಅವಶ್ಯಕವಾಗಿ ಬೇಕಾದ ನಾರು, ಪ್ರೊಟೀನ್, ಮೆಗ್ನೀಷಿಯಮ್ ಜೊತೆಗೆ ಫಾಸ್ಫರಸ್, ಕಬ್ಬಿಣ ಮತ್ತು ಇನ್ನಿತರ ಪೌಷ್ಟಿಕಾಂಶಗಳನ್ನು ಹೆಚ್ಚಾಗಿ ಒಳಗೊಂಡಿರುತ್ತದೆ. ಇವೆಲ್ಲವೂ ಸಹ ಹೃದಯದ ಆರೋಗ್ಯಕ್ಕೆ ಬಹಳ ಒಳ್ಳೆಯದು ಎಂದು ಹೇಳಲಾಗುತ್ತದೆ. ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಹೆಲ್ತ್ ಹೇಳುವ ಹಾಗೆ ನಮ್ಮ ಕೊಲೆಸ್ಟ್ರಾಲ್ ಪ್ರಮಾಣವನ್ನು ಕಡಿಮೆ ಮಾಡಲು ಹಿಟ್ಟಿನಲ್ಲಿರುವ ಪೌಷ್ಟಿಕಾಂಶಗಳು ಮತ್ತು ಫೈಟೋ ಕೆಮಿಕಲ್ ಗಳು ಬಹಳ ಸಹಾಯಕ್ಕೆ ಬರುತ್ತವೆ.

### ಕೊನೆಯ ಮಾತು

ಕೊಲೆಸ್ಟ್ರಾಲ್ ಕಡಿಮೆಯಾಗಬೇಕು ಹಾಗೂ ಹೃದಯದ ಆರೋಗ್ಯ ಚೆನ್ನಾಗಿರಬೇಕು ಎಂದರೆ ಮೊದಲಿಗೆ ಆರೋಗ್ಯಕಾರಿ ಜೀವನಶೈಲಿಯನ್ನು ಅನುಸರಿಸಬೇಕು. ಉದಾಹರಣೆಗೆ ಸಂಸ್ಕರಿಸಿದ ಕೆಂಪು ಮಾಂಸಗಳು, ಸಂಸ್ಕರಿಸಿದ ಆಹಾರ ಪದಾರ್ಥಗಳು, ಎಣ್ಣೆಯಾಂಶ ಇರುವ ಆಹಾರಗಳು, ಕೃತಕ ಸಿಹಿ ತಿಂಡಿಗಳು ಹಾಗೂ ತಂಪು ಪಾನೀಯಗಳಿಂದ ದೂರವಿರಬೇಕು. ಇವೆಲ್ಲಾ ಆಹಾರಗಳು ದೇಹದ ತೂಕ ಹೆಚ್ಚು ಮಾಡಿ, ಬೊಜ್ಜಿ ನಾಂಶ ಹೆಚ್ಚು ಮಾಡುವುದು ಮಾತ್ರವಲ್ಲದೆ, ರಕ್ತದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಅಂಶ ಹೆಚ್ಚಾಗುವಂತೆ ಮಾಡುವುದು. ಪೊಟ್ಯಾಶಿಯಮ್, ಫೈಬರ್ ಅಂದರೆ ನಾರಿನಾಂಶ, ಫೋಲೇಟ್, ವಿಟಮಿನ್ ಕೆ, ಮಿಟಮಿನ್ ಸಿ ಹಾಗೂ ಕ್ಯಾಲ್ಸಿಯಂ ಅಂಶಗಳು ಹೇರಳವಾಗಿ ಕಂಡು ಬರುವ ಹಣ್ಣು –ತರಕಾರಿಗಳನ್ನು ಹೆಚ್ಚಾಗಿ ಸೇವನೆ ಮಾಡಬೇಕು. ಇದರಿಂದ ಹೃದಯದ ಆರೋಗ್ಯ ವೃದ್ಧಿಯಾಗುತ್ತದೆ.

### ಅಗಸೆ ಬೀಜಗಳ ಹಿಟ್ಟು



ಅಗಸೆ ಬೀಜಗಳಲ್ಲಿ ಆಂಟಿ ಆಕ್ಸಿಡೆಂಟ್ ಸಹಿತ ಫಾಸ್ಫರಸ್, ಮೆಗ್ನೀಷಿಯಂ ಮತ್ತು ಅಪಾರವಾದ ನಾರಿನ ಅಂಶ ಅಡಗಿದೆ. ಹೀಗಾಗಿ ಅಗಸೆ ಬೀಜಗಳಿಂದ ರೊಟ್ಟಿ ತಯಾರಿಸಿಕೊಂಡು ಸೇವನೆ ಮಾಡುವುದರಿಂದ ನೈಸರ್ಗಿಕವಾಗಿ ಕೆಟ್ಟ ಕೊಲೆ ಸ್ಟ್ರಾಲ್ ಅನ್ನು ಕಟ್ಟಿ ಹಾಕಬಹುದು ಮತ್ತು ಹೃದಯವನ್ನು ಕಾಪಾಡಿಕೊಳ್ಳ ಬಹುದು.

### ಗೋಧಿ ಹಿಟ್ಟು



ಗೋಧಿ ಹಿಟ್ಟಿನಲ್ಲಿ ಕೂಡ ನಾರಿನ ಪ್ರಮಾಣ ಕಂಡುಬರುತ್ತದೆ. ಜೊತೆಗೆ ಫಾಸ್ಫರಸ್, ಮ್ಯಾಂಗನೀಸ್, ತಾಮ್ರದ ಅಂಶಗಳು ಕೂಡ ಇವೆ. ವೈಜ್ಞಾನಿಕ ಅಧ್ಯಯನ ಹೇಳಿರುವ ಹಾಗೆ ಆಗಾಗ ಗೋಧಿ ಹಿಟ್ಟಿನಿಂದ ಆಹಾರ ಪದಾರ್ಥಗಳನ್ನು ತಯಾರಿಸಿ ಸೇವನೆ ಮಾಡುತ್ತಿದ್ದರೆ ಕೊಲೆಸ್ಟ್ರಾಲ್ ಕಂಟ್ರೋಲ್ ಆಗುತ್ತದೆ ಮತ್ತು ಹೃದಯದ ಆರೋಗ್ಯ ವೃದ್ಧಿಸುತ್ತದೆ.

### ಸೋಯಾ ಹಿಟ್ಟು



ಆರೋಗ್ಯಕರವಾದ ಹೃದಯಕ್ಕೆ ಸೋಯಾ ಹಿಟ್ಟು ಬಹಳ ಒಳ್ಳೆಯದು. ಇದು ಕೆಟ್ಟ ಕೊಲೆಸ್ಟ್ರಾಲ್ ಅನ್ನು ನಿಯಂತ್ರಿಸುತ್ತದೆ ಮತ್ತು ತನ್ನಲಿನ ಕಡಿಮೆ ಕೊಬ್ಬಿನ ಅಂಶದ ಕಾರಣದಿಂದ ಹೃದಯದ ಆರೋಗ್ಯವನ್ನು ಕಾಪಾಡುತ್ತದೆ.

ಹೃದಯ ಸ್ನೇಹಿ ಆಗಿರುವ ಅನೇಕ ಪೌಷ್ಟಿಕ ಸತ್ವಗಳು ಸೋಯಾ ಹಿಟ್ಟಿನಲ್ಲಿ ಹೆಚ್ಚಾಗಿ ಕಂಡುಬರುತ್ತವೆ. ಉದಾಹರಣೆಗೆ ಮೆಗ್ನೀಷಿಯಂ, ಪೊಟಾಸಿಯಂ, ಕಬ್ಬಿಣ, ನಾರು ಇತ್ಯಾದಿ. ಸೋಯಾ ಹಿಟ್ಟಿನಿಂದ ಚಪಾತಿ ತಯಾರಿಸಿ ಸೇವಿಸಬಹುದು ಮತ್ತು ಇದು ಆರೋಗ್ಯಕರವಾದ ರೀತಿಯಲ್ಲಿ ಕೊಲೆಸ್ಟ್ರಾಲ್ ಅನ್ನು ನಿರ್ವಹಣೆ ಮಾಡುತ್ತದೆ.

### ಕುಟ್ಟು ಹಿಟ್ಟು



ಇದು ಕೂಡ ಕೊಲೆಸ್ಟ್ರಾಲ್ ನಿಯಂತ್ರಣ ಮಾಡುವ ಅನೇಕ ಅಂಶಗಳು ಎನ್ನಲಾದ ನಾರು, ಪ್ರೋಟೀನ್, ಕಾರ್ಬೋಹೈಡ್ರೈಟ್, ಕಬ್ಬಿಣ, ಮೆಗ್ನೀಷಿಯಂ, ತಾಮ್ರ ಮತ್ತು ಸಸ್ಯಾಧಾರಿತ ಅಂಶಗಳನ್ನು ಒಳಗೊಂಡಿದೆ. ಅಧ್ಯಯನಗಳು ಹೇಳುವಂತೆ ಈ ಹಿಟ್ಟು ರಕ್ತದ ಒತ್ತಡವನ್ನು ನಿಯಂತ್ರಣ ಮಾಡಿ ಹೃದಯವನ್ನು ಆರೋಗ್ಯಕರ ವಾಗಿ ಕಾಪಾಡುತ್ತದೆ.

# ಮುಂಜಾನೆ ಸೂರ್ಯನ ಬೆಳಕಿನಲ್ಲಿ 20 ನಿಮಿಷ ವಾಕ್ ಮಾಡಿದ್ರೆ ಇರುವ ಪ್ರಯೋಜನಗಳು



ನಮ್ಮಲ್ಲಿ ಹಲವರು ಬೆಳಿಗ್ಗೆ ವಾಕಿಂಗ್ ಮಾಡಲು ಇಷ್ಟಪಡುತ್ತಾರೆ. ವೈದ್ಯರ ಪ್ರಕಾರ, ಬೆಳಗಿನ ಸೂರ್ಯನ ಬೆಳಕಿನಿಂದ ದಿನವನ್ನು ಪ್ರಾರಂಭಿಸುವುದು ಆರೋಗ್ಯಕ್ಕೆ ಮಾತ್ರವಲ್ಲ, ಇಡೀ ದಿನವು ಉತ್ತಮವಾಗಿ ಕಳೆಯುತ್ತದೆ. ನಿಮ್ಮ ಆರೋಗ್ಯವನ್ನು ಸುಧಾರಿಸಲು ಇದು ಉತ್ತಮ ಮಾರ್ಗವಾಗಿದೆ. ಸೂರ್ಯನ ಬೆಳಗಿನ ಕಿರಣಗಳು ನಿಮ್ಮ ದೇಹ ಮತ್ತು ಮನಸ್ಸಿಗೆ ಅನೇಕ ಪ್ರಯೋಜನಗಳನ್ನು ನೀಡುತ್ತವೆ, ಆದ್ದರಿಂದ ನಾವು ಪ್ರತಿದಿನ ಬೆಳಿಗ್ಗೆ ಸೂರ್ಯನಲ್ಲಿ ಕೆಲವು ನಿಮಿಷಗಳನ್ನು ಕಳೆಯಬೇಕು.

ಬೆಳಗಿನ ಸೂರ್ಯನ ಬೆಳಕು ನೈಸರ್ಗಿಕ ವಿಟಮಿನ್ ಡಿ ಯ ಅತ್ಯುತ್ತಮ ಮೂಲಗಳಲ್ಲಿ ಒಂದಾಗಿದೆ. ಇದು ದೇಹವು ಕ್ಯಾಲ್ಸಿಯಂ ಅನ್ನು ಹೀರಿಕೊಳ್ಳಲು ಸಹಾಯ ಮಾಡುವ ಅಗತ್ಯ ಪೋಷಕಾಂಶವಾಗಿದೆ, ಇದು ಮೂಳೆಗಳು ಮತ್ತು ಹಲ್ಲುಗಳನ್ನು ಬಲಪಡಿಸುತ್ತದೆ. ಆರೋಗ್ಯಕರ ಪ್ರತಿರಕ್ಷಣಾ ವ್ಯವಸ್ಥೆಗೆ ಇದು ಮುಖ್ಯವಾಗಿದೆ. ಬೆಳಗಿನ ಸೂರ್ಯನ ಬೆಳಕಿಗೆ ಕೇವಲ 15 ರಿಂದ 30 ನಿಮಿಷಗಳ ಕಾಲ ಮೈ ಒಡ್ಡುವಿಕೆಯು ನಿಮ್ಮ ದೈನಂದಿನ ಅವಶ್ಯಕತೆಗಳನ್ನು ಪೂರೈಸಲು ಸಾಕಷ್ಟು ವಿಟಮಿನ್ ಡಿ ಅನ್ನು ಒದಗಿಸುತ್ತದೆ.

ಸೂರ್ಯನ ಬೆಳಕು ಸಂತೋಷವನ್ನು ಹೆಚ್ಚಿಸುವ ಸಿರೊಟೋನಿನ್ ಎಂಬ ಹಾರ್ಮೋನ್ ಬಿಡುಗಡೆಯನ್ನು ಪ್ರಚೋದಿಸುತ್ತದೆ. ಸೂರ್ಯನ ಬೆಳಕಿನಿಂದ ನಿಮ್ಮ ದಿನವನ್ನು ಪ್ರಾರಂಭಿಸುವುದು ಆತಂಕ ಮತ್ತು ಖಿನ್ನತೆಯ ಭಾವನೆಗಳನ್ನು ನಿವಾರಿಸಲು ಸಹಾಯ ಮಾಡುತ್ತದೆ. ದಿನವಿಡೀ ನಿಮಗೆ ಉತ್ತಮ ಭಾವನೆಯನ್ನು ನೀಡುತ್ತದೆ.

ಬೆಳಗಿನ ಸೂರ್ಯನ ಬೆಳಕು ರಕ್ತದೊತ್ತಡವನ್ನು ಕಡಿಮೆ ಮಾಡುವ ಮೂಲಕ ಸುಧಾರಿತ ಹೃದಯದ ಆರೋಗ್ಯಕ್ಕೆ ಕೊಡುಗೆ ನೀಡುತ್ತದೆ. ಯುವಿ ಕಿರಣಗಳು ಚರ್ಮದಲ್ಲಿ ನೈಟ್ರಿಕ್ ಆಕ್ಸೈಡ್ ಅನ್ನು ಉತ್ಪಾದಿಸಲು ಸಹಾಯ ಮಾಡುತ್ತದೆ. ಇದು ರಕ್ತನಾಳಗಳನ್ನು ಹಿಗ್ಗಿಸುತ್ತದೆ, ಇದರಿಂದಾಗಿ ರಕ್ತದ ಹರಿವನ್ನು ಸುಧಾರಿಸುತ್ತದೆ.ಇದು ನಮ್ಮ ರಕ್ತದೊತ್ತಡವನ್ನು ನಿಯಂತ್ರಣದಲ್ಲಿರಿಸುತ್ತದೆ ಮತ್ತು ಹೃದ್ರೋಗದ ಅಪಾಯವನ್ನು ಕಡಿಮೆ ಮಾಡಬಹುದು.

## ಬಾಳೆಕಾಯಿ ಸೇವಿಸೋದ್ರಿಂದ ಆರೋಗ್ಯಕ್ಕೆ ತುಂಬಾ ಲಾಭಗಳಿವೆಯಂತೆ!



ಬಾಳೆಕಾಯಿಗಳನ್ನು ಸಾಮಾನ್ಯವಾಗಿ ಯಾವಾಗಲು ಅದರ ಸಿಹಿ ಗುಣಗಳು ಮತ್ತು ರುಚಿಗಾಗಿ ಎಲ್ಲರೂ ಇಷ್ಟ ಪಡುತ್ತಾರೆ. ಆದರೆ ಬಾಳೆಕಾಯಿಗಳನ್ನು ತಿನ್ನಬಹುದೇ? ಹೌದು ಹಸಿ ಬಾಳೆಕಾಯಿಗಳನ್ನು ತಿಂದಲ್ಲಿ ಇದರಲ್ಲಿ ಆರೋಗ್ಯಕ್ಕೆ ಬೇಕಾದ ಹಲವಾರು ಪ್ರಯೋಜನಗಳನ್ನು ನಾವು ಪಡೆಯಬಹುದು . ಬಾಳೆಕಾಯಿಗಳು ಅವುಗಳ ಮಾಧುರ್ಯ ಮತ್ತು ಬಹುಮುಖ ಪ್ರಯೋಜನಗಳಿಂದ ಹೆಚ್ಚಾಗಿ ಪ್ರೀತಿಸಲ್ಪಡುತ್ತವೆ, ಆದರೆ ಅವು ಕಚ್ಚಾ ಅಥವಾ ಹಸಿ ಕಾಯಿಗಳನ್ನು ನಿಮ್ಮ ಆಹಾರದಲ್ಲಿ ಸೇರಿಸುವುದರಿಂದ ಹಲವಾರು ಪೌಷ್ಟಿಕಾಂಶಗಳು ಮತ್ತು ಆರೋಗ್ಯಕರ ಬದಲಾವಣೆಗಳನ್ನು ನಿಮ್ಮ ದೇಹದಲ್ಲಿ ಮಾಡಬಹುದು .ಬಾಳೆಕಾಯಿ ಅವಶ್ಯಕ ವಿಟಮಿನ್ ಗಳು ಮತ್ತು ಖನಿಜಾಂಶಗಳ ಕಣಜವಾಗಿದೆ. ಇವು. ಬಾಳೆಕಾಯಿ ವಿಟಮಿನ್ ಸಿ , ವಿಟಮಿನ್ ಬಿ6, ಮತ್ತು ಪೊಟ್ಯಾಷಿಯಂಗಳ ಉತ್ತಮ ಮೂಲವಾಗಿದೆ. ವಿಟಮಿನ್ ಸಿ ಯು ವಿಟಮಿನ್ ಸಿ ಪ್ರತಿರಕ್ಷಣಾ ಕಾರ್ಯಕ್ಕೆ ನಿರ್ಣಾಯಕವಾಗಿದೆ ಮತ್ತು ಆಹಾರವನ್ನು ಶಕ್ತಿಯ ರೂಪದಲ್ಲಿ ಪರಿವರ್ತಿಸಲು ಸಹಾಯ ಮಾಡುತ್ತದೆ. ಇದರಲ್ಲಿರುವ ಪೊಟ್ಯಾಸಿಯಂ ಹೃದಯದ ಆರೋಗ್ಯ ಮತ್ತು ಸ್ನಾಯುಗಳ ಕಾರ್ಯ ನಿರ್ವಹಿಸಲು ಸಹಾಯ ಮಾಡುತ್ತದೆ.ರೆಸಿಸ್ಟೆಂಟ್ ಸ್ಟಾರ್ಚ್ ಅಥವಾ ನಿರೋಧಕ ಪಿಷ್ಟವನ್ನು ಬಾಳೆಕಾಯಿ ಅಧಿಕ ಮಟ್ಟದಲ್ಲಿ ಹೊಂದಿರುತ್ತದೆ. ಇದು ಫೈಬರ್ ನಂತೆ ಕಾರ್ಯನಿರ್ವಹಿಸುತ್ತದೆ. ಈ ನಿರೋಧಕ ಪಿಷ್ಟವು ಗ್ಲೂಕೋಸ್ ನ ಹೀರುವಿಕೆಯನ್ನು ನಿಧಾನಗೊಳಿಸುವ ಮೂಲಕ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಮಧುಮೇಹವನ್ನು ನಿರ್ವಹಿಸಲು ಮತ್ತು ಒಟ್ಟಾರೆ ಚಯಾಪಚಯ ಆರೋಗ್ಯವನ್ನು ಸುಧಾರಿಸುವಲ್ಲಿ ಉತ್ತಮವಾಗಿದೆ.

## ಮೆಂತ್ಯ ಮತ್ತು ದಾಸವಾಳವನ್ನು ಈ ರೀತಿ ಕೂದಲಿಗೆ ಬಳಸಿದ್ರೆ ಕೂದಲು ದಟ್ಟವಾಗಿ ಬೆಳೆಯುತ್ತೆ





ಉದ್ದವಾದ, ದಟ್ಟವಾದ ಕೂದಲು ಯಾರಿಗೆ ಇಷ್ಟವಿರಲ್ಲ ಹೇಳಿ... ಕೂದಲು ಮಹಿಳೆಯರ ಸೌಂದರ್ಯವನ್ನು ಮತ್ತಷ್ಟು ಹೆಚ್ಚಿಸುತ್ತದೆ. ಹಾಗಾಗಿ ಆರೋಗ್ಯಕರ ಕೂದಲನ್ನು ಹೊಂದಲು ಮಹಿಳೆಯರು ಹಲವಾರು ಬಗೆಯ ದುಬಾರಿ ಹೇರ್ ಪ್ರೊಡಕ್ಟ್ ಗಳನ್ನು ಬಳಸುತ್ತಾರೆ. ಆದರೆ ಇದರಿಂದ ಉತ್ತಮ ಫಲಿತಾಂಶ ಸಿಕ್ಕಿದರೂ ಕೂಡ ಅದು ಹೆಚ್ಚು ಕಾಲ ಉಳಿಯುವುದಿಲ್ಲ. ಹಾಗಾಗಿ ನಿಮ್ಮ ಕೂದಲು ದಟ್ಟವಾಗಿ ಉದ್ದವಾಗಿ, ಆರೋಗ್ಯಕರವಾಗಿ ಬೆಳೆಯಲು ಆಯುರ್ವೇದದಲ್ಲಿ ತಿಳಿಸಿದಂತೆ ಮೆಂತ್ಯ ಮತ್ತು ದಾಸವಾಳವನ್ನು ಈ ರೀತಿಯಲ್ಲಿ ಬಳಸಿ. ಮೆಂತ್ಯ ಮತ್ತು ದಾಸವಾಳ ಆರೋಗ್ಯಕರ ಕೂದಲನ್ನು ಹೊಂದಲು ಆಯುರ್ವೇದದಲ್ಲಿ ಬಳಸುವ ಎರಡು ಪ್ರಮುಖ ಪದಾರ್ಥಗಳಾಗಿವೆ. ನೆತ್ತಿಯ ಪೋಷಣೆ, ಕೂದಲಿನ ಬೆಳವಣಿಗೆ, ಕೂದಲಿನ ಬುಡವನ್ನು ಗಟ್ಟಿಗೊಳಿಸುವುದು ಹೀಗೆ ಒಟ್ಟಾರೆ ಕೂದಲಿನ ಆರೋಗ್ಯಕ್ಕಾಗಿ ಅವುಗಳನ್ನು ಬಹಳ ಹಿಂದಿನಿಂದಲೂ ಬಳಸಲಾಗುತ್ತಿದೆ.

ಮೆಂತ್ಯಭಾರತದಲ್ಲಿ ಸಾಂಬಾರು ಪದಾರ್ಥಗಳಲ್ಲಿ ಹೆಚ್ಚಾಗಿ ಬಳಸುವಂತಹ ಮೆಂತ್ಯ ಬೀಜಗಳು ಪ್ರೋಟೀನ್ಗಳು, ಜೀವಸತ್ವಗಳು ಮತ್ತು ಖನಿಜಗಳಿಂದ ಸಮೃದ್ಧವಾಗಿದೆ, ಇದು ಕೂದಲಿಗೆ ಹಲವಾರು ರೀತಿಯಲ್ಲಿ ಪ್ರಯೋಜನವನ್ನು ನೀಡುತ್ತದೆ. ಮೆಂತ್ಯವು ಪ್ರೋಟೀನ್ಗಳು ಮತ್ತು ನಿಕೋಟಿನಿಕ್ ಆಮ್ಲವನ್ನು ಹೊಂದಿರುತ್ತದೆ, ಇದು ಕೂದಲಿನ ಕಿರುಚೀಲಗಳನ್ನು ಬಲಪಡಿಸಲು ಸಹಾಯ ಮಾಡುತ್ತದೆ, ಕೂದಲು ಉದುರುವುದನ್ನು ಕಡಿಮೆ ಮಾಡುತ್ತದೆ ಮತ್ತು ಕೂದಲಿನ ತುದಿ ಒಡೆಯುವುದನ್ನು ತಡೆಯುತ್ತದೆ.ಇದು ನೆತ್ತಿಯ ರಕ್ತದ ಹರಿವನ್ನು ಹೆಚ್ಚಿಸುವುದರ ಮೂಲಕ ಕೂದಲು ಬೆಳೆಯಲು ಸಹಾಯ ಮಾಡುತ್ತದೆ ಮತ್ತು ಇದರಿಂದ ಕೂದಲುದುರುವುದು ಸಹ ಕಡಿಮೆಯಾಗುತ್ತದೆ.

# ಗುಲಾಬಿ ರಂಗಿನ ತುಟಿಯಲಿಪ್ ಬಾಮ್‌ಗಳು

**ಗುಲಾಬಿ ಅಥವಾ ಕೆಂಪು ತುಟಿಗಳು ಮುಖದ ಅಂದವನ್ನು ಹೆಚ್ಚಿಸುತ್ತವೆ. ಮುಖಕ್ಕೆ ಎಷ್ಟೇ ಮೇಕಪ್ ಬಳಿದರೂ ಕೂಡ ಮುಖ ಸುಂದರವಾಗಿ ಕಾಣುವುದು ತುಟಿಗಳಿಗೆ ಲಿಪ್ ಸ್ಟಿಕ್ ಹಚ್ಚಿದ ಮೇಲೆಯೇ. ಹಾಗಾಗಿ ತುಟಿಗಳನ್ನು ಆರೋಗ್ಯಕರವಾಗಿ ನೋಡಿಕೊಳ್ಳಬೇಕು. ಇದರಿಂದ ತುಟಿಗಳು ಕೆಂಪು ಅಥವಾ ಗುಲಾಬಿ ಬಣ್ಣದಲ್ಲಿರುತ್ತದೆ. ಆದರೆ ತುಟಿಗಳಿಗೆ ಲಿಪ್ಸ್ಟಿಕ್ ಅನ್ನು ಹೆಚ್ಚಾಗಿ ಬಳಸುವುದರಿಂದ ಅದರಲ್ಲಿರುವ ರಾಸಾಯನಿಕಗಳು ತುಟಿಗಳ ಚರ್ಮಕ್ಕೆ ಹಾನಿ ಮಾಡಿ ತುಟಿ ಕಪ್ಪಾಗುವಂತೆ ಮಾಡುತ್ತವೆ. ಹಾಗಾಗಿ ತುಟಿಗಳ ಬಗ್ಗೆ ಕಾಳಜಿವಹಿಸು ವುದು ಅತ್ಯಗತ್ಯ.ಈ ಒಳ್ಳೆಯ ಲಿಪ್ ಬಾಮ್ಗಳಲ್ಲಿ ತುಟಿಗಳನ್ನು ಆರೈಕೆ ಮಾಡುವಂತಹ ಈ 5 ಪದಾರ್ಥಗಳು ಇರುತ್ತದೆ. ಆ 5 ಪದಾರ್ಥಗಳು ಯಾವುದೆಂಬುದನ್ನು ನೋಡೋಣ.**









**ವಿಟಮಿನ್ ಇ**

ವಿಟಮಿನ್ ಇ' ಉತ್ಕರ್ಷಣ ನಿರೋಧಕಗಳು ಒರಟು ತುಟಿಗಳನ್ನು ಗುಣಪಡಿಸಲು ಉತ್ತಮವಾಗಿ ಕಾರ್ಯನಿರ್ವಹಿಸುತ್ತವೆ. ಇದು ಹೈಪರ್ಪಿಗ್ಮೆಂಟೇಶನ್ ಅನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ವಿಟಮಿನ್ ಇ ಹೊಂದಿರುವ ಲಿಪ್ ಬಾಮ್ ಗಳು ತುಟಿಗಳಿಗೆ ತೇವಾಂಶ ನೀಡುತ್ತದೆ ಮತ್ತು ತುಟಿಗಳ ಚರ್ಮ ಹಾನಿಯಾಗದಂತೆ

ವಿಟಮಿನ್ ಇ ಹೊಂದಿರುವ ಲಿಪ್ ಬಾಮ್ ಗಳು ತುಟಿಗಳಿಗೆ ತೇವಾಂಶ ನೀಡುತ್ತದೆ ಮತ್ತು ತುಟಿಗಳ ಚರ್ಮ ಹಾನಿಯಾಗದಂತೆ ತಡೆಯುತ್ತದೆ. ಆದ್ದರಿಂದ ನೀವು ಒಣ ಮತ್ತು ಕಿರಿಕಿರಿಯ ತುಟಿಗಳನ್ನು ಹೊಂದಿದ್ದರೆ, ವಿಟಮಿನ್ ಇ ಸಂಯುಕ್ತವನ್ನು ಹೊಂದಿರುವ ಲಿಪ್ ಬಾಮ್ ಅನ್ನು ಖರೀದಿಸಿ ಬಳಸಿ

**ಶಿಯಾ ಬೆಣ್ಣೆ**

ಶಿಯಾ ಬೆಣ್ಣೆ ತುಟಿಗಳಿಗೆ ನೈಸರ್ಗಿಕವಾಗಿ ಮಾಯಿಶ್ಚರೈಸರ್ ಮಾಡುತ್ತದೆ. ವಿಟಮಿನ್ ಎ ಮತ್ತು ಇ ಎರಡನ್ನೂ ಒಳಗೊಂಡಿರುವ ಶಿಯಾ ಬೆಣ್ಣೆ ತುಟಿಗಳ ಮೇಲಿನ ಹಾನಿಗೊಳಗಾದ ಚರ್ಮವನ್ನು ಸರಿಪಡಿಸಲು ಸಹಾಯ ಮಾಡುತ್ತದೆ.ಇದರ ಉತ್ಕರ್ಷಣ ನಿರೋಧಕಗಳು ಮತ್ತು ಉರಿಯೂತದ ಗುಣಲಕ್ಷಣಗಳು ತುಟಿಯ ಊತವನ್ನು ಕಡಿಮೆ ಮಾಡುತ್ತದೆ. ಮತ್ತು ತುಟಿ ದಪ್ಪವಾಗಿ ಕಾಣುವಂತೆ ಮಾಡುತ್ತದೆ. ಹಾಗಾಗಿ ತುಟಿಗಳು ಯಾವಾಗಲೂ ಶುಷ್ಕ ಮತ್ತು ಚಪ್ಪಟೆಯಾಗಿದ್ದರೆ ಶಿಯಾ ಬೆಣ್ಣೆ ಇರುವಂತಹ ಲಿಪ್ ಬಾಮ್ ಬಳಸಿ ಆಶ್ಚರ್ಯಕರ ಫಲಿತಾಂಶವನ್ನು ಪಡೆಯಿರಿ.

**ತೆಂಗಿನ ಎಣ್ಣೆ**

ತೆಂಗಿನ ಎಣ್ಣೆ ನೈಸರ್ಗಿಕ ಮಾಯಿಶ್ಚರೈಸಿಂಗ್ ಏಜೆಂಟ್ ಆಗಿದೆ. ಇದು ಚರ್ಮದ ಆರೋಗ್ಯಕ್ಕೆ ಪ್ರಯೋಜನಕಾರಿಯಾಗಿದೆ. ತುಟಿಗಳಂತಹ ತೆಳುವಾದ ಚರ್ಮವನ್ನು ಹೊಂದಿರುವ ಭಾಗಗಳಿಗೆ ತೆಂಗಿನ ಎಣ್ಣೆ ಹಚ್ಚುವುದರಿಂದ ಸಮಸ್ಯೆಗಳು ಬೇಗನೆ ವಾಸಿಯಾಗುತ್ತದೆ.

ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಹೆಲ್ತ್ ನಡೆಸಿದ ಅಧ್ಯಯನದ ಪ್ರಕಾರ, ತೆಂಗಿನ ಎಣ್ಣೆಯ ಆಂಟಿಮೈಕ್ರೊಬಿಯಲ್ ಗುಣಲಕ್ಷಣಗಳು ಚರ್ಮದ ಸೋಂಕನ್ನು ತಡೆಯುತ್ತವೆ. ಇದರ ಎಮೋಲಿಯಂಟ್ ಅಂಶ ತುಟಿಗಳನ್ನು ಯಾವಾಗಲೂ ಹೈಡ್ರೇಟ್ ಮತ್ತು ತೇವಾಂಶದಿಂದ ಕೂಡಿರುವಂತೆ ಮಾಡುತ್ತದೆ.

**ಜೊಜೊಬಾ ಎಣ್ಣೆ**

ಜೊಜೊಬಾ ಎಣ್ಣೆ ವಿಟಮಿನ್ ಇ ಯ ಜೊತೆಗೆ ಇತರ ಪೋಷಕಾಂಶಗಳನ್ನು ಹೊಂದಿದೆ. ಇದರ ನೈಸರ್ಗಿಕ ಮಾಯಿಶ್ಚರೈಸಿಂಗ್ ಗುಣವು ತುಟಿಯ ಚರ್ಮವನ್ನು ಮೃದುವಾಗಿಸಿ ಹೊಳೆಯುವಂತೆ ಮಾಡುತ್ತದೆ.

ಇದು ತುಟಿಗಳನ್ನು ಸೂರ್ಯನ ಹಾನಿಕಾರಕ ಕಿರಣಗಳಿಂದ ರಕ್ಷಿಸುತ್ತದೆ ಮತ್ತು ಹೈಪರ್ಪಿಗ್ಮೆಂಟೇಶನ್ ಅನ್ನು ಕಡಿಮೆ ಮಾಡಲು ಒಳ್ಳೆಯದು ಎಂದು ಪರಿಗಣಿಸಲಾಗಿದೆ. ಜೊಜೊಬಾ ಎಣ್ಣೆ ಇರುವಂತಹ ಲಿಪ್ ಬಾಮ್ ಗಳು ನಿಮ್ಮ ತುಟಿಯ ಅನೇಕ ಸಮಸ್ಯೆಗಳನ್ನು ಪರಿಹಾರ ಮಾಡುತ್ತವೆ.

## ಕೊಲೆಸ್ಟ್ರಾಲ್, ಶುಗರ್ ಇರೋರು ಬೆಳಗ್ಗೆ ಒಂದು ಹಿಡಿ ಮೊಳಕೆಯೊಡೆದ ಈ ಕಾಳು ತಿನ್ನಬೇಕು






ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ 1 ಹಿಡಿ ಮೊಳಕೆಯೊಡೆದ ಮೆಂತ್ಯವನ್ನು ಸೇವಿಸಿದರೆ ಕೊಲೆಸ್ಟ್ರಾಲ್ ಮತ್ತು ಮಧುಮೇಹದಿಂದ ಮುಕ್ತಿ ಸಿಗುತ್ತದೆ. ಮೊಳಕೆಯೊಡೆದ ಮೆಂತ್ಯವು ಪೋಷಕಾಂಶಗಳಿಂದ ಸಮೃದ್ಧವಾಗಿದೆ. ಇದರ ಸೇವನೆಯು ಆರೋಗ್ಯಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಪ್ರಯೋಜನಕಾರಿ ಎಂದು ಸಾಬೀತುಪಡಿಸುತ್ತದೆ.

ಮೆಂತ್ಯ ಬೀಜಗಳನ್ನು ನೀರಿನಲ್ಲಿ ನೆನೆಸಿದ ನಂತರ ಮೊಳಕೆ ಭರಿಸಿ. ಮೊಳಕೆಯೊಡೆಯುವುದರಿಂದ ಮೆಂತ್ಯದಲ್ಲಿನ ಅನೇಕ ಪೋಷಕಾಂಶಗಳ ಪ್ರಮಾಣವು ಹೆಚ್ಚಾಗುತ್ತದೆ. ಇದು ಆರೋಗ್ಯಕ್ಕೆ ಇನ್ನಷ್ಟು ಪ್ರಯೋಜನಕಾರಿಯಾಗಿದೆ.

ಮೊಳಕೆಯೊಡೆದ ಮೆಂತ್ಯದ ಪ್ರಯೋಜನಗಳು

ಮೊಳಕೆಯೊಡೆದ ಮೆಂತ್ಯದಲ್ಲಿ ಇರುವ ಫೈಬರ್ ಮತ್ತು ಇತರ ಪೋಷಕಾಂಶಗಳು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಇದು ಇನ್ಸುಲಿನ್ ಸೂಕ್ಷ್ಮತೆಯನ್ನು ಹೆಚ್ಚಿಸುವ ಮೂಲಕ ಮತ್ತು ದೇಹದಲ್ಲಿ ಸಕ್ಕರೆಯ ಹೀರಿಕೊಳ್ಳುವಿಕೆಯನ್ನು ನಿಧಾನಗೊಳಿಸುವ ಮೂಲಕ ಮಧುಮೇಹ ರೋಗಿಗಳಿಗೆ ಪ್ರಯೋಜನಕಾರಿಯಾಗಿದೆ.

ಮೊಳಕೆಯೊಡೆದ ಮೆಂತ್ಯದಲ್ಲಿರುವ ಲೆಕ್ಟಿನ್ ಎಂಬ ಅಂಶವು ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಲು ಮತ್ತು ಉತ್ತಮ ಕೊಲೆಸ್ಟ್ರಾಲ್ ಅನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ.

ಇದು ಹೃದಯ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ.ಕೂದಲನ್ನು ಬಲವಾಗಿ ಮತ್ತು ಹೊಳೆಯುವಂತೆ ಮಾಡಲು ಸಹಾಯ ಮಾಡುತ್ತದೆ. ಕೂದಲು ಉದುರುವುದನ್ನು ತಡೆಯಲು ಮತ್ತು ಕೂದಲಿನ ಬೆಳವಣಿಗೆಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ.

ಇದರಲ್ಲಿರುವ ಫೈಬರ್ ಜೀರ್ಣಾಂಗ ವ್ಯವಸ್ಥೆಯನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ.ಇದು ಮಲಬದ್ಧತೆ, ಆಮ್ಲೀಯತೆ ಮತ್ತು ಅಜೀರ್ಣದಂತಹ ಸಮಸ್ಯೆಗಳಿಂದ ಪರಿಹಾರವನ್ನು ನೀಡುತ್ತದೆ.ಇದು ಕಡಿಮೆ ಕ್ಯಾಲೋರಿ ಅಂಶವನ್ನು ಹೊಂದಿದೆ ಮತ್ತು ದೀರ್ಘಕಾಲದವರೆಗೆ ಹೊಟ್ಟೆಯನ್ನು ತುಂಬಿರುವಂತೆ ಮಾಡುತ್ತದೆ

. ಇದು ತೂಕ ನಷ್ಟಕ್ಕೆ ಸಹಾಯ ಮಾಡುತ್ತದೆ. ಮೊಳಕೆಯೊಡೆದ ಮೆಂತ್ಯವು ಆಂಟಿಆಕ್ಸಿಡೆಂಟ್ಗಳನ್ನು ಹೊಂದಿದ್ದು ಅದು ಫ್ರೀ ರಾಡಿಕಲ್ಗಳಿಂದ ಚರ್ಮವನ್ನು ರಕ್ಷಿಸುತ್ತದೆ ಮತ್ತು ಆರೋಗ್ಯಕರವಾಗಿರುತ್ತದೆ. ಇದು ಮೊಡವೆ ಮತ್ತು ಕಲೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

## ಕಿಡ್ನಿಸ್ಟೋನ್ ನಿವಾರಿಸಲು ಬೆಸ್ಟ್ ಅಂತೆ ಈ ಪುಟ್ಟ ಗಿಡ



ನೆಲನೆಲ್ಲಿಯನ್ನು ನೀವು ನೋಡಿರಬಹುದು, ಕೆಲವೊಮ್ಮೆ ಇದು ರಸ್ತೆ ಬದಿಯಲ್ಲಿ, ಗದ್ದೆ ಬದಿಯಲ್ಲೂ, ತೋಟದಲ್ಲೂ ಬೆಳೆದಿರುತ್ತದೆ. ಇದೊಂದು ಪುಟ್ಟ ಸಸ್ಯವಾಗಿದ್ದು, ಸಾಕಷ್ಟು ಆಯುರ್ವೇದಿಕ್ ಗುಣಗಳನ್ನು ಹೊಂದಿದೆ. ನೆಲನೆಲ್ಲಿಯನ್ನು ಕಷಾಯ ಮಾಡಿ ಕುಡಿಯುವುದರಿಂದ ಹಲವಾರು ರೋಗಗಳಿಂದ ಪಾರಾಗಬಹುದು. ನಾವಿಂದು ಈ ಪುಟ್ಟ ಗಿಡದಿಂದ ಯಾವೆಲ್ಲಾ ಆರೋಗ್ಯ ಸಮಸ್ಯೆಗಳಿಂದ ಪಾರಾಗಬಹುದು ಎನ್ನುವುದನ್ನು ತಿಳಿಯೋಣ.

ನೆಲನೆಲ್ಲಿಯನ್ನು "ಸ್ಟೋನ್ ಬ್ರೇಕರ್" ಎಂದೂ ಕರೆಯುತ್ತಾರೆ ಏಕೆಂದರೆ ಇದು ಮೂತ್ರಪಿಂಡದ ಕಲ್ಲುಗಳಿಗೆ ಚಿಕಿತ್ಸೆ ನೀಡಬಲ್ಲದು. ಈ ಗಿಡ ಮೂಲಿಕೆಯು ಕ್ಷಾರೀಯ ಗುಣಗಳನ್ನು ಹೊಂದಿದೆ, ಇದು ಮೂತ್ರಪಿಂಡದ ಕಲ್ಲುಗಳು ಮತ್ತು ಪಿತ್ತಗಲ್ಲುಗಳ ಬೆಳವಣಿಗೆಯನ್ನು ತಡೆಯಲು ಸಹಾಯ ಮಾಡುತ್ತದೆ. ಆಯುರ್ವೇದ ಔಷಧದ ಪ್ರಕಾರ, ಮೂತ್ರಪಿಂಡದ ಕಲ್ಲು ಉತ್ಪಾದನೆಗೆ ನೆಲನೆಲ್ಲಿ ಅತ್ಯಂತ ಭರವಸೆಯ ಚಿಕಿತ್ಸೆಯಾಗಿದೆ.

ಪಿತ್ತಗಲ್ಲುಗಳು ಪಿತ್ತಕೋಶದಲ್ಲಿ ರೂಪುಗೊಳ್ಳುವ ಜೀರ್ಣಕಾರಿ ದ್ರವದ ಸಣ್ಣ, ಗಟ್ಟಿಯಾದ ನಿಕ್ಷೇಪಗಳಾಗಿವೆ. ಅವು ಸಾಮಾನ್ಯವಾಗಿ ಕೊಲೆಸ್ಟ್ರಾಲ್ ಅಥವಾ ಬೈಲಿರುಬಿನ್ನಿಂದ ಕೂಡಿರುತ್ತವೆ ಮತ್ತು ಗಾತ್ರ ಮತ್ತು ಪ್ರಮಾಣದಲ್ಲಿರುತ್ತವೆ. ಪಿತ್ತಗಲ್ಲು ಹೊಂದಿರುವ ಹೆಚ್ಚಿನ ಜನರು ರೋಗಲಕ್ಷಣಗಳನ್ನು ಅನುಭವಿಸುವುದಿಲ್ಲ ಅಥವಾ ಚಿಕಿತ್ಸೆಯ ಅಗತ್ಯವಿರುವುದಿಲ್ಲ. ಒಂದು ವೇಳೆ ನೀವು ತೊಡಕುಗಳನ್ನು ಅನುಭವಿಸಿದರೆ ಔಷಧಿ ಅಥವಾ ಶಸ್ತ್ರಚಿಕಿತ್ಸೆಯ ಅಗತ್ಯವಿರುತ್ತದೆ.

ನೆಲನೆಲ್ಲಿಯ ಸಾರವು ಪರೀಕ್ಷಾ–ಟ್ಯೂಬ್ ಪರೀಕ್ಷೆಗಳಲ್ಲಿ ಹೆಲಿಕೋಬ್ಯಾಕ್ಟರ್ ಪೈಲೋರಿ ಬ್ಯಾಕ್ಟೀರಿಯಂ ಅನ್ನು ಕೊಂದಿತು, ಇದು ಹೊಟ್ಟೆಯ ಹುಣ್ಣುಗಳಿಗೆ ಕಾರಣವಾಗಿದೆ. ಜನರಲ್ಲಿ ಹೊಟ್ಟೆಯ ಹುಣ್ಣುಗಳಿಗೆ ಚಿಕಿತ್ಸೆ ನೀಡಲು ನೆಲನೆಲ್ಲಿಯನ್ನು ಹೊಂದಿರುವ ಮೌಖಿಕ ಪೂರಕವು ಉಪಯುಕ್ತವಾಗಿದೆಯೇ ಎಂದು ನಿರ್ಧರಿಸಲು ಹೆಚ್ಚಿನ ಸಂಶೋಧನೆಯ ಅಗತ್ಯವಿದೆ.

ನೆಲನೆಲ್ಲಿಯ ಪೂರಕಗಳು ಕಾರ್ಯನಿರ್ವಹಿಸುವ ವಿಧಾನವು ಟೆಸ್ಟ್–ಟ್ಯೂಬ್ ಸಂಶೋಧನೆಯಲ್ಲಿ ಬಳಸಲಾಗುವ ಅತ್ಯಂತ ಕೇಂದ್ರೀಕೃತ ಸಾರಗಳಿಗಿಂತ ಭಿನ್ನವಾಗಿದೆ, ಇವುಗಳನ್ನು ನೇರವಾಗಿ ಬ್ಯಾಕ್ಟೀರಿಯಾದ ಜೀವಕೋಶಗಳಿಗೆ ನೀಡಲಾಗುತ್ತದೆ.

ನೆಲನೆಲ್ಲಿಯಲ್ಲಿ ಒಳಗೊಂಡಿರುವ ಉತ್ಕರ್ಷಣ ನಿರೋಧಕಗಳು ಕೆಲವು ಪ್ರಾಣಿಗಳ ರಕ್ತದಲ್ಲಿನ ಸಕ್ಕರೆಯ ಪ್ರಮಾಣವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತವೆ. ಆದಾಗ್ಯೂ, ಹೆಚ್ಚಿನ ಮಾನವ ಅಧ್ಯಯನಗಳು ಅಗತ್ಯವಿದೆ.

ಸಾಂಪ್ರದಾಯಿಕ ಚೀನೀ ಔಷಧದ ಪ್ರಕಾರ, ನೆಲನೆಲ್ಲಿ ಯಕೃತ್ತಿನ ಕಾರ್ಯವನ್ನು ಹೆಚ್ಚಿಸುವ ಮೂಲಿಕೆಯಾಗಿದೆ. ನೆಲನೆಲ್ಲಿ ಹೆಪಟೈಟಿಸ್ ಬಿ ವೈರಸ್ನ ಹರಡುವಿಕೆ ಮತ್ತು ಬೆಳವಣಿಗೆಯನ್ನು ತಡೆಯುತ್ತದೆ, ವೈರಸ್ನ ರಕ್ತದ ಮಟ್ಟವನ್ನು ಕಡಿಮೆಗೊಳಿಸುತ್ತದೆ, ಮತ್ತು ಯಕೃತ್ತಿನ ಕಾರ್ಯವನ್ನು ಪುನಃಸ್ಥಾಪಿಸಿತು.

## ಶುಂಠಿ ಜ್ಯೂಸ್ ಕುಡಿಯೋದ್ರಿಂದ ಎಷ್ಟೆಲ್ಲಾ ಲಾಭಗಳಿವೆ ನೋಡಿ



ಶುಂಠಿಯು ಸಾಕಷ್ಟು ಆಯುರ್ವೇದಿಕ್ ಗುಣಗಳನ್ನು ಹೊಂದಿರುವ ಗಿಡಮೂಲಿಕೆಗಳಾಗಿದೆ. ಶುಂಠಿ ರಸವನ್ನು ಸೇವಿಸುವುದರಿಂದ ಹಲವಾರು ಸಣ್ಣ ಪುಟ್ಟ ರೋಗಗಳನ್ನು ದೂರವಿಡಬಹುದು. ನೀವು ಇದನ್ನು ಹಸಿಯಾಗಿಯೂ ಸೇವಿಸಬಹುದು ಅಥವಾ ಒಣ ಶುಂಠಿಯನ್ನಾದರೂ ಸೇವಿಸಬಹುದು.ಶುಂಠಿ ರಸವು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ, ಇದು ಆಕ್ಸಿಡೇಟಿವ್ ಒತ್ತಡ ಮತ್ತು ಸೆಲ್ಯುಲಾರ್ ಹಾನಿಗೆ ಕಾರಣವಾಗುವ ಫ್ರೀ ರಾಡಿಕಲ್ಗಳನ್ನು ಎದುರಿಸುವ ಮೂಲಕ ಪ್ರತಿರಕ್ಷಣಾ ವ್ಯವಸ್ಥೆಯನ್ನು ಬೆಂಬಲಿಸುತ್ತದೆ. ಒಟ್ಟಾರೆ ಆರೋಗ್ಯ ಮತ್ತು ಸೋಂಕುಗಳ ವಿರುದ್ಧ ಸ್ಥಿತಿಸ್ಥಾಪಕತ್ವವನ್ನು ಕಾಪಾಡಿಕೊಳ್ಳಲು ಇದು ಅತ್ಯಗತ್ಯ.ಶುಂಠಿ ರಸವು ಅದರ ಜೀರ್ಣಕಾರಿ ಪ್ರಯೋಜನಗಳಿಗಾಗಿ ಹೆಸರುವಾಸಿಯಾಗಿದೆ. ಇದು ನೈಸರ್ಗಿಕ ಕಿಣ್ವಗಳನ್ನು ಹೊಂದಿದ್ದು, ಇದು ಆಹಾರವನ್ನು ಒಡೆಯಲು ಸಹಾಯ ಮಾಡುತ್ತದೆ ಮತ್ತು ಜೀರ್ಣಾಂಗವ್ಯೂಹದ ಸುಗಮ ಕಾರ್ಯನಿರ್ವಹಣೆಯನ್ನು ಬೆಂಬಲಿಸುತ್ತದೆ. ಇದು ಹೊಟ್ಟೆ ಉಬ್ಬುವುದು ಮತ್ತು ಅಜೀರ್ಣದಂತಹ ರೋಗಲಕ್ಷಣಗಳನ್ನು ನಿವಾರಿಸಲು ಸಹಾಯ ಮಾಡುತ್ತದೆ.

ಶುಂಠಿಯನ್ನು ಸೇವಿಸುವುದರಿಂದ ವಾಕರಿಕೆ, ಬೆಳಗಿನ ಬೇನೆ ಮತ್ತು ಮಲ ಬದ್ಧತೆ ಸೇರಿದಂತೆ ಹೊಟ್ಟೆಯ ಇನ್ನಿತರ ಸಮಸ್ಯೆಯನ್ನು ನಿವಾರಿಸಲು ಸಹಾಯ ಮಾಡುತ್ತದೆ. ಅಸ್ಥಿರತೆಯ ಭಾವನೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ಸಾಂಪ್ರದಾಯಿಕ ಔಷಧಿಗಳಿಗೆ ನೈಸರ್ಗಿಕ ಪರ್ಯಾಯವನ್ನು ನೀಡುತ್ತದೆ

# ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ತುಂಬುವ ಕೆಲಸ ಗುರುಕುಲ ಶಿಕ್ಷಣ ಸಂಸ್ಥೆ ಮಾಡುತ್ತಿದೆ : ಮೇಯರ್ ಚಮನ್ ಸಾಬ್

**ದಾವಣಗೆರೆ:** ಇಂದಿನ ದಿನಮಾನಗಳಲ್ಲಿ ಶಾಲೆ ನಡೆಸುವುದೇ ಕಷ್ಟಕರವಾಗಿದ್ದು, ಶಿಕ್ಷಣ ನೀಡುವ ಜೊತೆಗೆ ನೂರಾರು ಜನರಿಗೆ ಉದ್ಯೋಗ ನೀಡಿದ ಕೀರ್ತಿ ಗುರುಕುಲ ವಸತಿಯುತ ಶಾಲೆಯದ್ದಾಗಿದೆ ಎಂದು ಮಹಾನಗರ ಪಾಲಿಕೆ ಮೇಯರ್ ಕೆ.ಚಮನ್ ಸಾಬ್ ಅಭಿಪ್ರಾಯಪಟ್ಟರು.

ನಗರದ ಹೈಸ್ಕೂಲ್ ಮೈದಾನದಲ್ಲಿ ಗುರುಕುಲ ವಸತಿಯುತ ಶಾಲೆಯಿಂದ ಆಯೋಜಿಸಿದ್ದ ಗುರುಕುಲ ವೈಭವ –2025 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಸಕ ಶಾಮನೂರು ಶಿವಶಂಕರಪ್ಪ ಅವರ ಪ್ರಯತ್ನದಿಂದಾಗಿ ದಾವಣಗೆರೆಯು ಎಜ್ಯುಕೇಷನ್ ಹಬ್ ಆಗಿ ಬದಲಾಗಿದೆ. ಅವರು ಸಾಕಷ್ಟು ಶಾಲೆ, ಕಾಲೇಜುಗಳನ್ನು ಕಟ್ಟಿ ಮಾದರಿಯಾಗಿದ್ದಾರೆ ಎಂದರು.

ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ತುಂಬುವ ಕೆಲಸವನ್ನು ಗುರುಕುಲ ಶಿಕ್ಷಣ ಸಂಸ್ಥೆ ಮಾಡುತ್ತಿದೆ. ವಿದ್ಯಾರ್ಥಿಗಳಿಗೆ ಶಿಕ್ಷಣದೊಂದಿಗೆ ಕ್ರಿಯಾಶೀಲತೆಯನ್ನೂ ಕಲಿಸಲಾಗುತ್ತಿದೆ ಎಂದರು.

ಮಧ್ಯಮವರ್ಗದ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು.

ಶಿಕ್ಷಕರ ವೃತ್ತಿ ಸಮಾಜದಲ್ಲಿ ಶ್ರೇಷ್ಠ ಸ್ಥಾನ ಪಡೆದಿದೆ. ಎಲ್ಲರನ್ನೂ ಒಂದೇ ರೀತಿ ಕಂಡು ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗೆ ಶ್ರಮಿಸುವುದು ಶಿಕ್ಷಕರ ಕರ್ತವ್ಯವಾಗಿದೆ ಎಂದರು.

ದೂಡಾ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಮಾತನಾಡಿ, ಬೆಂಗಳೂರು, ಮೈಸೂರು, ಮಂಗಳೂರು ಶಿಕ್ಷಣ ಸಂಸ್ಥೆಗಳಿಗೆ ಇಲ್ಲಿನ ಗುರುಕುಲ ಶಿಕ್ಷಣ ಸಂಸ್ಥೆ ಪೈಪೋಟಿ



ನೀಡುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು.

ಈ ಸಂಸ್ಥೆಯಿಂದ ನಗರದಲ್ಲಿರುವುದರಿಂದ ಲಕ್ಷಾಂತರ ರೂಪಾಯಿ ಖರ್ಚು ಮಕ್ಕಳನ್ನು ಮಾಡಿ ಬೇರೆ ಕಡೆ ಕಳಿಸುವುದು ತಪ್ಪಿದೆ ಎಂದರು.

ಸಾಂಸ್ಕೃತಿಕ, ಕ್ರೀಡೆ ಹಾಗೂ ಇನ್ನಿತರ ಕಾರ್ಯಕ್ರಮಗಳಿಗೆ ಮಕ್ಕಳ ಪ್ರತಿಭಾ ಪ್ರದರ್ಶನಕ್ಕೆ ಪಾಲಕರು ಉತ್ತೇಜನ ನೀಡುತ್ತಿದ್ದಾರೆ. ಇದರ ಸದುಪಯೋಗವನ್ನು ಮಕ್ಕಳು ಪಡೆಯಬೇಕು ಎಂದರು.

ವಿದ್ಯಾರ್ಥಿಗಳು ಅನ್ಯ ಮಾರ್ಗಗಳತ್ತ ಗಮನ ಹರಿಸದೇ ಶೈಕ್ಷಣಿಕ ಪ್ರಗತಿಗೆ ಮಾತ್ರ ಗಮನ ಹರಿಸಬೇಕು. ಆ ಮೂಲಕ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ಗುರುಕುಲ ಎಜ್ಯುಕೇಷನಲ್ ಟ್ರಸ್ಟ್ ಅಧ್ಯಕ್ಷ ಅಬ್ದುಲ್ ಆರ್. ಅಧ್ಯಕ್ಷತೆ ವಹಿಸಿದ್ದರು.

ನ್ಯಾಯಾಧೀಶರಾದ ಗಾಯತ್ರಿ, ಡಿಡಿಪಿಐ ಕೊಟ್ರೇಶ್ ಜಿ., ಬಿಇಒ ಪುಷ್ಪಲತಾ, ಜಿಲ್ಲಾ ಕಾರಾಗೃಹ ಅಧೀಕ್ಷಕ ಆನಂದ್ ಸಿ. ಭಜಂತ್ರಿ, ಡಿವೈಎಸ್ಪಿ ಶರಣಬಸವೇಶ್ವರಯ್ಯ, ಕರವೇ ಜಿಲ್ಲಾ ಘಟಕದ ಅಧ್ಯಕ್ಷ ರಾಮೇಗೌಡ ಸೇರಿದಂತೆ ಹಲವು ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಸಾಂಸ್ಕೃತಿಕ ಕಾರ್ಯಕ್ರಮ ಗುರುಕುಲ ವೈಭವ ಕಾರ್ಯಕ್ರಮದಲ್ಲಿ ಮಕ್ಕಳು ಸಾಂಸ್ಕೃತಿಕ ಕಲಾ ವೈಭವವನ್ನು ಅನಾವರಣ ಮಾಡಿದರು.

ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿದ್ದ ಪ್ರೇಕ್ಷಕರನ್ನು ಹಾಡು, ನೃತ್ಯ ಪ್ರದರ್ಶನದ ಮೂಲಕ ವಿದ್ಯಾರ್ಥಿಗಳು ಗಮನ ಸೆಳೆದರು.

ವಿಶಾಲ ವೇದಿಕೆಯನ್ನು ಸರಿಯಾಗಿ ಬಳಸಿಕೊಂಡು ವಿದ್ಯಾರ್ಥಿಗಳು ಅದ್ಭುತವಾಗಿ ಹೆಜ್ಜೆ ಹಾಕಿದರು. ನೆರೆದಿದ್ದ ಪಾಲಕರು, ಶಾಲಾ ಆಡಳಿತ ಮಂಡಳಿ ಸದಸ್ಯರು, ಸಿಬ್ಬಂದಿ ಸಂಭ್ರಮಿಸಿದರು.

## ಚಿಕ್ಕಮಗಳೂರು: ಹಬ್ಬದ ಊಟಕ್ಕೆ ಬಂದು ಬಾವಿಗೆ ಬಿದ್ದ ಮಹಿಳೆ; ರಾತ್ರಿಯೆಲ್ಲಾ ನರಳಾಟ

**ಚಿಕ್ಕಮಗಳೂರು:** ಅಜ್ಜಂಪುರ ತಾಲೂಕಿನ ತಡಗಾ ಗ್ರಾಮದಲ್ಲಿ 40 ವರ್ಷದ ಮಹಿಳೆಯೊಬ್ಬರು ಆಕಸ್ಮಿಕವಾಗಿ ತಡೆಗೋಡೆ ಇಲ್ಲದ 20 ಅಡಿ ಆಳದ ಬಾವಿಗೆ ಬಿದ್ದು ತೀವ್ರಗಾಯಗೊಂಡಿದ್ದಾರೆ.ಹೊಳಕೆರೆ ತಾಲೂಕಿನ ಚಿಕ್ಕಜಾಜೂರಿನ ತಿಮ್ಮಕ್ಕ (40) ತಡಗಾ ಗ್ರಾಮದ ಸಂಬಂಧಿಕರ ಮನೆಗೆ ಹಬ್ಬದ ಊಟಕ್ಕೆ ಬಂದಿದ್ದರು. ರಾತ್ರಿ ಆಕಸ್ಮಿಕವಾಗಿ ಕಾಲುಜಾರಿ ಬಾವಿಗೆ ಬಿದ್ದಿದ್ದಾರೆ. ರಾತ್ರಿಯಿಡೀ ಸಹಾಯಕ್ಕಾಗಿ ಅಳುತ್ತಿದ್ದರು. ದುರದೃಷ್ಟವಶಾತ್, ಯಾರೂ ಅವಳನ್ನು ಗಮನಿಸಲಿಲ್ಲ. ಮರುದಿನ ಆಕೆಯ ಕಿರುಚಾಟ ಕೇಳಿದ ಗ್ರಾಮಸ್ಥರು ಮಹಿಳೆಯನ್ನು ಪತ್ತೆ ಮಾಡಿದರು. ಕೂಡಲೇ ಅವರು ಅಗ್ನಿಶಾಮಕ ಮತ್ತು ತುರ್ತು ಸೇವಾ ಸಿಬ್ಬಂದಿಗೆ ಮಾಹಿತಿ ನೀಡಿದರು. ನಂತರ ಬಂದ ಸಿಬ್ಬಂದಿ ಆಕೆಯನ್ನು ರಕ್ಷಿಸಿದ್ದಾರೆ. ಮಹಿಳೆ ಸದ್ಯ ಆರೋಗ್ಯದಿಂದ ಇದ್ದಾರೆ.

## ವೀರೇಂದ್ರ ಹೆಗ್ಗಡೆ ಸಹೋದರನ 7.59 ಎಕರೆ ಭೂ ಮಂಜೂರಾತಿ ರದ್ದುಗೊಳಿಸಿದ ಕೋರ್ಟ್

**ಮಂಗಳೂರು:** ರಾಜ್ಯಸಭಾ ಸಂಸದ ಹಾಗೂ ಧರ್ಮಸ್ಥಳದ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆ ಅವರ ಸಹೋದರ ಡಿ.ಹರ್ಷೇಂದ್ರ ಕುಮಾರ್ ಹೆಗಡೆ ಅವರಿಗೆ ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳದಲ್ಲಿ ನೀಡಿದ್ದ 7.59 ಎಕರೆ ಕೃಷಿ ಭೂಮಿಯ ಅನುದಾನವನ್ನು ರದ್ದುಗೊಳಿಸಿ ಪುತ್ತೂರು ಸಹಾಯಕ ಆಯುಕ್ತರ ನ್ಯಾಯಾಲಯ ಆದೇಶ ಹೊರಡಿಸಿದೆ. ಮೈಸೂರು ಭೂ ಮಂಜೂರಾತಿ ನಿಯಮಗಳು, 1969 ರ ಅಡಿಯಲ್ಲಿ 1972 ರಲ್ಲಿ ಹರ್ಷೇಂದ್ರ ಅವರಿಗೆ ಭೂಮಿಯನ್ನು ನೀಡಲಾಗಿತ್ತು. ಆಗ ಸಲ್ಲಿಸಿದ ಅಫಿಡವಿಟ್ನಲ್ಲಿ, ವಾರ್ಷಿಕ 1,200 ರೂ. ಆದಾಯವಿರುವ 'ಭೂರಹಿತ' ಎಂದು ಗುರುತಿಸಿಕೊಂಡಿದ್ದ ಹರ್ಷೇಂದ್ರ, ಪಿತ್ರಾರ್ಜಿತವಾಗಿ ಅಥವಾ ಸ್ವಯಂ ಸಂಪಾದಿಸಿರುವ ಯಾವುದೇ ಸ್ವಂತ ಆಸ್ತಿ ಹೊಂದಿಲ್ಲ ಎಂದು ಹೇಳಿಕೊಂಡಿದ್ದರು, ಇದರಿಂದಾಗಿ ಭೂರಹಿತರಿಗೆ ಸರ್ಕಾರದ ನಿಬಂಧನೆಗಳ ಅಡಿಯಲ್ಲಿ ಭೂಮಿಗೆ ಅರ್ಹರಾಗಿದ್ದೇವೆ ಎಂದು ಮಾಹಿತಿ ನೀಡಿದ್ದರು.ಭೂ ಮಂಜೂರಾತಿಯನ್ನು ಬೆಳ್ತಂಗಡಿಯ ನಾಗರಿಕ ಸೇವಾ ಟ್ರಸ್ಟ್ನ ಕೆ ಸೋಮನಾಥ ನಾಯಕ್ ಅವರು ಪುತ್ತೂರು ಸಹಾಯಕ ಆಯುಕ್ತರ ನ್ಯಾಯಾಲಯದಲ್ಲಿ 2015 ರಲ್ಲಿ ಪ್ರಶ್ನಿಸಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ ಹರ್ಷೇಂದ್ರ ಅವರು ಕರ್ನಾಟಕ ಹೈಕೋರ್ಟ್ನಲ್ಲಿ ರಿಟ್ ಅರ್ಜಿ ಸಲ್ಲಿಸಿದರು, ಅದರಲ್ಲಿ ಅವರು ತಮ್ಮ ಹೆಸರಿನಲ್ಲಿ ಯಾವುದೇ ಜಮೀನು ಹೊಂದಿಲ್ಲ, ಎಸಿ ನ್ಯಾಯಾಲಯಕ್ಕೆ ಈ ಬಗ್ಗೆ ವಿಚಾರಣೆ ಮಾಡುವ ಅಧಿಕಾರವಿಲ್ಲ ಎಂದು ಪುನರುಚ್ಚರಿಸಿದ್ದರು.ಹರ್ಷೇಂದ್ರ ಕುಮಾರ್ ಹೆಗಡೆ ಅವರು ಸಾಕಷ್ಟು ಜಮೀನು ಹೊಂದಿರುವವರಲ್ಲ ಮತ್ತು ಅವರು ಭೂಮಿಯನ್ನು ಪಡೆಯಲು ಅರ್ಹರಾಗಿದ್ದಾರೆ ಎಂಬ ಅರ್ಜಿದಾರರ ಮನವಿಯನ್ನು ಪರಿಶೀಲಿಸುವಂತೆ 2022 ರಲ್ಲಿ ರಿಟ್ ಅರ್ಜಿಯನ್ನು ವಿಲೇವಾರಿ ಮಾಡುವಾಗ, ಎಸಿ ಕೋರ್ಟ್ ಗೆ ಉಚ್ಚ ನ್ಯಾಯಾಲ ನಿರ್ದೇಶನ ನೀಡಿತ್ತು.ಎಂಅ ಕೇವಲ ನ್ಯಾಯಾಲಯದ ಮುಂದೆ ಸಲ್ಲಿಸಲಾದ ಆಕ್ಷೇಪಣೆಗಳ ಹೇಳಿಕೆಯ ಆಧಾರದ ಮೇಲೆ, ಈ ನ್ಯಾಯಾಲಯವು ಆಕ್ಷೇಪಣೆಗಳ ಹೇಳಿಕೆಯ ವಿಷಯಗಳನ್ನು ದೃಢೀಕರಿಸಿದೆ ಎಂದು ಭಾವಿಸುವುದಿಲ್ಲ. ಅರ್ಜಿದಾರರು ತಯಾರಿಸಿದ ವಸ್ತುಗಳ ಆಧಾರದ ಮೇಲೆ ಎಂಅ ಸ್ವತಂತ್ರವಾಗಿ ವಿಷಯವನ್ನು ಪರಿಗಣಿಸುತ್ತದೆ ಮತ್ತು ನಂತರ ಸೂಕ್ತ ಆದೇಶಗಳನ್ನು ನೀಡುತ್ತದೆ. 2012ರಲ್ಲಿ ವೀರೇಂದ್ರ ಹೆಗ್ಗಡೆ ಅವರು ತಮ್ಮ ಅವಿಭಜಿತ ಕುಟುಂಬದಲ್ಲಿ (ಹರ್ಷೇಂದ್ರ ಸೇರಿದಂತೆ) 4,671.06 ಎಕರೆ ಹೊಂದಿತ್ತು. ಆದ–ರೆ ಕರ್ನಾಟಕ ಭೂಸುಧಾರಣಾ ಕಾಯ್ದೆ ಜಾರಿಯಾದ ನಂತರ 71,050 ಎಕರೆ ಜಮೀನು ಹೊಂದಿದ್ದಾರೆ ಹೀಗಾಗಿ ಭೂ ಮಂಜೂರಾತಿ ರದ್ದುಗೊಳಿಸುವಂತೆ ಎಸಿ ನ್ಯಾಯಾಲಯದಲ್ಲಿ ನಾಯಕ್ ಮನವಿ ಮಾಡಿದ್ದರು.

## ಸಿಎಂ ಬದಲಾವಣೆ ವಿಚಾರ ಅಪ್ರಸ್ತುತ: ಸಚಿವ ಕೆ.ಎಚ್.ಮುನಿಯಪ್ಪ

**ಬೆಳಗಾವಿ:** ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದಲ್ಲಿ ಉತ್ತಮ ಆಡಳಿತ ನೀಡುತ್ತಿದ್ದು, ಅವರೇ ಮುಖ್ಯಮಂತ್ರಿಯಾಗಿ ಇರುತ್ತಾರೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಪೂರೈಕೆ ಸಚಿವ ಕೆ.ಹೆಚ್. ಮುನಿಯಪ್ಪ ಅವರು ಬುಧವಾರ ಹೇಳಿದರು.ಸುದ್ದಿಗಾರರೊಂದಿಗ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿರುವಾಗ, ಅವರನ್ನು ಬದಲಾಯಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಹೇಳಿದರು.ರಾಜ್ಯದ ಜನರ ಹಿತದೃಷ್ಟಿಯಿಂದ ಸಿದ್ದರಾಮಯ್ಯ ಉತ್ತಮ ಆಡಳಿತ ನೀಡುತ್ತಿದ್ದಾರೆ. ಮುಂದೆ ಬಜೆಟ್ ಇದೆ, ಒಳ್ಳೆಯ ಬಜೆಟ್ ಅನ್ನು ಮುಖ್ಯಮಂತ್ರಿಗಳು ನೀಡಲಿದ್ದಾರೆ. ಸರ್ಕಾರದಿಂದ ಗ್ಯಾರಂಟಿ ಯೋಜನೆಗಳು ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರಲಾಗುತ್ತಿದ್ದು, ಸಿದ್ದರಾಮಯ್ಯ ಉತ್ತಮ ಆಡಳಿತ ನೀಡುತ್ತಿದ್ದಾರೆ. ಮುಂದಿನ ತಿಂಗಳು ಉತ್ತಮ ಬಜೆಟ್ ಕೂಡ ಮಂಡಿಸಲಿದ್ದಾರೆ. ಹೀಗಾಗಿ ಅವರನ್ನು ಬದಲಾವಣೆ ಮಾಡುವ ಪ್ರಶ್ನೆಯೇ ಇಲ್ಲ ಎಂದು ತಿಳಿಸಿದರು.ಕೆಲವು ಸಚಿವರು ಮತ್ತು ಶಾಸಕರು ನವದೆಹಲಿಗೆ ಹೋಗಿ ಕಾಂಗ್ರೆಸ್ ಹೈಕಮಾಂಡ್ ಭೇಟಿಯಾಗಿ ಮುಖ್ಯಮಂತ್ರಿ ಬದಲಾಯಿಸುವಂತೆ ಒತ್ತಾಯಿಸಲು ಹೋಗುತ್ತಿರುವ ಕುರಿತ ಪ್ರಶ್ನೆಗೆ, 'ಆ ವಿಷಯ ನನ್ನ ಗಮನಕ್ಕೆ ಬಂದಿಲ್ಲ. ಯಾರೂ ನನ್ನೊಂದಿಗೆ ಚರ್ಚಿಸಿಲ್ಲ ಎಂದರು.

# ಗುರಿ ಹೊಂದಿರುವ ವಿದ್ಯಾರ್ಥಿಗಳಿಗೆ ದಾರಿ ತೋರುವುದು ಶಿಕ್ಷಕರ ಕರ್ತವ್ಯ: ಶಾಸಕ ತಮ್ಮಯ್ಯ

**ಚಿಕ್ಕಮಗಳೂರು :** ಗುರಿ ಹೊಂದಿರುವ ವಿದ್ಯಾರ್ಥಿಗಳಿಗೆ ದಾರಿ ತೋರುವುದು ಶಿಕ್ಷಕರ ಕರ್ತವ್ಯವಾಗಿದೆ. ಶಿಕ್ಷಣ ಕೇವಲ ನೌಕರಿಗಲ್ಲ ಉತ್ತಮ ಜೀವನ ನಿರ್ವಹಣೆಗೂ ಅತ್ಯವಶ್ಯಕ ಎಂದು. ಶಾಸಕ ಹೆಚ್.ಡಿ ತಮ್ಮಯ ಹೇಳಿದರು.

ನಗರದ ಕುವೆಂಪು ಕಲಾ ಮಂದಿರದಲ್ಲಿ ಯುನೈಟೆಡ್ ಇಂಟರ್ ನ್ಯಾಷನಲ್ ಸ್ಕೂಲ್‌ನ 23 ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮದ ಉದ್ಘಾಟನೆ ನಡೆಸಿ ಮಾತನಾಡಿದ ಅವರು ಮಕ್ಕಳು ಕಲಿಕೆಯಲ್ಲಿ ಹೆಚ್ಚು ಆಸಕ್ತಿ ವಹಿಸಬೇಕು. ಬಾಲ್ಯದಲ್ಲಿ ಮಕ್ಕಳ ಮನಸ್ಸು ಮತ್ತು ಬುದ್ಧಿಶಕ್ತಿ ಹೆಚ್ಚು ಕ್ರೀಯಾಶೀಲತೆಯಿಂದ ಕೂಡಿರುತ್ತದೆ. ಯಾವುದೇ ವಿಷಯವನ್ನು, ಕಲೆಯನ್ನು ಕರಗತ ಮಾಡಿಕೊಳ್ಳುವಂತ ಶಕ್ತಿ ಪ್ರತಿಯೊಂದು ಮಕ್ಕಳಲ್ಲಿ ಅಡಗಿರುತ್ತದೆ. ಪೋಷಕರು ಇವುಗಳನ್ನು ಅರಿತು ಮಕ್ಕಳನ್ನು ಪ್ರೋತ್ಸಾಹಿಸಬೇಕು ಎಂದರು.

ವಿದ್ಯೆ ಎಂಬುದು ಪ್ರಬಲ ಅಸ್ತ್ರ



ಇದನ್ನು ಸರಿಯಾದ ರೀತಿಯಲ್ಲಿ ಉಪಯೋಗಿಸಿಕೊಂಡಲ್ಲಿ ಪ್ರಪಂಚವನ್ನೇ ಬದಲಾಯಿಸಬಹುದು. ಮಕ್ಕಳು ವಿದ್ಯೆಯ ಜೊತೆಗೆ ಸಂಸ್ಕಾರವನ್ನು ಕಲಿತು ತಂದೆ–ತಾಯಿ, ಗುರು, ಹಿರಿಯರಿಗೆ ಗೌರವ ನೀಡುವುದನ್ನು ಕಲಿಯಬೇಕು ಎಂದ ಅವರು ಸುಮಾರು 23 ವರ್ಷಗಳಿಂದ ಉತ್ತಮ ಶಿಕ್ಷಣ ನೀಡಿ, ಮಕ್ಕಳ ಭವಿಷ್ಯ ರೂಪಿಸುತ್ತಿರುವ ಈ ಸಂಸ್ಥೆಯು ಇನ್ನಷ್ಟು ಬೆಳವಣಿಗೆ ಹೊಂದಲಿ ಎಂದು ಹಾರೈಸಿದರು.

ಯುನೈಟೆಡ್ ಶಾಲೆಯ ಅಧ್ಯಕ್ಷ ಜಮೀರ್ ಅಹಮದ್ ಮಾತನಾಡಿ. ಶಿಕ್ಷಣ ಕೇವಲ ಪುಸ್ತಕ ಹಾಗೂ ಪರೀ–ಕ್ಷೆಗೆ ಸೀಮಿತವಲ್ಲ. ಶಿಕ್ಷಣವೂ ಮಕ್ಕಳಲ್ಲಿ ವ್ಯಕ್ತಿತ ರೂಪಿಸುತ್ತದೆ. ಬದುಕು ನಿರ್ವಹಿಸುವ ಶಕ್ತಿ ನೀಡುತ್ತದೆ. ಒಬ್ಬ ಉತ್ತಮ ವಿದ್ಯಾರ್ಥಿ ಶಿಕ್ಷಣ ಸಂಸ್ಥೆಗೆ ಜೊತೆಗೆ ಸಾಮಾಜದಲ್ಲೂ ಉನ್ನತ ಸ್ಥಾನ ಗಳಿಸುತ್ತಾನೆ. ನಮ್ಮ ಸಂಸ್ಥೆಯ ಶಿಕ್ಷಕರು ಪ್ರತಿಯೊಂದು ಮಗುವಿನ ಉತ್ತಮ ಭವಿಷ್ಯಕ್ಕಾಗಿ ಶ್ರಮಿಸುತ್ತಿದ್ದಾರೆ. ವಿದ್ಯಾರ್ಥಿಗಳಲ್ಲಿ ಗುರಿ ಮುಖ್ಯ. ಪ್ರಸ್ತುತ ಸಮಾಜದಲ್ಲಿ ಜ್ಞಾನಕ್ಕೆ ಹೆಚ್ಚು ಪ್ರಾಮುಖ್ಯತೆ ದೊರಕುತ್ತಿದೆ ತಮ್ಮ ಆಸಕ್ತಿಯ ಕ್ಷೇತ್ರಗಳಲ್ಲಿ ಹೆಚ್ಚಿನ ಜ್ಞಾನ ಹೊಂದುವುದರ ಮೂಲಕ ತಮ್ಮ ಗುರಿ ತಲುಪಿ ಎಂದರು.

ಶಾಲೆಯ ಪ್ರಾಂಶುಪಾಲರಾದ ಆಯಿಶಾ ಜಮೀರ್ ಅಹಮದ್ ಮಾತನಾಡಿ ಶಾಲೆಯೂ ವಿದ್ಯೆ ಜೊತೆಗೆ ಸಮಾಜದ ಅರಿವನ್ನು ಮೂಡಿಸುತ್ತದೆ. ಪೋಷಕರು ಮಕ್ಕಳಲ್ಲಿ ವಿನಯತೆ, ಮನುಷ್ಯತ್ವ, ಸಂಸ್ಕೃತಿಗಳನ್ನು ಮನೆಯಲ್ಲೇ ಕಲಿಸಬೇಕು ಹಾಗೂ ಮಕ್ಕಳ ಸ್ವಯಂ ಕಲಿಕೆಗೆ ಅವಕಾಶ ಮಾಡಿಕೊಡಬೇಕು. ಅಂಕಗಳನ್ನು ಪ್ರತಿಯೊಂದು ಮಗುವು ಗಳಿಸಬಹುದು ಆದರೆ ಮಕ್ಕಳಲ್ಲಿ ನೈತಿಕ ಶಿಕ್ಷಣ ನೀಡಿ ಅವರನ್ನು ಸಮಾಜದ ಗೌರವಯುತ ವ್ಯಕ್ತಿಯಾಗಿ ರೂಪಿಸುವುದು ನಮ್ಮ ಕರ್ತವ್ಯ ಎಂದ ಅವರು ತಮ್ಮ ಮಕ್ಕಳ ಆಸಕ್ತಿಗಳನ್ನು ಅರಿತು ಅವರ ಮುಂದಿನ ಭವಿಷ್ಯ ನಿರ್ಮಿಸಿಕೊಳ್ಳಲು ಸಹಕರಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ನಜೀರ್ ಅಹಮದ್. ಶೇಖ್ ಇಸ್ಮಾಯಿಲ್, ಮುಖ್ಯ ಶಿಕ್ಷಕಿ ಇಂಪಾಗೌಡ, ಶಿಕ್ಷಕಿ ವನಿತ ಹೆಚ್. ಎಂ ಸೇರಿದಂತೆ ಪೋಷಕರು , ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಗ್ರಾ.ಪಂ. ನೌಕರರ ಪ್ರತಿಭಟನೆ



**ಚಿತ್ರದುರ್ಗ :** ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ರಾಜ್ಯ ಹಮಾಲಿ ಕಾರ್ಮಿಕರ ಫೆಡರೇಶನ್, ಗ್ರಾಮ ಪಂಚಾಯಿತಿ ನೌಕರರು ಜಿಲ್ಲಾ ಪಂಚಾಯಿತಿ ಎದುರು ಸಿ.ಐ.ಟಿ.ಯು. ವತಿಯಿಂದ ಬುಧವಾರ ಪ್ರತಿಭಟನೆ ನಡೆಸಿದರು.

ಗ್ರಾಮ ಪಂಚಾಯಿತಿಯಲ್ಲಿ ಕೆಲಸ ಮಾಡುತ್ತಿರುವ ಕರ ವಸೂಲಿಗಾರ, ಗುಮಾಸ್ತ, ಡಾಟಾ ಎಂಟ್ರಿ ಆಪರೇಟರ್ಸ್ ನೀರುಗಂಟಿಗಳು, ಜವಾನ, ಸ್ವಚ್ಚಗಾರರನ್ನು ಸರ್ಕಾರಿ ನೌಕರರೆಂದು ಪರಿಗಣಿಸಬೇಕು. ದಿನನಿತ್ಯ ಬಳಕೆಯ ಪದಾರ್ಥಗಳ ಬೆಲೆ ಏರಿಕೆಯಾಗಿರುವುದರಿಂದ ಮಾಸಿಕ 31 ಸಾವಿರ ರೂ.ಗಳ ವೇತನ ನಿಗಧಿಪಡಿಸಬೇಕು. ಗ್ರಾಮ ಪಂಚಾಯಿತಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರು ನಿವೃತ್ತಿ/ಮರಣ ಹೊಂದಿದರೆ ಪ್ರತಿ ತಿಂಗಳು ಕನಿಷ್ಟ ಆರು ಸಾವಿರ ರೂ.ಪಿಂಚಣಿ ಕೊಡಬೇಕು. ಗ್ರಾಮ ಪಂಚಾಯಿತಿಗಳಿಗೆ ಎರಡನೆ ಡಾಟಾ ಎಂಟ್ರಿ ಆಪರೇಟರ್ಸ್ ಹುದ್ದೆಗೆ ಅವಕಾಶ ನೀಡಿರುವುದು ಸ್ವಾಗತಾರ್ಹ. ಆದರೆ ಈಗಾಗಲೆ ಗ್ರಾಮ ಪಂಚಾಯಿತಿಗಳಲ್ಲಿ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸುವ ಡಾಟಾ ಎಂಟ್ರಿ ಆಪರೇಟರ್ಸ್ಗಳನ್ನು ನೇಮಕ ಮಾಡಿಕೊಂಡು ಮುಂದುವರೆಸಬೇಕು. ಕಂಪ್ಯೂಟರ್ ಜ್ಞಾನ ಹೊಂದಿದವರಿಗೆ ಅವಕಾಶ ಕೊಡಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ನೀರುಗಂಟಿಗಳಿಗೆ ಮಲ್ಟಿ ಪರ್ಪಸ್ ಎನ್ನುವುದನ್ನು ಕೈಬಿಟ್ಟು ನಿರ್ದಿಷ್ಟವಾದ ಕೆಲಸ ನೀಡಬೇಕು. ಆದಾಯಕ್ಕನುಗುಣವಾಗಿ ಕರವಸೂಲಿಗಾರರ ಹುದ್ದೆಗಳನ್ನು ನಿಗಧಿಪಡಿಸಬೇಕು. ಪ್ರತಿಯೊಂದು ಗ್ರಾಮ ಪಂಚಾಯಿತಿಗಳಿಗೆ ಲೆಕ್ಕ ಸಹಾಯಕ ಹುದ್ದೆ ಸೃಷ್ಟಿಸಿ ಐ.ಪಿ.ಡಿ.ಸಾಳಪ್ಪ ವರದಿಯಂತೆ ಸ್ವಚ್ಚತಾಗಾರರನ್ನು ನೇಮಿಸಬೇಕು.

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ 23 ಅಸಂಘಟಿತ ವಲಯದ ಕಾರ್ಮಿಕರಿಗೆ ಅಪಘಾತದಿಂದಾದ ಮರಣ, ಅಂಗವೈಕಲ್ಯ ಚಿಕಿತ್ಸೆಗೆ ಪರಿಹಾರವನ್ನು ಜಾರಿ ಮಾಡಿರುವುದು ಸರಿಯಷ್ಟೆ. ಕಾರ್ಮಿಕರು ಜೀವಂತವಾಗಿರುವಾಗಲೆ ನೆರವಾಗುವಂತ ಭವಿಷ್ಯನಿಧಿ, ಪಿಂಚಣಿ, ಶಿಕ್ಷಣ, ಆರೋಗ್ಯ ಇನ್ನು ಮುಂತಾದ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಜಾರಿಗೊಳಿಸಬೇಕು. ಹಮಾಲಿ ಕಾರ್ಮಿಕರು ಸೇರಿದಂತೆ ವಿವಿಧ ವಲಯದ ಅಸಂಘಟಿತ ಕಾರ್ಮಿಕರಿಗೆ ಕಾರ್ಮಿಕ ಇಲಾಖೆ ಸಿದ್ದಪಡಿಸಿರುವ ಭವಿಷ್ಯ ನಿಧಿ ಯೋಜನೆ (ಪಶ್ಚಿಮ ಬಂಗಾಳ ಮಾದರಿ) ಯಂತೆ ಕಾನೂನು ಸ್ವರೂಪದಲ್ಲಿ ಜಾರಿಗೊಳಿಸಲು 2024–25 ನೇ ರಾಜ್ಯ ಬಜೆಟ್ನಲ್ಲಿ ಐದು ನೂರು ಕೋಟಿ ರೂ.ಗಳನ್ನು ಮೀಸಲಿಡಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಡಿ.ಎಂ.ಮಲಿಯಪ್ಪ, ಸಿ.ಕೆ.ಗೌಸ್ಪೀರ್, ಟಿ.ನಿಂಗಣ್ಣ, ಹೆಚ್.ಓ.ನಾಗರಾಜ್, ಟಿ.ತಿಪ್ಪೇಸ್ವಾಮಿ, ನಿಂಗಮ್ಮ ಇವರುಗಳು ಪ್ರತಿಭಟನೆಯಲ್ಲಿದ್ದರು.

# ಬೀದಿಬದಿ ವ್ಯಾಪಾರಿಗಳ ಮನವಿ



**ಚಿಕ್ಕಮಗಳೂರು:** ನಗರಸಭೆ ಆವರಣದಲ್ಲಿ ನಿರ್ಮಾಣ ಮಾಡಲಾಗಿರುವ ನೂತನ ಫುಡ್‌ಕೋರ್ಟ್‌ನ ಮಳಿಗೆಗಳಿಗೆ ನಿಗದಿಪಡಿಸಿರುವ ಮುಂಗಡ ಮತ್ತು ಬಾಡಿಗೆಯನ್ನು ಕಡಿಮೆ ಮಾಡಬೇಕು ಎಂದು ಒತ್ತಾಯಿಸಿ ನಗರದ ಬೀದಿಬದಿ ತಿಂಡಿಗಾಡಿ ವ್ಯಾಪಾರಸ್ಥರು ವ್ಯಾಪಾರ ಬಂದ್ ಮಾಡಿ ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್ ಹಾಗೂ ಪೌರಾಯುಕ್ತ ಬಿ.ಸಿ. ಬಸವರಾಜ್ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ವ್ಯಾಪಾರಸ್ಥರು, ಫುಡ್–ಕೋರ್ಟ್ ನಿರ್ಮಾಣ ಮಾಡುವಾಗ ತಿಂಡಿಗಾಡಿಯವರಿಗೆ ಅಲ್ಲಿ ಅವಕಾಶ ಮಾಡಿಕೊಡುವುದಾಗಿ ನಗರಸಭೆ ತಿಳಿಸಿತ್ತು. ಆದರೆ ಮುಂಗಡ ಅಥವಾ ಬಾಡಿಗೆ ವಿಚಾರ ಹೇಳಿರಲಿಲ್ಲ. ಆದರೆ ಈಗ 1.25 ಲಕ್ಷ ರೂ. ಮುಂಗಡ ಹಾಗೂ ಮಾಹೆಯಾನ 4300 ರೂ. ಬಾಡಿಗೆ ನಿಗಧಿಪಡಿಸಿದ್ದಾರೆ. ಇದು ಅತ್ಯಂತ ದುಬಾರಿಯಾಗಿದ್ದು, ತಿಂಡಿಗಾಡಿ ನಡೆಸುವವರು ಕಂಗಾಲಾಗಿದ್ದಾರೆ ಎಂದರು.

ಕಳೆದ 20 ವರ್ಷದಿಂದ ತಿಂಡಿಗಾಡಿ ವ್ಯಾಪಾರವನ್ನೇ ನಂಬಿ ಬದುಕುತ್ತಿದ್ದೇವೆ. ಈಗ ಏಕಾಏಕಿ ಲಕ್ಷಾಂತರ ರೂ. ಮುಂಗಡ ನೀಡಿ ಫುಡ್‌ಕೋರ್ಟ್‌ಗೆ ಸ್ಥಳಾಂತರಗೊಳ್ಳಬೇಕು ಎಂದರೆ ಕಷ್ಟವಾಗುತ್ತದೆ. ಈವರೆಗೆ ನಾವು ಕಸದ ನಿರ್ವಹಣೆಗೆ 10 ರೂ. ಮತ್ತು ಗಾಡಿ ನಿಲ್ಲಿಸಲು ಸುಂಕದ ರೀತಿ 20 ರೂ. ಸೇರಿ ಪ್ರತಿದಿನ 30 ರೂ.ಗಳನ್ನು ನಗರಸಭೆಗೆ ನೀಡುತ್ತಿದ್ದೇವೆ. ಈಗ ಒಮ್ಮೆಲೆ ಲಕ್ಷಾಂತರ ರೂ. ಮುಂಗಡ ಸಾವಿರಾರು ರೂ. ಬಾಡಿಗೆ ಜೊತೆಗೆ ಜಿಎಸ್‌ಟಿ ಎಲ್ಲವನ್ನೂ ಕಟ್ಟುವುದು ಸಾಧ್ಯವಾಗುವುದಿಲ್ಲ ಎಂದು ಅಳಲು ತೋಡಿಕೊಂಡರು.

ಸಾಲ ಮಾಡಿ ಮುಂಗಡ ಕಟ್ಟಿ ಎಂದು ನಗರಸಭೆಯವರು ಹೇಳುತ್ತಿದ್ದಾರೆ. ಒಂದು ಲಕ್ಷ ರೂ. ಸಾಲ ಕೇಳಿದ ಕೂಡಲೇ ಯಾರಾದರೂ ಕೊಡಲು ಮುಂದೆ ಬರುತ್ತಾರ ಎಂದು ಪ್ರಶ್ನಿಸಿದ ವ್ಯಾಪಾರಸ್ಥರು, ಈಗಾಗಲೇ ಕೇಂದ್ರ ಸರ್ಕಾರದಿಂದ ನೀಡುವ ಸಾಲವನ್ನು ಬಹುತೇಕರು ಪಡೆದಿದ್ದಾರೆ ಅದನ್ನು ತೀರಿಸುವುದೇ ಕಷ್ಟವಾಗಿದೆ. ಹೀಗಿರುವಾಗ ಮತ್ತೆ ಲಕ್ಷಾಂತರ ರೂ. ಸಾಲ ಮಾಡಲು ಸಾಧ್ಯವಿಲ್ಲ ಎಂದರು.

ಈ ಎಲ್ಲಾ ಕಾರಣದಿಂದ ಮುಂಗಡ 20 ಸಾವಿರ ರೂ. ಮಾಸಿಕ ಬಾಡಿಗೆ 2 ಸಾವಿರ ರೂ. ನಿಗಧಿಪಡಿಸಬೇಕು ಎಂದು ಮನವಿ ಮಾಡಿದ್ದೇವೆ, ನಗರಸಭೆ ಸಹಕರಿಸಬೇಕು ಎಂದು ತಿಳಿಸಿದರು.

ಮನವಿ ಸ್ವೀಕರಿಸಿದ ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್, ಈ ಹಿಂದೆ 2 ಲಕ್ಷ ರೂ. ಮುಂಗಡ 8 ಸಾವಿರ ರೂ ಮಾಸಿಕ ಬಾಡಿಗೆ ನಿಗಧಿಪಡಿಸಲಾಗಿತ್ತು. ಆದರೆ ತಿಂಡಿಗಾಡಿಯವರು ಹಲವು ಬಾರಿ ಮನವಿ ಮಾಡಿದ ಹಿನ್ನೆಲೆಯಲ್ಲಿ ಆಯುಕ್ತರೊಂದಿಗೆ ಜಿಲ್ಲಾಧಿಕಾರಿಗಳ ಬಳಿ ಹೋಗಿ ಮುಂಗಡವನ್ನು 1.20 ಲಕ್ಷ ರೂ.ಗೆ ಹಾಗೂ ಬಾಡಿಗೆ 4300 ನಿಗಧಿಪಡಿಸಿದ್ದೇವೆ. ಮಳಿಗೆಯನ್ನು ಸುಸಜ್ಜಿತವಾಗಿ ಮಾಡಿದ್ದೇವೆ. ಮುಂದೆ ಅನುಕೂಲವಾಗುತ್ತದೆ. ಮನವಿ ಬಗ್ಗೆ ಮತ್ತೆ ಪರಿಶೀಲಿಸುತ್ತೇವೆ, ಜಿಲ್ಲಾಧಿಕಾರಿಗಳ ಜೊತೆ ಪುನಾಃ ಚರ್ಚಿಸಿ ಕಡಿಮೆ ಮಾಡಿಸಲು ಪ್ರಯತ್ನಿಸುತ್ತೇವೆ ಎಂದು ಭರವಸೆ ನೀಡಿದರು.

# ಸಂವಿಧಾನ 75 ಬಾರಿ ತಿದ್ದುಪಡಿ ಮಾಡಿದವರು ಕಾಂಗ್ರೆಸ್‌ನವರು

**ಶಿವಮೊಗ್ಗ:** ಸಾಮಾಜಿಕ ನ್ಯಾಯ ಕೊಡಲು, ಸೌಲಭ್ಯ ಕೊಡಲು ಬಿಜೆಪಿ ಸಂವಿಧಾನಕ್ಕೆ ತಿದ್ದುಪಡಿ ತಂದರೆ, ಕಾಂಗ್ರೆಸ್‌ನವರು ಬೇರೆಯವರನ್ನು ಮಟ್ಟ ಹಾಕಲು ಹಾಗೂ ಅಭಿವ್ಯಕ್ತಿ ಸ್ವಾತಂತ್ರ್ಯ ಹೊಸಕಲು ಸಂವಿಧಾನಕ್ಕೆ ತಿದ್ದುಪಡಿ ತಂದವರು ಎಂದು ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ದೂರಿದರು.

ಸಿಟಿಜನ್ ಫಾರ್ ಸೋಷಿಯಲ್ ಜಸ್ಟೀಸ್ ವತಿಯಿಂದ ನಗರದ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಂಡಿದ್ದ ಸಂವಿಧಾನ ಬದಲಾಯಿಸಿದ್ದು ಯಾರು?, ಸಂವಿಧಾನ ಸನ್ಮಾನ ಮತ್ತು ಪುಸ್ತಕ ಲೋಕಾರ್ಪಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

106 ಬಾರಿ ಸಂವಿಧಾನ ಬದಲಾವಣೆಯಾಗಿದ್ದರಲ್ಲಿ 75 ಬಾರಿ ತಿದ್ದುಪಡಿ ಮಾಡಿದವರು ಕಾಂಗ್ರೆಸ್‌ನವರು. 356 ನೇ ವಿಧಿ ತಿದ್ದುಪಡಿ ಮಾಡಿದ್ದು ಕಾಂಗ್ರೆಸ್. ಇಂದಿರಾ ಗಾಂಧಿ ಒಂದೇ ದಿನ ಆರು ಸರ್ಕಾರ ಕಿತ್ತು ಹಾಕಿದ್ದರು. ಆದರೆ ನರೇಂದ್ರ ಮೋದಿಯವರು ಒಂದು ಸರ್ಕಾರವನ್ನು ಕಿತ್ತು ಹಾಕಿಲ್ಲ ಎಂದರು.

ಸಂವಿಧಾನವನ್ನು ವಿರೋಧ ಮಾಡುವ ಒಂದು ವರ್ಗವಿದೆ. ಅರ್ಬನ್ ನಕ್ಸಲ್ ಎನ್ನುವ ವರ್ಗ. ರಾಹುಲ್ ಗಾಂಧಿ ಸಂವಿಧಾನವನ್ನೇ ಓದಿಲ್ಲ. ಅವರು ಹಿಡಿದ ಪುಸ್ತಕದ 2 ನೇ ಪುಟದಲ್ಲಿ ಇಂದಿರಾಗಾಂಧಿ ಬಗ್ಗೆ ಟೀಕೆ ಇದೆ. ಆದರೂ ಹೊದಲ್ಲೆಲ್ಲಾ ಪುಸ್ತಕ ಹಿಡಿದಿರುತ್ತಾರೆ. ಅಪಪ್ರಚಾರದ ಮೂಲಕ ತಮ್ಮ ಸ್ಥಾನ ಭದ್ರ ಮಾಡಿಕೊಳ್ಳುವುದು ಕಾಂಗ್ರೆಸಿಗರಿಗೆ ನೆಹರೂ ಕಾಲದಿಂದಲೂ ಬಂದಿದೆ



ಎಂದು ಟೀಕಿಸಿದರು.

ಯಾರೋ ಮುಗ್ದರು ಟೀಕೆ ಮಾಡಿದರೆ ಒಪ್ಪಿಕೊಳ್ಳಬಹುದು. ಆದರೆ ಪ್ರಜ್ಞಾವಂತಿಕೆಯಿಂದಲೇ ಇವರು ಟೀಕೆ ಮಾಡುತ್ತಾರೆ. ಅಂಬೇಡ್ಕರ್ ಅವರನ್ನು ಯಾವುದೇ ಸಮಿತಿಯಲ್ಲಿ ಅಧ್ಯಕ್ಷರಾಗಲು ಬಿಡಲಿಲ್ಲ. 1954 ರ ಚುನಾವಣೆಯಲ್ಲಿ ಅಂಬೇಡ್ಕರ್ ಸೋಲಿಸಲು ಎರಡು ಬಾರಿ ನೆಹರೂ ಪ್ರಚಾರ–ಕ್ಕೆ ಹೋಗುತ್ತಾರೆ. ಅಂತಹ ಸಂತತಿಯವರಿಂದ ನಾವು ಉಪದೇಶ ಕೇಳಬೇಕಾಗಿದೆ. ಪೇಪರ್ ಪ್ಲಾಂಟ್ ಮಾಡುವುದರಲ್ಲಿ ಕಾಂಗ್ರೆಸಿಗರು ನಿಸ್ಸೀಮರು. ಹಿಂದು ಹಿತದ ಮಾತುಗಳನ್ನು ನೆಹರು ಮಾತನಾಡುವುದಿಲ್ಲ. ಜಮ್ಮು ಕಾಶ್ಮೀರದಲ್ಲಿ ಸಂವಿಧಾನವೇ ಅಪ್ಲೆ ಆಗುತ್ತಿಲ್ಲ. ನನ್ನ ಜನರ ಏಳಿಗೆಗೆ ಕೆಲಸ ಮಾಡಲು ಬಿಡುತ್ತಿಲ್ಲವೆಂದು ರಾಜೀನಾಮೆ ನೀಡಿದ್ದರು.

ದೆಹಲಿಯಲ್ಲಿ ಅಂಬೇಡ್ಕರ್ ಅಂತ್ಯಕ್ರಿಯೆಗೆ ಸಣ್ಣ ಜಾಗ ನೀಡದವರು ಅಗೌರವದಿಂದ ಮುಂಬೈಗೆ ಶವ ತೆಗೆದುಕೊಂಡು ಹೋಗಿ ಸಂಸ್ಕಾರ ಮಾಡಲಾಗುತ್ತದೆ. 6 ತಿಂಗಳ ಬಳಿಕ ಅಪಮಾನದ ಮೂಲಕ ಅವರ ಪತ್ನಿಯನ್ನು ಮನೆ ಖಾಲಿ ಮಾಡಿಸಲಾಯಿತು. ಇಂತಹವರು ಬಾಬಾ ಸಾಹೇಬರಿಗೆ ಗೌರವ ಕೊಡಲಿಲ್ಲ ಎನ್ನುತ್ತಾರೆ. ತಾನೇ ಇರುವ ಸಮಿತಿಗಳಲ್ಲಿ ಇಂದಿರಾ ಗಾಂಧಿ, ನೆಹರು ಭಾರತ ರತ್ನ ಕೊಟ್ಟುಕೊಳ್ಳುತ್ತಾರೆ. ಆಗ ಅಂಬೇಡ್ಕರ್ ನೆನಪೇ ಆಗೋಲ್ಲ. ಒಂದೇ ಒಂದು ಪ್ರಶಸ್ತಿ ಪುರಸ್ಕಾರ ನೀಡದವರು ಬಿಜೆಪಿಯವರಿಗೆ ಪಾಠ ಹೇಳುತ್ತಿದ್ದಾರೆ. ಬಾಬಾ ಯಾವ ಆಶಯಕ್ಕೆ ಸಂವಿಧಾನ ರಚನೆ ಮಾಡಿದರೋ ಆ ಉದ್ದೇಶಕ್ಕೆ ವಿರುದ್ಧವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಯಾವುದೇ ಒಂದು ಪುಸ್ತಕ ಹಿಡಿದಿರಬೇಕಾದರೆ ಬದ್ಧತೆ ಇರಬೇಕು. ಆದರೆ ಬದ್ಧತೆ ಇಲ್ಲದೆ ಇರುವವರು ಭಂಡರು. ಆ ಭಂಡತನವೇ ಇಂದು ಪ್ರದರ್ಶನವಾಗುತ್ತಿದೆ. ಪ್ರಜಾಪ್ರಭುತ್ವದಲ್ಲಿ ಇದೇ ಸರ್ವೋಚ್ಚ ಎಂದು ಮಾಡಲಾಗದು. 370 ನೇ ವಿಧಿ ವಾಪಸ್ ಪಡೆಯುವುದು ಹೇಗೆ ಎಂಬುದನ್ನು ಸಂವಿಧಾನದಲ್ಲಿ ಅಂಬೇಡ್ಕರ್ ಅಳವಡಿಸಿದ್ದರು. ಹೀಗಾಗಿ ಅದನ್ನು ವಾಪಸ್ ಪಡೆಯಲು ಸಾಧ್ಯವಾಯಿತು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಸದ ಕೋಟ ಶ್ರೀನಿವಾಸ್ ಪೂಜಾರಿ, ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿ, ಸಂವಿಧಾನವನ್ನೇ ಕತ್ತಲಲ್ಲಿ ಇಟ್ಟಿದ್ದರು. ತಮ್ಮ ರಕ್ಷಣೆಗಾಗಿಯೇ ಸಂವಿಧಾನ ಬದಲಾವಣೆ ಮಾಡಲಾಗಿತ್ತು. ಶಬಾನ್ ಅಂತಹ ಹೆಣ್ಣು ಮಗಳಿಗೆ ನ್ಯಾಯ ಕೊಡಲು ಆಗದೆ ಸುಪ್ರೀಂ ಕೋರ್ಟ್ ತೀರ್ಪನ್ನೇ ಬದಲಾಯಿಸಿದ್ದರು. ಸಂವಿಧಾನ ತಿದ್ದುಪಡಿ ಮಾಡಿದ್ದ ಪುಣ್ಯಾತ್ಮರು ಇಂದು ಸಂವಿಧಾನ ರಕ್ಷಣೆ ಮಾಡುವುದಾಗಿ ಹೇಳುತ್ತಿದ್ದಾರೆ. ತ್ರಿವಳಿ ತಲಾಖ್ ರದ್ದು ಮಾಡಿದ್ದರಿಂದಾಗಿ ಇಂದು ಮುಸ್ಲಿಂ ಮಹಿಳೆಯರು ಕೃತಜ್ಞತೆ ಸಲ್ಲಿಸುತ್ತಿದ್ದಾರೆ. ಕಾಶ್ಮೀರದಲ್ಲಿ ತ್ರಿವರ್ಣ ಧ್ವಜ ಹಾರಾಡುವಂತೆ ಮಾಡಿದ್ದು ಸಂವಿಧಾನ ರಕ್ಷಣೆಯಲ್ಲವೆ ? ಸ್ವಾರ್ಥಕ್ಕಾಗಿ ಕೆಲವರು ಸಂವಿಧಾನ ತಿದ್ದುಪಡಿ ಮಾಡಿದರೆ, ಕೆಲವರು ರಾಷ್ಟ್ರಕ್ಕಾಗಿ ಸಂವಿಧಾನ ತಿದ್ದುಪಡಿ ಮಾಡಿದರು ಎಂದರು.

ಎಸ್.ಸಿ. ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಮಹೇಂದ್ರ ಕೌತಾಳ ಪುಸ್ತಕ ಕುರಿತು ಮಾತನಾಡಿ, 1926 ರಲ್ಲಿ ಚೌಡನಕೆರೆ ಹೋರಾಟ ಮಾಡಿದರು. 1930 ರಲ್ಲಿ ಪಾಲರಾಮ ಹೋರಾಟ ನಡೆಸಿದ್ದರು. ಅದರಲ್ಲಿ ಬ್ರಾಹ್ಮಣರನ್ನು ಸೇರಿಸಿಕೊಂಡು ಹೋರಾಟ ಮಾಡಿದ್ದರು. ರಾಮನ ನಡವಳಿಕೆ ಹಿಂದುಗಳಿಗೆ ಬರಬೇಕೆಂದು ಬಯಸಿದ್ದರು. ಬಾಬಾಸಾಹೇಬರ ಕನಸನ್ನು ನನಸು ಮಾಡಿದ್ದು ಸಂಘ. ಜಮ್ಮು ಕಾಶ್ಮೀರದಲ್ಲಿ ಸಂವಿಧಾನ ಜಾರಿಗೊಳಿಸಬೇಕೆಂದು ಹೇಳಿದವರು ಶಾಮಪ್ರಕಾಶ್ ಮುಖರ್ಜಿ. ಕಾಂಗ್ರೆಸ್ ಸಂವಿಧಾನವನ್ನು ಅಪಾಯಕ್ಕೆ ಸಿಲುಕಿಸಲಿದೆ ಎಂಬುದನ್ನು ಅಂದೇ ಅಂಬೇಡ್ಕರ್ ಹೇಳಿದ್ದಾರೆ ಎಂದರು.

ಡಾ.ಭೀಮಪ್ಪ ರಾಮಪ್ಪ ತಹಶೀಲ್ದಾರ್ ಅಧ್ಯಕ್ಷತೆ ವಹಿಸಿದ್ದರು. ಪುಸ್ತಕ ಲೇಖಕ ಪಿ ವಿಕಾಸ್ ಕುಮಾರ್, ಪ್ರಮುಖರಾದ ಪರಶುರಾಮ್ ಮತ್ತಿತರರು ಇದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**